83	ಮಧುಗಿರಿ ಟೌನ್, 14ನೇ ವಾರ್ಡ್, ರಾಜೀವ್ ಗಾಂಧಿ ಕ್ರೀಡಾಂಗಣದ ಪಕ್ಕ ಹಫೀಜ್ ರವರ ಮನೆ ಹತ್ತಿರ ಪಂಪ್ ಸೆಟ್ ಜೊತೆಗೆ ಕೊಳವೆ ಬಾವಿ.	ಮಧುಗಿರಿ ಟೌನ್, 14ನೇ ವಾರ್ಡ್, ರಾಜೀವ್ ಗಾಂಧಿ ಕ್ರೀಡಾಂಗಣದ ಪಕ್ಕ ಹಫೀಜ್ ರವರ ಮನೆ ಹತ್ತಿರ ಪಂಪ್ ಸೆಟ್ ಜೊತೆಗೆ ಕೊಳವೆ ಬಾವಿ.	5.00	5.00	ಕೆ.ಆರ್.ಐ.ಡಿ.ಎಲ್.	ಪ್ರಗತಿಯಲ್ಲಿದೆ	
84	ಮಧುಗಿರಿ ಟೌನ್, 23ನೇ ವಾರ್ಡ್, ಕರಿಡೀಪುರ ಮಸೀದಿ ಹತ್ತಿರ ಸುಲ್ತಾನ ರವರ ಮನೆ ಹತ್ತಿರ ಪಂಪ್ ಸೆಟ್ ಜೊತೆಗೆ ಕೊಳವೆ ಬಾವಿ.	ಮಧುಗಿರಿ ಟೌನ್, 23ನೇ ವಾರ್ಡ್, ಕರಿಡೀಪುರ ಮಸೀದಿ ಹತ್ತಿರ ಸುಲ್ತಾನ ರವರ ಮನೆ ಹತ್ತಿರ ಪಂಪ್ ಸೆಟ್ ಜೊತೆಗೆ ಕೊಳವೆ ಬಾವಿ.	5.00	5.00	ಕೆ.ಆರ್.ಐ.ಡಿ.ಎಲ್.	ಪ್ರಗತಿಯಲ್ಲಿದೆ	
85	ಮಧುಗಿರಿ ಟೌನ್, 9ನೇ ವಾರ್ಡ್, ಎ.ಸಿ. ಕಛೇರಿ ಹಿಂಭಾಗ ಖಾಸೀಂ ಸಾಬ್ ರವರ ಮನೆ ಹತ್ತಿರ ಪಂಪ್ ಸೆಟ್ ಜೊತೆಗೆ ಕೊಳವೆ ಬಾವಿ.	ಮಧುಗಿರಿ ಟೌನ್, 9ನೇ ವಾರ್ಡ್, ಎ.ಸಿ. ಕಛೇರಿ ಹಿಂಭಾಗ ಖಾಸೀಂ ಸಾಬ್ ರವರ ಮನೆ ಹತ್ತಿರ ಪಂಪ್ ಸೆಟ್ ಜೊತೆಗೆ ಕೊಳವೆ ಬಾವಿ.	5.00	5.00	ಕೆ.ಆರ್.ಐ.ಡಿ.ಎಲ್.	ಪೂರ್ಣಗೊಂಡಿದೆ	
86	ಮಧುಗಿರಿ ಟೌನ್, 3ನೇ ವಾರ್ಡ್ ನೂರ್ ಅಹಮದ್ ಮನೆ ಹತ್ತಿರ ಕೊಳವೆ ಬಾವಿ ಮತ್ತು ಪಂಪ್ ಸೆಟ್	ಮಧುಗಿರಿ ಟೌನ್, 3ನೇ ವಾರ್ಡ್ ನೂರ್ ಅಹಮದ್ ಮನೆ ಹತ್ತಿರ ಕೊಳವೆ ಬಾವಿ ಮತ್ತು ಪಂಪ್ ಸೆಟ್	5.00	5.00	ಕೆ.ಆರ್.ಐ.ಡಿ.ಎಲ್.	ಪ್ರಗತಿಯಲ್ಲಿದೆ	
87	ಮಧುಗಿರಿ ನಗರದ ಮೌಲಾನಾ ಆಜಾದ್ ಶಾಲೆಯ ಹತ್ತಿರ ಬೋರ್‌ವೆಲ್ ಮತ್ತು ಶುದ್ಧ ಕುಡಿಯುವ ನೀರಿನ ಘಟಕ	ಮಧುಗಿರಿ ನಗರದ ಮೌಲಾನಾ ಆಜಾದ್ ಶಾಲೆಯ ಹತ್ತಿರ ಬೋರ್‌ವೆಲ್ ಮತ್ತು ಶುದ್ಧ ಕುಡಿಯುವ ನೀರಿನ ಘಟಕ	20.00	20.00	ಕೆ.ಆರ್.ಐ.ಡಿ.ಎಲ್.	ಪೂರ್ಣಗೊಂಡಿದೆ	

ನಿರ್ದೇಶಕರು
ಅಲ್ಪಸಂಖ್ಯಾತರ ನಿರ್ದೇಶನಾಲಯ
ಬೆಂಗಳೂರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1520
ಮಾನ್ಯ ವಿಧಾನ ಸಭೆಯ ಸದಸ್ಯರ ಹೆಸರು : ಶ್ರೀ ಶ್ರೀನಿವಾಸ್ ಎಂ
ಉತ್ತರಿಸಬೇಕಾದ ದಿನಾಂಕ : 10.03.2021
ಉತ್ತರಿಸುವವರು : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಚಿವರು.

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಕಳೆದ 3 ವರ್ಷಗಳಲ್ಲಿ ಸರ್ಕಾರ ಮಂಡ್ಯ ಜಿಲ್ಲೆಯಲ್ಲಿ ವಿಕಲಚೇತನರಿಗೆ ಒದಗಿಸಿರುವ ಸೌಲಭ್ಯಗಳಾವುವು? ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ವಿವರ ನೀಡುವುದು).	ವಿಕಲಚೇತನರಿಗಾಗಿ ಇಲಾಖೆಯಿಂದ ಒದಗಿಸಲಾಗುತ್ತಿರುವ ಎಲ್ಲಾ ಯೋಜನೆಗಳನ್ನು ಮಂಡ್ಯ ವಿಧಾನ ಸಭಾ ಕ್ಷೇತ್ರದಲ್ಲಿಯೂ ಸಹ ಅನುಷ್ಠಾನಗೊಳ್ಳುತ್ತಿದೆ. ವಿಕಲಚೇತನರಿಗಾಗಿ ಇಲಾಖೆಯಿಂದ ಒದಗಿಸುತ್ತಿರುವ ಸೌಲಭ್ಯಗಳ ವಿವರವನ್ನು **ಅನುಬಂಧ-01** ರಲ್ಲಿ ಒದಗಿಸಲಾಗಿದೆ.
ಆ)	ಕಳೆದ 3 ವರ್ಷಗಳಲ್ಲಿ ಸರ್ಕಾರ ಮಂಡ್ಯ ಜಿಲ್ಲೆಯ ಹಿರಿಯ ನಾಗರಿಕರಿಗೆ ಒದಗಿಸಿರುವ ಸೌಲಭ್ಯಗಳು ಯಾವುವು? (ಕ್ಷೇತ್ರವಾರು ವಿವರ ನೀಡುವುದು)	ಹಿರಿಯ ನಾಗರಿಕರಿಗಾಗಿ ಇಲಾಖೆಯಿಂದ ಒದಗಿಸಲಾಗುತ್ತಿರುವ ಎಲ್ಲಾ ಯೋಜನೆಗಳು ಮಂಡ್ಯ ವಿಧಾನ ಸಭಾ ಕ್ಷೇತ್ರಗಳಲ್ಲಿಯೂ ಸಹ ಅನುಷ್ಠಾನಗೊಳ್ಳುತ್ತಿದೆ. ಹಿರಿಯ ನಾಗರಿಕರಿಗೆ ಒದಗಿಸಿರುವ ಸೌಲಭ್ಯಗಳ ವಿವರವನ್ನು **ಅನುಬಂಧ-02** ರಲ್ಲಿ ಒದಗಿಸಲಾಗಿದೆ.
ಇ)	ಕಳೆದ 3 ವರ್ಷಗಳಿಂದ ಮಂಡ್ಯ ವಿಧಾನಸಭಾ ಕ್ಷೇತ್ರದಲ್ಲಿ ವಿಕಲಚೇತನರ ಆಶ್ರಮಗಳಿಗೆ, ಅನಾಥಾಶ್ರಮಗಳಿಗೆ, ವೃದ್ಧಾಶ್ರಮಗಳಿಗೆ ಸರ್ಕಾರದಿಂದ ಒದಗಿಸಿರುವ ಸೌಲಭ್ಯ ಗಳಾವುವು ಹಾಗೂ ಬಿಡುಗಡೆ ಮಾಡಿರುವ ಅನುದಾನವೆಷ್ಟು?	ಕಳೆದ ಮೂರು ವರ್ಷಗಳಲ್ಲಿ ಮಂಡ್ಯ ವಿಧಾನಸಭಾ ಕ್ಷೇತ್ರಗಳಲ್ಲಿ ವಿಕಲಚೇತನರ ಆಶ್ರಮಗಳಿಗೆ, ಅನಾಥಾಶ್ರಮಗಳಿಗೆ ಇಲಾಖೆಯಿಂದ ಪ್ರತ್ಯೇಕವಾಗಿ ಯಾವುದೇ ಯೋಜನೆಗಳನ್ನು ಒದಗಿಸಲಾಗುತ್ತಿಲ್ಲ. ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಹಿರಿಯ ನಾಗರಿಕರಿಗಾಗಿ ಜಿಲ್ಲಾ ವಲಯದಲ್ಲಿ ವೃದ್ಧಾಶ್ರಮವನ್ನು ನಡೆಸುತ್ತಿದ್ದು, ಕಳೆದ ಮೂರು ವರ್ಷಗಳಲ್ಲಿ ಮಂಡ್ಯ ಜಿಲ್ಲೆಯಲ್ಲಿರುವ ಒಂದು ಹಿರಿಯ ನಾಗರಿಕರ ವೃದ್ಧಾಶ್ರಮಕ್ಕೆ (ತಲಾ ರೂ.8.00 ಲಕ್ಷದಂತೆ) ರೂ.24.00 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.

ಸಂಖ್ಯೆ: ಮಮಇ 73 ಪಿಹೆಚ್‌ಪಿ 2021

(ಶಶಿಕಲಾ ಅ. ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ
ಇಲಾಖೆ ಸಚಿವರು

ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಶ್ರೀನಿವಾಸ್ ಎಂ. ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:1520ಕ್ಕೆ

ಅನುಬಂಧ-01

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ ವಿಕಲಚೇತನರಿಗಾಗಿ ಜಾರಿಗೊಳಿಸುತ್ತಿರುವ ಯೋಜನೆಗಳು

(ಎ) ಶೈಕ್ಷಣಿಕ:-

1) ಶ್ರವಣದೋಷವುಳ್ಳ ಮಕ್ಕಳಿಗಾಗಿ ವಸತಿಯುತ ಶಾಲೆಗಳು:

ಶ್ರವಣದೋಷವುಳ್ಳ ಮಕ್ಕಳಿಗಾಗಿ ಮೈಸೂರು, ಕಲಬುರ್ಗಿ, ಬಳ್ಳಾರಿ, ಬೆಳಗಾವಿ ಜಿಲ್ಲೆಗಳಲ್ಲಿ 4 ಕಿವುಡು ಮಕ್ಕಳ ವಸತಿ ಶಾಲೆಗಳನ್ನು ಇಲಾಖಾವತಿಯಿಂದ ನಡೆಸಲಾಗುತ್ತಿದೆ.ಈ ಶಾಲೆಗಳಲ್ಲಿ ಮಕ್ಕಳಿಗೆ ಉಚಿತ ವಸತಿ, ಊಟ ಮತ್ತು ಶಿಕ್ಷಣವನ್ನು ನೀಡಲಾಗುತ್ತಿದೆ.ಈ ಪೈಕಿ ಶ್ರವಣದೋಷವುಳ್ಳ ಹೆಣ್ಣು ಮಕ್ಕಳಿಗಾಗಿ ಬೆಳಗಾವಿಯಲ್ಲಿ ಪ್ರತ್ಯೇಕ ವಸತಿ ಶಾಲೆ ಇರುತ್ತದೆ.

2) ಅಂಧ ಮಕ್ಕಳಿಗಾಗಿ ವಸತಿಯುತ ಶಾಲೆಗಳು:

ಅಂಧ ಮಕ್ಕಳಿಗಾಗಿ ಕಲಬುರ್ಗಿ, ಮೈಸೂರು, ದಾವಣಗೆರೆ ಹಾಗೂ ಹುಬ್ಬಳ್ಳಿಯಲ್ಲಿ ವಿಶೇಷ ಶಾಲೆಗಳನ್ನು ನಡೆಸಲಾಗುತ್ತಿದೆ.ಈ ಶಾಲೆಗಳಲ್ಲಿ ದೃಷ್ಟಿದೋಷವುಳ್ಳ ಮಕ್ಕಳಿಗೆ ಉಚಿತ ಊಟ, ವಸತಿ ಮತ್ತು ಶಿಕ್ಷಣವನ್ನು ನೀಡಲಾಗುತ್ತಿದೆ.ಈ ಪೈಕಿ ದೃಷ್ಟಿದೋಷವುಳ್ಳ ಹೆಣ್ಣು ಮಕ್ಕಳಿಗಾಗಿ ದಾವಣಗೆರೆಯಲ್ಲಿ ಪ್ರತ್ಯೇಕ ವಸತಿ ಶಾಲೆ ಇರುತ್ತದೆ.

3) 1982ರ ರಾಜ್ಯ ಅನುದಾನ ಸಂಹಿತೆಯಡಿ ನಡೆಯುತ್ತಿರುವ ವಿಶೇಷ ಶಾಲೆಗಳು:

1982ರ ರಾಜ್ಯ ಅನುದಾನ ಸಂಹಿತೆಯಡಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ 34 ವಿಶೇಷ ಶಾಲೆ/ ತರಬೇತಿ ಕೇಂದ್ರಗಳನ್ನು ದೈಹಿಕ, ಅಂಧ, ಶ್ರವಣದೋಷ ಹಾಗೂ ಬುದ್ಧಿಮಾಂದ್ಯ ಮಕ್ಕಳಿಗಾಗಿ ನಡೆಸಲಾಗುತ್ತಿದೆ.ರಾಜ್ಯ ಸರ್ಕಾರದಿಂದ ಅನುದಾನವನ್ನು ಜಿಲ್ಲಾ ಪಂಚಾಯತ್ ಮೂಲಕ ಬಿಡುಗಡೆ ಮಾಡಲಾಗುತ್ತಿದೆ.

(ಅ) ವಿಕಲಚೇತನರಿಗೆ ವೃತ್ತಿ ತರಬೇತಿ ಕೇಂದ್ರಗಳು:

ಈ ಯೋಜನೆಯಡಿ ವಿವಿಧ ರೀತಿಯ ವಿಕಲಚೇತನರಿಗೆ ವೃತ್ತಿ ತರಬೇತಿಯನ್ನು ನೀಡುವುದಾಗಿದೆ.1982ರ ರಾಜ್ಯ ಅನುದಾನ ಸಂಹಿತೆಯಡಿ 5 ವೃತ್ತಿ ತರಬೇತಿ ಕೇಂದ್ರಗಳನ್ನು ರಾಜ್ಯ ಸಹಾಯಾನುದಾನದಡಿ ಬೆಂಗಳೂರಿನಲ್ಲಿ 03 ಮತ್ತು ಮೈಸೂರಿನಲ್ಲಿ 02 ಹಾಗೂ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಂದು ವಾಕ್ ಶ್ರವಣ ಕೇಂದ್ರವನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದೆ. ವೃತ್ತಿ ತರಬೇತಿ ಕೇಂದ್ರಗಳಲ್ಲಿ ವಿವಿಧ ರೀತಿಯ ವಿಕಲಚೇತನರಿಗೆ ಫಿಟ್ಟರ್, ಟರ್ನರ್, ಸರಳ ಇಂಜಿನಿಯರಿಂಗ್, ಬೆತ್ತ, ಹಗ್ಗ, ಚಾಪೆ ಹೆಣೆಯುವುದು ಹಾಗೂ ಪ್ಲಾಸ್ಟಿಕ್ ಮೌಲ್ಡಿಂಗ್ ತರಬೇತಿಯನ್ನು ನೀಡಲಾಗುತ್ತಿದೆ.ಪ್ರತಿ ತರಬೇತಿ ಕೇಂದ್ರದಲ್ಲಿ ವಾರ್ಷಿಕ 25 ಫಲಾನುಭವಿಗಳು ತರಬೇತಿ ಪಡೆಯಲು ಅವಕಾಶವಿರುತ್ತದೆ.

(ಆ)ಅಂಗವಿಕಲ ಮಕ್ಕಳ ಕೇಂದ್ರೀಕೃತ ವಿಶೇಷ ಶೈಕ್ಷಣಿಕ ಯೋಜನೆ:

ಈ ಯೋಜನೆಯಡಿ ಬುದ್ಧಿಮಾಂದ್ಯ (ಸೆರಬ್ರಲ್ ಪಾಲ್ಸಿ, ಆಟಿಸಂ), ದೃಷ್ಟಿದೋಷ, ಶ್ರವಣದೋಷವುಳ್ಳ ಮಕ್ಕಳಿಗಾಗಿ ವಸತಿಯುತ ಹಾಗೂ ವಸತಿರಹಿತ ಶಾಲೆಗಳು ಸೇರಿದಂತೆ ಒಟ್ಟು 138 ವಿಶೇಷ ಶಾಲೆಗಳು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಯುತ್ತಿವೆ. ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಶ್ರವಣದೋಷವುಳ್ಳ ಹಾಗೂ ದೃಷ್ಟಿದೋಷವುಳ್ಳ ಮಕ್ಕಳ ವಸತಿಯುತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.6200/- ರಂತೆ ಹಾಗೂ ವಸತಿರಹಿತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.5200/- ರಂತೆ ಹಾಗೂ ಬುದ್ಧಿಮಾಂದ್ಯ ಮಕ್ಕಳ ಮಕ್ಕಳ ವಸತಿಯುತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.6800/- ರಂತೆ ಹಾಗೂ ವಸತಿರಹಿತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ. 6000/- ರಂತೆ ವರ್ಷದಲ್ಲಿ 10 ತಿಂಗಳ ಅವಧಿಗೆ ಅನುದಾನವನ್ನು ಮಂಜೂರು

ಮಾಡಲಾಗುತ್ತಿದೆ.ಈ ಅನುದಾನದಲ್ಲಿ ಶಿಕ್ಷಕರ ಗೌರವಧನ, ಮಕ್ಕಳ ಆಹಾರ ವೆಚ್ಚ, ಕಟ್ಟಡದ ಬಾಡಿಗೆ ಹಾಗ ನಿರ್ವಹಣಾ ವೆಚ್ಚ, ಸಮವಸ್ತ್ರ, ವೈದ್ಯಕೀಯ ವೆಚ್ಚ ಹಾಗೂ ಸಾದಿಲ್ವಾರು ವೆಚ್ಚಗಳು ಒಳಗೊಂಡಿರುತ್ತವೆ.

(ಇ) ಕೇಂದ್ರ ಸರ್ಕಾರದ ದೀನ್‌ದಯಾಳ್ ಪುನರ್ವಸತಿ ಯೋಜನೆಯಡಿ 8 ಸ್ವಯಂ ಸೇವಾ ಸಂಸ್ಥೆಗಳ ಮೂಲಕ ವಿಶೇಷ ಶಾಲೆ /ವೃತ್ತಿ ತರಬೇತಿ ಕೇಂದ್ರಗಳು ನಡೆಯುತ್ತಿದ್ದು, ಸದರಿ ಶಾಲೆ ಹಾಗೂ ತರಬೇತಿ ಕೇಂದ್ರಗಳಿಗೆ ಕೇಂದ್ರ ಸರ್ಕಾರದಿಂದ ಶೇ.90ರಷ್ಟು ಅನುದಾನವನ್ನು ಮಂಜೂರು ಮಾಡಲಾಗುತ್ತಿದ್ದು, ಉಳಿದ ಶೇ.10ರಷ್ಟು ವೆಚ್ಚವನ್ನು ಸಂಸ್ಥೆಯವರು ಭರಿಸಬೇಕಾಗಿರುತ್ತದೆ.

4) ಅಂಗವಿಕಲ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮತ್ತು ಪ್ರೋತ್ಸಾಹಧನ:
ಈ ಯೋಜನೆಯಡಿ ಒಂದನೇ ತರಗತಿಯಿಂದ ಸ್ನಾತಕೋತ್ತರ ಪದವಿಯವರೆಗೆ ವ್ಯಾಸಂಗ ಮಾಡುತ್ತಿರುವ ಅರ್ಹ ವಿಕಲಚೇತನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನವನ್ನು ಆಯಾ ಜಿಲ್ಲಾ ಕಛೇರಿಗಳ ಮೂಲಕ ಮಂಜೂರು ಮಾಡಲಾಗುತ್ತಿದೆ. 2001-02ನೇ ಸಾಲಿನಿಂದ ಈ ಯೋಜನೆಯ ಫಲಾನುಭವಿಗಳಿಗೆ ಆದಾಯ ಮಿತಿಯಿಂದ ವಿನಾಯಿತಿಗೊಳಿಸಲಾಗಿದೆ.

5) ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ಯೋಜನೆ:
ಸಾರ್ವತ್ರಿಕ ಪರೀಕ್ಷೆಗಳಲ್ಲಿ ಶೇಕಡ 60 ಕ್ಕಿಂತಲೂ ಹೆಚ್ಚಿನ ಅಂಕಗಳನ್ನು ಪಡೆದ ಪ್ರತಿಭಾನ್ವಿತ ವಿಕಲಚೇತನ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ನೀಡುವ ಯೋಜನೆ ಇದಾಗಿದೆ.ಈ ಯೋಜನೆಯನ್ನು 2001-02ನೇ ಸಾಲಿನಿಂದ ಬಿ.ಎಡ್, ಎಂ.ಎಡ್. ಮತ್ತು ಟಿ.ಸಿ.ಹೆಚ್. ವಿದ್ಯಾರ್ಥಿಗಳಿಗೂ ವಿಸ್ತರಿಸಲಾಗಿದೆ.

6) ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಶುಲ್ಕ ಮರುಪಾವತಿ:

ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಎಸ್.ಎಸ್.ಎಲ್.ಸಿ ನಂತರ ಉನ್ನತ ಶಿಕ್ಷಣ, ವೃತ್ತಿ ಶಿಕ್ಷಣ, ತಾಂತ್ರಿಕ ಶಿಕ್ಷಣ, ಸ್ನಾತಕೋತ್ತರ, ಔದ್ಯೋಗಿಕ ಶಿಕ್ಷಣಗಳಿಗೆ ನಿಯಮಾನುಸಾರ ಆಯ್ಕೆಯಾಗುವ ವಿದ್ಯಾರ್ಥಿಗಳಿಗೆ ಸರ್ಕಾರವು ನಿಗದಿಪಡಿಸಿರುವ ಪರೀಕ್ಷಾ ಶುಲ್ಕ ಬೋಧನಾ ಶುಲ್ಕ, ಪ್ರಯೋಗಾಲಯ ಶುಲ್ಕ, ಕ್ರೀಡಾ ಶುಲ್ಕ ಹಾಗೂ ಗ್ರಂಥಾಲಯ ಶುಲ್ಕಗಳನ್ನು ಮರುಪಾವತಿಸುವ ಯೋಜನೆಯನ್ನು 2013-14ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಸೌಲಭ್ಯ ಪಡೆಯುವ ವಿದ್ಯಾರ್ಥಿಗಳಿಗೆ ಯಾವುದೇ ಆದಾಯಮಿತಿ ಇರುವುದಿಲ್ಲ. ವೈದ್ಯಕೀಯ ಮಂಡಳಿಯವರು ಶಿಫಾರಸ್ಸು ಮಾಡಿರುವ ವಿಕಲಚೇತನ ಅಭ್ಯರ್ಥಿಗಳು ಮಾತ್ರ ಈ ಯೋಜನೆಯಡಿ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ

7) ಬ್ರೈಲ್ ಮುದ್ರಣಾಲಯ:
ದೃಷ್ಟಿದೋಷವುಳ್ಳ ಮಕ್ಕಳಿಗೆ ಬೇಕಾಗುವ ಬ್ರೈಲ್ ಪುಸ್ತಕಗಳನ್ನು ಮುದ್ರಿಸಿ ಸಂಬಂಧಪಟ್ಟ ಅಂಧರ ಶಾಲೆಗಳಿಗೆ ಮೈಸೂರಿನಲ್ಲಿರುವ ಬ್ರೈಲ್ ಮುದ್ರಣಾಲಯದ ಮೂಲಕ ಉಚಿತವಾಗಿ ಸರಬರಾಜು ಮಾಡಲಾಗುತ್ತಿದೆ.

8) ವಿಶೇಷ ಶಿಕ್ಷಣ ತರಬೇತಿ ಕೇಂದ್ರ ಯೋಜನೆ:
ದೃಷ್ಟಿದೋಷವುಳ್ಳ ಹಾಗೂ ಶ್ರವಣದೋಷವುಳ್ಳ ವಿದ್ಯಾರ್ಥಿಗಳಿಗೆ ಬೋಧಿಸುವ ಶಿಕ್ಷಕರಿಗೆ ವಿಶೇಷ ಶಿಕ್ಷಣ ನೀಡಲು ತಲಾ ಒಂದರಂತೆ ವಿಶೇಷ ಶಿಕ್ಷಕರ ತರಬೇತಿ ಕೇಂದ್ರವನ್ನು ಮೈಸೂರಿನಲ್ಲಿ ನಡೆಸುತ್ತಿದ್ದು, ಪ್ರತಿ ವರ್ಷ ಪ್ರತಿ ಕೇಂದ್ರದಲ್ಲಿ 25 ಪ್ರಶಿಕ್ಷಣಾರ್ಥಿಗಳು ತರಬೇತಿ ಪಡೆಯಲು ಅವಕಾಶವಿರುತ್ತದೆ.

9) ಮಾನಸಿಕ ಅಸ್ವಸ್ಥ, ಸೆರಬ್ರಲ್ ಪಾಲ್ಸಿ, ಆಟಿಸಂ ಮಕ್ಕಳ ಹಗಲು ಯೋಗಕ್ಷೇಮ ಕೇಂದ್ರಗಳು: ಸೆರಬ್ರಲ್ ಪಾಲ್ಸಿ, ಆಟಿಸಂ, ಮಾನಸಿಕ ಅಸ್ವಸ್ಥ ಹಾಗೂ ತೀವ್ರತರದ ಅಂಗವೈಕಲ್ಯತೆ ಹೊಂದಿರುವ ಮೂರರಿಂದ 25 ವರ್ಷದ ಒಳಗಿನ ಮಕ್ಕಳಿಗಾಗಿ 02 ಹಗಲು ಯೋಗಕ್ಷೇಮ ಕೇಂದ್ರಗಳನ್ನು ಬೆಂಗಳೂರು ನಗರ ಜಿಲ್ಲೆಯಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸುತ್ತಿದ್ದು, ಪ್ರತಿ ಕೇಂದ್ರದಲ್ಲಿ 25 ಮಕ್ಕಳನ್ನು ದಾಖಲಿಸಲು ಅವಕಾಶವಿದ್ದು, ಪ್ರತಿ ಮಗುವಿಗೆ ಮಾಸಿಕ ರೂ.10,000/-ಗಳಂತೆ ವಾರ್ಷಿಕ 25.00 ಲಕ್ಷಗಳನ್ನು ಮಂಜೂರು ಮಾಡಲಾಗುತ್ತಿದೆ.

(ಬಿ) ಉದ್ಯೋಗ ಮತ್ತು ತರಬೇತಿ:

1) ಅಂಗವಿಕಲ ಪುರುಷ ಹಾಗೂ ಮಹಿಳೆಯರ ವಸತಿನಿಲಯ:

ಬೆಂಗಳೂರಿನ ಕೆಂಗೇರಿಯಲ್ಲಿ ವಿಕಲಚೇತನ ಮಹಿಳೆ ಮತ್ತು ವಿಕಲಚೇತನ ಪುರುಷರಿಗಾಗಿ ಅಂಗವಿಕಲ ಉದ್ಯೋಗಸ್ಥ ನೌಕರರು ಮತ್ತು ಪ್ರಶಿಕ್ಷಣಾರ್ಥಿಗಳಿಗಾಗಿ ಮಹಿಳೆಯರು ಹಾಗೂ ಪುರುಷರಿಗಾಗಿ ಪ್ರತ್ಯೇಕವಾದ ವಸತಿ ನಿಲಯವನ್ನು ಬೆಂಗಳೂರು ನಗರ ಜಿಲ್ಲೆಯಲ್ಲಿ ನಡೆಸಲಾಗುತ್ತಿದೆ. ಪ್ರಸ್ತುತ ಈ ಎರಡೂ ವಸತಿ ನಿಲಯಗಳು ಬೆಂಗಳೂರಿನ ಕೆಂಗೇರಿಯಲ್ಲಿ ನಡೆಯುತ್ತಿವೆ. ಪ್ರತಿ ವಸತಿ ನಿಲಯದಲ್ಲಿ 50 ನಿವಾಸಿಗಳನ್ನು ದಾಖಲಿಸಲು ಅವಕಾಶವಿರುತ್ತದೆ.

2) ಆಧಾರ ಯೋಜನೆ :

ವಿಕಲಚೇತನರು ಸ್ವಯಂ ಉದ್ಯೋಗ ಕೈಗೊಂಡು ಜೀವನ ಸಾಗಿಸಲು ಅನುಕೂಲವಾಗುವಂತೆ ಆಧಾರ ಎಂಬ ಸಾಲ ಯೋಜನೆಯನ್ನು ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳ ನೇತೃತ್ವದಲ್ಲಿ ಜಾರಿಗೊಳಿಸಲಾಗುತ್ತಿದೆ.ಈ ಯೋಜನೆಯಡಿ ರೂ.1.00 ಲಕ್ಷ ರೂ.ಗಳ ಸಹಾಯಧನವನ್ನು ನೀಡಲು ಅವಕಾಶವಿದ್ದು, ಇದರಲ್ಲಿ ಶೇ.50ರಷ್ಟು ಬಡ್ಡಿ ಸಹಿತವಾಗಿ ಬ್ಯಾಂಕ್ ಸಾಲ ಮತ್ತು ಶೇ.50ರಷ್ಟು ಸಹಾಯಧನ ಒದಗಿಸಲಾಗುವುದು.

3) ಗ್ರಾಮೀಣ ಪುನರ್ವಸತಿ ಯೋಜನೆ:

ಈ ಯೋಜನೆಯನ್ನು ರಾಜ್ಯದ ಎಲ್ಲಾ 30 ಜಿಲ್ಲೆಗಳ 176 ತಾಲ್ಲೂಕುಗಳಲ್ಲಿ ಅನುಷ್ಠಾನ ಗೊಳಿಸಲಾಗುತ್ತಿದೆ.ಪ್ರತಿ ಗ್ರಾಮ ಪಂಚಾಯತಿ ಅಡಿಯಲ್ಲಿ ಎಸ್.ಎಸ್.ಎಲ್.ಸಿ. ಉತ್ತೀರ್ಣ/ ಅನುತ್ತೀರ್ಣರಾದ ಸಮರ್ಥ ವಿಕಲಚೇತನರನ್ನು ಗ್ರಾಮೀಣ ಪುನರ್ವಸತಿ ಕಾರ್ಯಕರ್ತರೆಂದು ಹಾಗೂ ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ ಸ್ಥಳೀಯ ಸಮರ್ಥ ಪದವೀಧರ ವಿಕಲಚೇತನರೊಬ್ಬರನ್ನು ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರೆಂದು, ಸ್ಥಳೀಯ ನಗರ ಪ್ರದೇಶಗಳಲ್ಲಿ ನಗರ ಪುನರ್ವಸತಿ ಕಾರ್ಯಕರ್ತರೆಂದು ಮತ್ತು ನಿರ್ದೇಶನಾಲಯದಲ್ಲಿ ರಾಜ್ಯ ಸಂಯೋಜಕರನ್ನು ಗೌರವಧನ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗಿದೆ. ಈ ಕಾರ್ಯಕರ್ತರ ಮೂಲಕ ವಿಕಲಚೇತನರಿಗೆ ಎಲ್ಲಾ ಸೇವಾ ಸೌಲಭ್ಯಗಳನ್ನು ಅವರಿರುವ ಸ್ಥಳಗಳಲ್ಲಿಯೇ ವಿಕಲಚೇತನರ ಮೂಲಕವೇ ತಲುಪಿಸಲಾಗುವುದು.

ಸರ್ಕಾರದ ಆದೇಶ ಸಂಖ್ಯೆ:ಮಮಇ/241/ಪಿಹೆಚ್‌ಪಿ/2019, ದಿನಾಂಕ: 07-02-2020ರಂತೆ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು ಹಾಗೂ ನಗರ ಪುನರ್ವಸತಿ ಕಾರ್ಯಕರ್ತರುಗಳ ಗೌರವಧನವನ್ನು ರೂ.3000/-ಗಳಿಂದ ರೂ.6000/-ಗಳಿಗೆ ಹಾಗೂ ವಿವಿದ್ದೊದ್ದೇಶ ಪುನರ್ವಸತಿ ಕಾರ್ಯಕರ್ತರ ಗೌರವಧನವನ್ನು ರೂ.6000/-ಗಳಿಂದ ರೂ.12,000/-ಗಳಿಗೆ ಹೆಚ್ಚಿಸಿ ಆದೇಶ ಹೊರಡಿಸಲಾಗಿದೆ.

4) ಮರಣ ಪರಿಹಾರ ನಿಧಿ ಯೋಜನೆ: ಗ್ರಾಮೀಣ ಪುನರ್ವಸತಿ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಕಾರ್ಯಕರ್ತರು ನಿಧನ ಹೊಂದಿದ್ದಲ್ಲಿ ರೂ.50,000/-ಗಳ ಪರಿಹಾರ ಧನ ನೀಡಲು ಅವಕಾಶವಿರುತ್ತದೆ.

5) ಉದ್ಯೋಗಸ್ಥ ವಿಕಲಚೇತನ ಮಹಿಳೆಯರಿಗೆ ವಸತಿ ನಿಲಯಗಳು:

ಅಂಗವಿಕಲ ಉದ್ಯೋಗಸ್ಥ ಮಹಿಳೆಯರಿಗಾಗಿ ಹಾಗೂ ವಿದ್ಯಾರ್ಥಿನಿ/ತರಬೇತಾರ್ಥಿಗಳಿಗೆ ಸ್ವಯಂ ಸೇವಾ ಸಂಸ್ಥೆಗಳ ಮೂಲಕ 25 ಜಿಲ್ಲೆಗಳಲ್ಲಿ ಮಹಿಳಾ ವಸತಿ ನಿಲಯಗಳು (ಬೆಂಗಳೂರು ನಗರ ಜಿಲ್ಲೆಯಲ್ಲಿ 4 ವಸತಿ ನಿಲಯಗಳು) ನಡೆಯುತ್ತಿವೆ. ಸದರಿ ವಸತಿ ನಿಲಯದಲ್ಲಿ ಉದ್ಯೋಗಸ್ಥ ವಿಕಲಚೇತನ ಮಹಿಳೆಯರಿಗೆ ಮತ್ತು ವಿದ್ಯಾರ್ಥಿನಿಯರಿಗೆ ಹಾಗೂ ತರಬೇತಿದಾರರಿಗೆ ವಸತಿ ಸೌಲಭ್ಯವನ್ನು ಕಲ್ಪಿಸಲಾಗಿದೆ. ಸದರಿ ವಸತಿ ನಿಲಯದಲ್ಲಿ ವಿದ್ಯಾರ್ಥಿನಿಯರು ಹಾಗೂ ತರಬೇತಿದಾರರಿಗೆ ಉಚಿತ ಊಟದ ವ್ಯವಸ್ಥೆಯಿದ್ದು, ಉದ್ಯೋಗಸ್ಥ ಮಹಿಳೆಯರು ಮಾಸಿಕ 800/-ಗಳನ್ನು ಪಾವತಿಸಬೇಕಾಗಿರುತ್ತದೆ. ರಾಮನಗರ, ದಾವಣಗೆರೆ, ರಾಯಚೂರು, ಉತ್ತರ ಕನ್ನಡ ಹಾಗೂ ಚಿಕ್ಕಮಗಳೂರು ಈ ಜಿಲ್ಲೆಗಳಲ್ಲಿ ಆಡಳಿತಾತ್ಮಕ ಕಾರಣಗಳಿಂದ ವಸತಿ ನಿಲಯಗಳನ್ನು ನಡೆಯುತ್ತಿಲ್ಲ.

ಸಿ. ಸಾಮಾಜಿಕ ಭದ್ರತಾ ಯೋಜನೆಗಳು:

1) ಸಮಾಜ ಸೇವಾ ಸಂಕೀರ್ಣ:

ನಿರ್ಗತಿಕ ಬುದ್ಧಿಮಾಂದ್ಯ ಪುರುಷರಿಗಾಗಿ ಸಮಾಜ ಸೇವಾ ಸಂಕೀರ್ಣ ಸಂಸ್ಥೆಯು ಬೆಂಗಳೂರಿನಲ್ಲಿ ಸರ್ಕಾರದ ವತಿಯಿಂದ ನಡೆಯುತ್ತಿದ್ದು, ಈ ಸಂಸ್ಥೆಯಲ್ಲಿ ಉಚಿತ ಊಟ, ವಸತಿ, ವೈದ್ಯಕೀಯ ಸೌಲಭ್ಯ, ಸಂರಕ್ಷಣೆ ಒದಗಿಸಲಾಗುತ್ತಿದೆ. ಪ್ರಸ್ತುತ ಸಂಸ್ಥೆಯಲ್ಲಿ 85 ನಿವಾಸಿಗಳು ದಾಖಲಾಗಿರುತ್ತಾರೆ.

2) ಮಂದಮತಿ ಮಹಿಳೆಯರ ಅನುಪಾಲನಾ ಗೃಹ:

18 ವರ್ಷ ಮೇಲ್ಪಟ್ಟ ನಿರ್ಗತಿಕ ಮಹಿಳಾ ಬುದ್ಧಿಮಾಂದ್ಯರಿಗೆ ಉಚಿತ ಊಟ, ವಸತಿ, ವೈದ್ಯಕೀಯ ಸೌಲಭ್ಯ ಮತ್ತು ಸಂರಕ್ಷಣೆ ಒದಗಿಸುವ ಉದ್ದೇಶದಿಂದ ಮಂದಮತಿ ಮಹಿಳೆಯರ ಅನುಪಾಲನಾ ಗೃಹಗಳನ್ನು ಬೆಂಗಳೂರು ನಗರ ಹಾಗೂ ಹುಬ್ಬಳ್ಳಿಯಲ್ಲಿ ಇಲಾಖಾವತಿಯಿಂದ ನಡೆಸಲಾಗುತ್ತಿದೆ. ಪ್ರಸ್ತುತ ಬೆಂಗಳೂರು ಅನುಪಾಲನಾ ಕೇಂದ್ರದಲ್ಲಿ 100 ಮಂದಿ ಹಾಗೂ ಹುಬ್ಬಳ್ಳಿ ಅನುಪಾಲನ ಕೇಂದ್ರದಲ್ಲಿ 70 ನಿವಾಸಿಗಳು ದಾಖಲಾಗಿರುತ್ತಾರೆ.

3) ಮಾನಸಿಕ ಅಸ್ವಸ್ಥರಿಗೆ ಮಾನಸ ಕೇಂದ್ರಗಳು:

ಮಾನಸಿಕ ಅಸ್ವಸ್ಥರಿಗಾಗಿ ಮಾನಸ ಕೇಂದ್ರಗಳನ್ನು ಬೆಂಗಳೂರು ನಗರ ಹಾಗೂ ಬೆಳಗಾವಿ ಜಿಲ್ಲೆಗಳಲ್ಲಿ ನಡೆಸುತ್ತಿದ್ದು, ರಾಜ್ಯ ಉಚ್ಚ ನ್ಯಾಯಾಲಯ ಮತ್ತು ಅಧೀನ ನ್ಯಾಯಾಲಯಗಳಿಂದ ಆದೇಶಿಸಲ್ಪಡುವ ಮಾನಸಿಕ ಅಸ್ವಸ್ಥರನ್ನು ಹಾಗೂ ರಸ್ತೆಗಳಲ್ಲಿ ಓಡಾಡುವ ನಿರ್ಗತಿಕ ಮಾನಸಿಕ ಅಸ್ವಸ್ಥರನ್ನು ಈ ಕೇಂದ್ರಗಳಲ್ಲಿ ನಿರ್ದಿಷ್ಟ ವೈದ್ಯಕೀಯ ಪ್ರಾಧಿಕಾರದ ಆದೇಶದ ಮೇರೆಗೆ ದಾಖಲಿಸಲು ಅವಕಾಶವಿರುತ್ತದೆ. ಈ ಕೇಂದ್ರಗಳಲ್ಲಿ ಫಲಾನುಭವಿಗಳಿಗೆ ಉಚಿತ ಊಟ, ವಸತಿ, ವೈದ್ಯಕೀಯ ಶುಶ್ರೂಷೆ, ವೈದ್ಯಕೀಯ ಸಲಹೆ(ಕೌನ್ಸಲಿಂಗ್) ಸೌಲಭ್ಯವನ್ನು ನೀಡಲಾಗುತ್ತಿದ್ದು, ಇವು ಅಲ್ಪಾವಧಿ ಕೇಂದ್ರಗಳಾಗಿರುತ್ತವೆ.

4) ಬುದ್ಧಿಮಾಂದ್ಯ ಮಕ್ಕಳ ಪೋಷಕರಿಗೆ ವಿಮಾ ಯೋಜನೆ:

ಬುದ್ಧಿಮಾಂದ್ಯ ಮಕ್ಕಳ/ವ್ಯಕ್ತಿಗಳ ತಂದೆ: ತಾಯಿ: ಪೋಷಕರ ವಿಮಾ ಯೋಜನೆಯನ್ನು ಭಾರತೀಯ ಜೀವ ವಿಮಾ ನಿಗಮದ ಮೂಲಕ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಬುದ್ಧಿಮಾಂದ್ಯ ಮಕ್ಕಳ/ವ್ಯಕ್ತಿಗಳ ತಂದೆ:ತಾಯಿ: ಪೋಷಕರು ಮರಣ ಹೊಂದಿದ ನಂತರ ಬುದ್ಧಿಮಾಂದ್ಯ ಮಕ್ಕಳ ಜೀವನ ನಿರ್ವಹಣೆಗಾಗಿ ರೂ.20,000/-ಗಳ ಪರಿಹಾರ ಧನವನ್ನು ಕುಟುಂಬದ ನಾಮ ನಿರ್ದೇಶಿತ ಸದಸ್ಯರಿಗೆ ಪಾವತಿಸಲಾಗುತ್ತಿದೆ.

5) ವಿಕಲಚೇತನ ವ್ಯಕ್ತಿಗಳನ್ನು ಸಾಮಾನ್ಯರು ಮದುವೆಯಾದಲ್ಲಿ ಪ್ರೋತ್ಸಾಹ ಧನ ನೀಡುವ ಯೋಜನೆ:

ವಿಕಲಚೇತನ ಯುವಕ/ಯುವತಿಯರನ್ನು ವಿವಾಹವಾಗುವ ಸಾಮಾನ್ಯ ಯುವಕ/ ಯುವತಿಯರಿಗೆ ನಿರಂತರವಾಗಿ ಮಾಸಿಕ ಆದಾಯ ದೊರಕಿಸಲು ವಿಕಲಚೇತನ ವ್ಯಕ್ತಿಯ ಹೆಸರಿನಲ್ಲಿ ರೂ.50,000/-ಗಳನ್ನು ಮದುವೆಯಾದ ಸಾಮಾನ್ಯ ವ್ಯಕ್ತಿ ಹಾಗೂ ವಿಕಲಚೇತನರ ಜಂಟಿ ಹೆಸರಿನಲ್ಲಿ 05 ವರ್ಷದ ಅವಧಿಗೆ ಹೂಡಿಕೆಯ ರೂಪದಲ್ಲಿ ನೀಡಿ ಪ್ರೋತ್ಸಾಹ ನೀಡಲು ಹಾಗೂ ಅದರಿಂದ ಬರುವ ಬಡ್ಡಿ ಹಣವನ್ನು ಉಪಯೋಗಿಸುವುದು ಹಾಗೂ 05 ವರ್ಷಗಳ ನಂತರ ಠೇವಣಿ ಮೊತ್ತವನ್ನು ವಾಪಸ್ಸು ಪಡೆಯಬಹುದು ಅಥವಾ ಮುಂದುವರೆಸಲು ಅವಕಾಶವಿರುತ್ತದೆ.

6) ಅಂಧ ಮಹಿಳೆಯರಿಗೆ ಜನಿಸುವ ಮಕ್ಕಳಿಗೆ ಆರೈಕೆ ಭತ್ಯೆ ಒದಗಿಸುವ ಯೋಜನೆ :

ಅಂಧ ಮಹಿಳೆಯರು ಮಗುವಿಗೆ ಜನ್ಮ ನೀಡಿದಾಗ ಆ ಮಗುವನ್ನು ಇತರೆ ಸಾಮಾನ್ಯ ತಾಯಂದಿರಂತೆ ಆರೈಕೆ ಮಾಡುವುದು ಕಷ್ಟಕರವಾಗಿರುತ್ತದೆ.ಇಂತಹ ಅಂಧ ಮಹಿಳೆಯರಿಗೆ ಜನಿಸುವ ಮಕ್ಕಳಿಗೆ ಆರೈಕೆ ಮಾಡಲು ಆಯಾ ಸೇವೆ, ಆರೋಗ್ಯ ಪಾಲನೆ, ಪೌಷ್ಠಿಕ ಆಹಾರ, ಔಷಧೋಪಚಾರಗಳಿಗೆ ಮಾಹೆಯಾನ ರೂ.2000/-ದಂತೆ 5 ವರ್ಷಗಳ ಅವಧಿಗೆ ಸಹಾಯಧನವನ್ನು ನೀಡಲಾಗುತ್ತಿದೆ.ಈ ಸೌಲಭ್ಯವನ್ನು ಕನಿಷ್ಠ 2 ಮಕ್ಕಳವರೆಗೆ ಪಡೆಯಬಹುದಾಗಿದೆ.

(ಡಿ) ಪುನರ್ವಸತಿ ಯೋಜನೆಗಳು:

1) ಅಂಗವಿಕಲರಿಗೆ ಸಾಧನ ಸಲಕರಣೆಗಳು :

ಈ ಯೋಜನೆಯಡಿಯಲ್ಲಿ ಅಂಗವಿಕಲರಿಗೆ ಅವಶ್ಯವಾಗಿರುವ ಸಾಧನ ಸಲಕರಣೆಗಳನ್ನು ನೀಡಲಾಗುತ್ತಿದೆ. ಫಲಾನುಭವಿಯ ಕುಟುಂಬದ ವಾರ್ಷಿಕ ಆದಾಯ ಮಿತಿಯನ್ನು ಗ್ರಾಮೀಣ ಪ್ರದೇಶದ ಫಲಾನುಭವಿಗಳಿಗೆ ರೂ.11,500/- ಮತ್ತು ನಗರ ಪ್ರದೇಶದ ಫಲಾನುಭವಿಗಳಿಗೆ ರೂ.24,000/- ನಿಗದಿಗೊಳಿಸಲಾಗಿದೆ. ಈ ಯೋಜನೆಯಡಿ ರೂ.15,000/-ಗಳ ಮಿತಿಯೊಳಗೆ ವಿಕಲಚೇತನರಿಗೆ ಅವಶ್ಯವಿರುವ ಕ್ಯಾಲಿಪರ್ಸ್, ಕ್ರಚರ್ಸ್, ಶ್ರವಣ ಸಾಧನ, ವೈಟ್ ಕೇನ್, ಬ್ರೈಲ್ ವಾಚ್ ಇನ್ನಿತರ ಸಲಕರಣೆಗಳನ್ನು ಉಚಿತವಾಗಿ ನೀಡಲಾಗುತ್ತಿದೆ.

ಅ. ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ಯೋಜನೆ :

ಎಸ್.ಎಸ್.ಎಲ್.ಸಿ ನಂತರ ವ್ಯಾಸಂಗ ಮಾಡುವ ದೃಷ್ಟಿದೋಷವುಳ್ಳ ವಿಕಲಚೇತನ ವಿದ್ಯಾರ್ಥಿಗಳು ಇತ್ತೀಚಿನ ತಂತ್ರಜ್ಞಾನ ಮತ್ತು ತಂತ್ರಾಂಶದ ಉಪಯೋಗದಿಂದ ಉನ್ನತ ಶಿಕ್ಷಣವನ್ನು ಪಡೆಯಲು ಅನುಕೂಲವಾಗುವಂತೆ ಮಾತನಾಡುವ (ಟಾಕಿಂಗ್) ಲ್ಯಾಪ್‌ಟಾಪ್‌ಗಳನ್ನು ಅರ್ಹ ಫಲಾನುಭವಿಗಳಿಗೆ ನೀಡಲಾಗುತ್ತಿದೆ.

ಆ. ತೀವ್ರತೆರೆನಾದ ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರವಾಹನ ಯೋಜನೆ :

20 ರಿಂದ 60 ವರ್ಷದ ವಯೋಮಾನದ ತೀವ್ರತರವಾದ ದೈಹಿಕ ವಿಕಲಚೇತನರಿಗೆ ಓಡಾಡಲು ಅನುಕೂಲವಾಗುವಂತೆ ಜೀವಿತ ಕಾಲದಲ್ಲಿ ಒಂದು ಬಾರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನವನ್ನು ಮಂಜೂರು ಮಾಡಲಾಗುತ್ತದೆ. ಈ ಯೋಜನೆಯಡಿ ಫಲಾನುಭವಿಯ ಕುಟುಂಬದ ವಾರ್ಷಿಕ ವರಮಾನ ರೂ.2.00 ಲಕ್ಷಗಳಿಗಿಂತ ಕಡಿಮೆ ಇರಬೇಕಾಗಿರುತ್ತದೆ.

2) ಜಿಲ್ಲಾ ಅಂಗವಿಕಲರ ಪುನರ್ವಸತಿ ಕೇಂದ್ರ ಯೋಜನೆ:-

ವಿಕಲಚೇತನರನ್ನು ಗುರುತಿಸಿ ಅವರಿಗೆ ಶೈಕ್ಷಣಿಕ, ಉದ್ಯೋಗ ಮತ್ತು ತರಬೇತಿ, ಸಾಮಾಜಿಕ ಭದ್ರತೆ ಹಾಗೂ ಪುನರ್ವಸತಿ ಸೇವೆಗಳನ್ನು ಅವರ ಮನೆ ಬಾಗಿಲಿನಲ್ಲಿಯೇ ಒದಗಿಸಿ ಅವರ ಸರ್ವಾಂಗೀಣ ಪುನರ್ವಸತಿಯನ್ನು ಕಲ್ಪಿಸುವುದು ಈ ಯೋಜನೆಯ ಪ್ರಮುಖ ಉದ್ದೇಶವಾಗಿದೆ.ಈ ಯೋಜನೆಯಡಿ ವಿಕಲಚೇತನರಿಗೆ ಅಗತ್ಯವಿರುವ ವೈದ್ಯಕೀಯ ಸೇವೆ, ವೃತ್ತಿ ಚಿಕಿತ್ಸೆ, ವಿವಿಧ ರೀತಿಯ ಸಾಧನ ಸಲಕರಣೆಗಳನ್ನು ಕೇಂದ್ರಗಳಲ್ಲಿ ತಯಾರಿಸಿ ಒದಗಿಸಲಾಗುವುದು. ಪ್ರಸ್ತುತ 16 ಜಿಲ್ಲೆಗಳಲ್ಲಿ ಜಿಲ್ಲಾ ಪುನರ್ವಸತಿ ಕೇಂದ್ರಗಳು ನಡೆಯುತ್ತಿವೆ. (ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಬೆಳಗಾವಿ, ಬೀದರ್, ಚಿತ್ರದುರ್ಗ, ದಕ್ಷಿಣ ಕನ್ನಡ, ಮೈಸೂರು, ಉಡುಪಿ, ಹಾಸನ, ವಿಜಯಪುರ, ರಾಯಚೂರು, ಚಿಕ್ಕಮಗಳೂರು, ಬಳ್ಳಾರಿ, ಹಾವೇರಿ, ಚಾಮರಾಜನಗರ, ಗದಗ)

3) ಅಂಗವಿಕಲತೆಯನ್ನು ನಿವಾರಿಸುವ ಶಸ್ತ್ರಚಿಕಿತ್ಸೆಗಾಗಿ ವೈದ್ಯಕೀಯ ಪರಿಹಾರ ನಿಧಿ ಯೋಜನೆ:-

ಅಂಗವಿಕಲ ವ್ಯಕ್ತಿಗಳಿಗೆ ಅಂಗವಿಕಲತೆಯನ್ನು ನಿವಾರಿಸಲು ಶಸ್ತ್ರ ಚಿಕಿತ್ಸೆಗಾಗಿ ಸರ್ಕಾರಿ ಆಸ್ಪತ್ರೆ, ಸಂಜಯಗಾಂಧಿ ಆಸ್ಪತ್ರೆಗಳಲ್ಲಿ ಹಾಗೂ ಸುಸಜ್ಜಿತ ಖಾಸಗಿ ಆಸ್ಪತ್ರೆಗಳಲ್ಲಿ ಅಂಗವಿಕಲತೆ ನಿವಾರಣಾ ಶಸ್ತ್ರ ಚಿಕಿತ್ಸೆಗಾಗಿ ರೂ.1.00 ಲಕ್ಷಗಳವರೆಗೆ ಸಹಾಯ ಧನವನ್ನು ಮಂಜೂರು ಮಾಡಲಾಗುತ್ತಿದೆ.

4) ಸಾಧನೆ ಮತ್ತು ಪ್ರತಿಭೆ ಯೋಜನೆ:

ವಿಕಲಚೇತನ ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡಿ ಧನಸಹಾಯ ನೀಡಲು "ಸಾಧನೆ" ಎಂಬ ಯೋಜನೆಯು ಜಾರಿಯಲ್ಲಿದ್ದು, ಕ್ರೀಡೆಗಳಲ್ಲಿ ವಿಶೇಷ ಸಾಧನೆಗೈದ ವಿಕಲಚೇತನರಿಗೆ ರೂ.50,000/-ಗಳ ಧನ ಸಹಾಯವನ್ನು ನೀಡಲಾಗುತ್ತಿದೆ.

ವಿಕಲಚೇತನರು ನೀಡುವ ಸಾಂಸ್ಕೃತಿಕ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡಿ ಧನಸಹಾಯ ನೀಡುವ ಸಲುವಾಗಿ "ಪ್ರತಿಭೆ" ಎಂಬ ಯೋಜನೆಯು ಜಾರಿಯಲ್ಲಿದ್ದು, ವೈಯಕ್ತಿಕ ಸಾಂಸ್ಕೃತಿಕ ರೂ.2,000/-ಗಳು ಹಾಗೂ ಸಮೂಹ ಕಾರ್ಯಕ್ರಮಕ್ಕೆ ರೂ.10,000/-ಗಳ ಪ್ರೋತ್ಸಾಹಧನ ನೀಡಲಾಗುತ್ತದೆ.

5) ನಿರಾಮಯ ಆರೋಗ್ಯ ವಿಮಾ ಯೋಜನೆ :

ಬುದ್ಧಿಮಾಂದ್ಯ, ಸೆರಬ್ರಲ್ ಪಾಲ್ಸಿ, ಆಟಿಸಂ ಮತ್ತು ಬಹುವಿಧ ಅಂಗವಿಕಲತೆ ಹೊಂದಿರುವ ಪ್ರತಿ ವ್ಯಕ್ತಿ ಹಾಗೂ ಮಗುವಿಗೆ ವರ್ಷಕ್ಕೆ ಒಂದು ಬಾರಿ ಪ್ರೀಮಿಯಂ ಮೊತ್ತ ರೂ.250/-ಗಳನ್ನು ಭಾರತ ಸರ್ಕಾರದಿಂದ ಗುರುತಿಸಲ್ಪಟ್ಟ ಅಧಿಕೃತ ಸಂಸ್ಥೆಯಾದ ಅಂಗವಿಕಲರ ಪುನಶ್ಚೇತನ ಸಂಸ್ಥೆ (ರಿ) (ಎ.ಪಿ.ಡಿ) ಬೆಂಗಳೂರು ರವರಿಗೆ ಪಾವತಿಸಲಾಗುವುದು. ಪ್ರತಿ ವರ್ಷ ಯೋಜನೆಯಡಿ ಬರುವ ಫಲಾನುಭವಿಗಳು ರೂ.1.00 ಲಕ್ಷಗಳವರೆಗೆ ವೈದ್ಯಕೀಯ ಸೌಲಭ್ಯ ಪಡೆಯಬಹುದಾಗಿರುತ್ತದೆ. ಈ ಮೊತ್ತದಲ್ಲಿ ರೂ.60,000/-ಗಳವರೆಗೆ ಸರ್ಜರಿ ವೆಚ್ಚ ಉಳಿದ ರೂ.40,000/-ಗಳಲ್ಲಿ ವೈದ್ಯಕೀಯ ಖರ್ಚು ಥೆರಪಿ, ಪ್ರಯಾಣ ವೆಚ್ಚಗಳನ್ನು ಒಳಗೊಂಡಿರುತ್ತದೆ.

6) ಸ್ಪರ್ಧಾ ಚೇತನ:-

ಈ ಯೋಜನೆಯಡಿ ವಿಶೇಷ ಸಾಮರ್ಥ್ಯ/ಭಿನ್ನ ಸಾಮರ್ಥ್ಯದ ವಿದ್ಯಾವಂತ ವ್ಯಕ್ತಿಗೆಗಳಿಗೆ ಐ.ಎ.ಎಸ್./ಕೆ.ಎ.ಎಸ್. ಹಾಗೂ ಇತರೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸರ್ಕಾರದ ಇತರೆ ಇಲಾಖೆಗಳಡಿ ಗುರುತಿಸಲ್ಪಟ್ಟ ಪೂರ್ವ ಪರೀಕ್ಷಾ ತರಬೇತಿ ಕೇಂದ್ರಗಳು ಹಾಗೂ ಈ ಇಲಾಖೆಯಿಂದ ಗುರುತಿಸಲ್ಪಟ್ಟ ತರಬೇತಿ ಕೇಂದ್ರಗಳ ಮೂಲಕ ತರಬೇತಿಯನ್ನು ಉಚಿತವಾಗಿ ನೀಡಲಾಗುತ್ತಿದೆ.

7) **ನಿರುದ್ಯೋಗ ಭತ್ಯೆ:-** ಎಸ್.ಎಸ್.ಎಲ್.ಸಿ ಹಾಗೂ ನಂತರ ವ್ಯಾಸಂಗ ಮಾಡಿರುವ ನಿರುದ್ಯೋಗಿ ವಿಕಲಚೇತನರಿಗೆ ಮಾಸಿಕ ರೂ.1000/-ಗಳ ನಿರುದ್ಯೋಗ ಭತ್ಯೆಯನ್ನು ಮಂಜೂರು ಮಾಡಲಾಗುತ್ತಿದೆ.

(ಇ) ಸಾರ್ವಜನಿಕ ಅರಿವು ಮೂಡಿಸುವ ಯೋಜನೆಗಳು:

1. ವಿಕಲಚೇತನರ ಮಾಹಿತಿ ಸಲಹಾ ಕೇಂದ್ರ :

ಅಂಗವಿಕಲರಿಗೆ ಲಭ್ಯವಿರುವ ರಾಜ್ಯ ಸರ್ಕಾರದ ಹಾಗೂ ಕೇಂದ್ರ ಸರ್ಕಾರದ ಯೋಜನೆಗಳ ಹಾಗೂ ವಿಶೇಷ ಶಾಲೆಗಳು ಹಾಗೂ ವೃತ್ತಿ ತರಬೇತಿ ಸಂಸ್ಥೆಗಳ ಬಗ್ಗೆ ಮಾಹಿತಿಯನ್ನು ಒದಗಿಸಲು ನಿರ್ದೇಶನಾಲಯದಲ್ಲಿ ಹಾಗೂ ರಾಜ್ಯದ 30 ಜಿಲ್ಲೆಗಳಲ್ಲಿ ವಿಕಲಚೇತನರ ಸಹಾಯವಾಣಿ / ಮಾಹಿತಿ ಕೇಂದ್ರಗಳನ್ನು ನಡೆಸಲಾಗುತ್ತಿದೆ.ಈ ಕೇಂದ್ರಗಳಲ್ಲಿ ಒಳ್ಳೆಯ ಗುಣ ಮಟ್ಟದ ಕೃತಕಾಂಗಗಳು ದೊರೆಯುವ ಮಾಹಿತಿ ಹಾಗೂ ಅಂಗವಿಕಲರಿಗೆ ಬೇಕಾಗಿರುವ ಮಾಹಿತಿಗಳನ್ನು ಮತ್ತು ಇದರ ಜೊತೆಗೆ ರಾಜ್ಯ ಸರ್ಕಾರ, ಕೇಂದ್ರ ಸರ್ಕಾರ, ಸಾರ್ವಜನಿಕ ಉದ್ಯಮ ಹಾಗೂ ಖಾಸಗಿ ಉದ್ಯಮಗಳಲ್ಲಿ ಅಂಗವಿಕಲರಿಗೆ ಉದ್ಯೋಗ ಅವಕಾಶಗಳ ಬಗ್ಗೆ ಮಾಹಿತಿಯನ್ನು ನೀಡಲಾಗುವುದು.

2) **ವಿಕಲಚೇತನರಿಗೆ ಗುರುತಿನ ಚೀಟಿ ನೀಡುವ ಯೋಜನೆ:-**

ಈ ಯೋಜನೆಯಡಿಯಲ್ಲಿ ವಿಕಲಚೇತನ ವ್ಯಕ್ತಿಗಳಿಗೆ ಗುರುತಿನ ಚೀಟಿಗಳನ್ನು ನೀಡಲಾಗುತ್ತಿದೆ.ಈ ಗುರುತಿನ ಚೀಟಿಯನ್ನು ವಿವಿಧ ಸರ್ಕಾರಿ ಸೌಲಭ್ಯಗಳನ್ನು ಪಡೆಯಲು ಉಪಯೋಗಿಸಿಕೊಳ್ಳಬಹುದಾಗಿದೆ. ವಿಕಲಚೇತನರಿಗೆ **ವಿಶಿಷ್ಟ ಗುರುತಿನ ಚೀಟಿ** (UNIQUE DISABILITY ID)ನೀಡುವ ಯೋಜನೆಯು ಕೇಂದ್ರ ಸರ್ಕಾರ ಪ್ರಾಯೋಜಿತ ಯೋಜನೆಯಾಗಿದೆ. ರಾಜ್ಯ ಸರ್ಕಾರದಿಂದ ನೇಮಿಸಲಾಗುವ ವೈದ್ಯಕೀಯ ಪ್ರಾಧಿಕಾರಗಳಿಂದ ದೃಢೀಕರಿಸಲಾಗುವ ವೈದ್ಯಕೀಯ ಪ್ರಮಾಣ ಪತ್ರದ ಸಮಗ್ರ ಮಾಹಿತಿಯುಳ್ಳ ಗಣಕೀಕೃತ ಗುರುತಿನ ಚೀಟಿಯನ್ನು ವಿಕಲಚೇತನ ವ್ಯಕ್ತಿಗಳಿಗೆ ನೀಡುವ ವ್ಯವಸ್ಥೆಯಾಗಿದ್ದು, ಇದರಲ್ಲಿ ವಿಕಲಚೇತನ ವ್ಯಕ್ತಿಯ ವಿವರಗಳು ಹಾಗೂ ಅವರಲ್ಲಿರುವ ವಿಕಲತೆಯ ವಿವರ ಮತ್ತು ಪ್ರಮಾಣವನ್ನು ನಮೂದಿಸಲಾಗಿರುತ್ತದೆ.

3).**ವಿಕಲಚೇತನರಿಗೆ ರಿಯಾಯಿತಿ ದರದ ಬಸ್ ಪಾಸ್:**

ಈ ಯೋಜನೆಯಡಿ ವಿಕಲಚೇತನರಿಗೆ 100 ಕಿ.ಮೀ. ವ್ಯಾಪ್ತಿಯೊಳಗೆ ಸಂಚರಿಸಲು ವಾರ್ಷಿಕ ರೂ.660/- ರಿಯಾಯಿತಿ ದರದಲ್ಲಿ ಬಸ್ ಪಾಸ್‌ಗಳನ್ನು ಕೆ.ಎಸ್.ಆರ್.ಟಿ.ಸಿ ಹಾಗೂ ಬಿ.ಎಂ.ಟಿ.ಸಿ ವತಿಯಿಂದ ವಿತರಿಸಲಾಗುತ್ತಿದೆ ಪೂರ್ಣ ಅಂಧರು ಉಚಿತವಾಗಿ ರಾಜ್ಯದಲ್ಲಿ ಸಂಚರಿಸಲು ಅವಕಾಶವಿರುತ್ತದೆ.

ಅನುಬಂಧ–02

ಹಿರಿಯ ನಾಗರಿಕರಿಗಾಗಿ ಜಾರಿಗೊಳಿಸುತ್ತಿರುವ ಯೋಜನೆಗಳು

ಹಗಲು ಯೋಗಕ್ಷೇಮ ಕೇಂದ್ರಗಳು:

ರಾಜ್ಯದ 30 ಜಿಲ್ಲೆಗಳಿಗೆ ಹಗಲು ಯೋಗಕ್ಷೇಮ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರದ ಮಂಜೂರಾತಿ ದೊರೆತಿದ್ದು, ಪ್ರತಿ ಕೇಂದ್ರದಲ್ಲಿ ಸುಮಾರು 50–150 ಫಲಾನುಭವಿಗಳಿಗೆ ಅವಕಾಶ ಕಲ್ಪಿಸಿಕೊಡಲಾಗಿದ್ದು, ಸದರಿ ಯೋಜನೆಗೆ ಸರ್ಕಾರದಿಂದ ವಾರ್ಷಿಕ ರೂ.11.20 ಲಕ್ಷಗಳ ಅನುದಾನವನ್ನು ಮಂಜೂರು ಮಾಡಲಾಗುತ್ತದೆ.

1. ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳು:

ಹಿರಿಯ ನಾಗರಿಕರು ಕಿರುಕುಳ, ಹಣಕಾಸಿನ ಶೋಷಣೆ, ಮಾನಸಿಕ ತುಮುಲ ಮತ್ತು ದುರ್ಬಲರಾಗಿ ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದು, ಇಂತಹ ಸಮಸ್ಯೆಗಳ ನಿವಾರಣೆಗಾಗಿ ಹಾಗೂ ತುರ್ತು ಸಹಾಯಕ್ಕಾಗಿ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳನ್ನು ರಾಜ್ಯದ 30 ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲು ಬೆಳಗಾವಿ ಮತ್ತು ಕಲಬುರಗಿ ಜಿಲ್ಲೆಗಳನ್ನು ಹೊರತುಪಡಿಸಿ ಉಳಿದ 28 ಜಿಲ್ಲೆಗಳಲ್ಲಿ ಸಹಾಯವಾಣಿ ಕೇಂದ್ರಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಛೇರಿ ಆವರಣದಲ್ಲಿ, ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದಿಂದ ನಡೆಸಲಾಗುತ್ತಿದೆ.

2. ಹಿರಿಯ ನಾಗರಿಕರ ವೃದ್ಧಾಶ್ರಮ:

ರಾಜ್ಯದ 30 ಜಿಲ್ಲೆಗಳಲ್ಲಿ ನಿರ್ಗತಿಕ ಹಿರಿಯ ನಾಗರಿಕರಿಗಾಗಿ ವೃದ್ಧಾಶ್ರಮಗಳನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದ್ದು, ಈ ವೃದ್ಧಾಶ್ರಮದಲ್ಲಿ 25 ನಿರ್ಗತಿಕ ಹಿರಿಯ ನಾಗರಿಕರನ್ನು ದಾಖಲಿಸಿಕೊಳ್ಳಲು ಅವಕಾಶವಿದ್ದು, ಒಂದು ವೃದ್ಧಾಶ್ರಮದ ನಿರ್ವಹಣೆಗಾಗಿ ವಾರ್ಷಿಕ ರೂ.8.00ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದ್ದು, ಇದರಲ್ಲಿ ಸಿಬ್ಬಂದಿ ವೆಚ್ಚ, ನಿರ್ವಹಣಾ ವೆಚ್ಚ, ಔಷಧಿ, ಕಟ್ಟಡ ಬಾಡಿಗೆ, ವೃತ್ತ ಪತ್ರಿಕೆ ಹಾಗೂ ಇತರೆ ವೆಚ್ಚಗಳಿಗಾಗಿ ಒಟ್ಟು ಯೋಜನಾ ವೆಚ್ಚದ ಶೇ.90ರಷ್ಟು ಅನುದಾನವನ್ನು ಸ್ವಯಂ ಸೇವಾ ಸಂಸ್ಥೆಗಳಿಗೆ ನೀಡಲಾಗುತ್ತಿದ್ದು ಉಳಿದ ಶೇ.10ರಷ್ಟನ್ನು ಸಂಸ್ಥೆಯು ಭರಿಸಬೇಕಾಗುತ್ತದೆ. ಅನುದಾನವನ್ನು ಜಿಲ್ಲಾ ಪಂಚಾಯತ್, ಮೂಲಕ ಮಂಜೂರು ಮಾಡಲಾಗುತ್ತಿದೆ.

ರಾಜ್ಯದ ಪ್ರತಿ ಕಂದಾಯ ಉಪ ವಿಭಾಗದಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ವೃದ್ಧಾಶ್ರಮಗಳನ್ನು ಪ್ರಾರಂಭಿಸಲು ಅವಕಾಶವಿದ್ದು, ಪ್ರಸ್ತುತ 8 ಕಂದಾಯ ಉಪ ವಿಭಾಗಕ್ಕೆ ವೃದ್ಧಾಶ್ರಮ ನಡೆಸಲು ಆಡಳಿತಾತ್ಮಕ ಮಂಜೂರಾತಿ ದೊರೆತಿರುತ್ತದೆ.

(ಅ) ಕೇಂದ್ರ ಸರ್ಕಾರದ ಅನುದಾನ ಯೋಜನೆಯಡಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಹಿರಿಯ ನಾಗರಿಕರಿಗಾಗಿ 42 ವೃದ್ಧಾಶ್ರಮಗಳು, 01 ಮೊಬೈಲ್ ಮೆಡಿಕೇರ್ ಯೂನಿಟ್, 02 ಡಿಮೆನ್ಷಿಯಾ ಕೇರ್ ಸೆಂಟರ್, 01 ಫಿಸಿಯೋಥೆರಫಿ ಕ್ಲಿನಿಕ್, 01 ರೀಜನಲ್ ರೀಸೋರ್ಸ್ ಸೆಂಟರ್ ನಡೆಯುತ್ತಿವೆ. ಅನುದಾನವನ್ನು ಕೇಂದ್ರ ಸರ್ಕಾರದಿಂದ ನೇರವಾಗಿ ಸ್ವಯಂ ಸೇವಾ ಸಂಸ್ಥೆಗಳಿಗೆ ಬಿಡುಗಡೆ ಮಾಡಲಾಗುತ್ತದೆ.

3. ಹಿರಿಯ ನಾಗರಿಕರಿಗೆ ಗುರುತಿನ ಚೀಟಿಗಳು:

60 ವರ್ಷ ಮೇಲ್ಪಟ್ಟ ವಯೋಮಾನದ ಹಿರಿಯ ನಾಗರಿಕರ ಗುರುತಿನ ಚೀಟಿ ಪಡೆಯಲು ಸೇವಾ ಸಿಂಧು ಆನ್‌ಲೈನ್ ತಂತ್ರಾಂಶವನ್ನು ಅಭಿವೃದ್ಧಿ ಪಡಿಸಲಾಗಿದ್ದು, ದಿ:01.10.2018ರಿಂದ ಹಿರಿಯ ನಾಗರಿಕರು ಸೇವಾ ಸಿಂಧು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿ ಹಿರಿಯ ನಾಗರಿಕರ ಗುರುತಿನ ಚೀಟಿಯನ್ನು ಪಡೆಯಬಹುದಾಗಿದೆ.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	–	1522
ಉತ್ತರಿಸಬೇಕಾದ ದಿನಾಂಕ	–	10-03-2021
ಸದಸ್ಯರ ಹೆಸರು	–	ಶ್ರೀ ಶ್ರೀನಿವಾಸ್ ಎಂ. (ಮಂಡ್ಯ)
ಉತ್ತರಿಸುವ ಸಚಿವರು	–	ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಮಂಡ್ಯ ನಗರದಲ್ಲಿ ಅಲ್ಪಸಂಖ್ಯಾತರ ವರ್ಗದವರ ಸ್ಮಶಾನಗಳು ಪಾಳು ಬಿದ್ದಿದ್ದು ಯಾವುದೇ ಮೂಲಭೂತ ಸೌಕರ್ಯಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ನಿರ್ಲಕ್ಷ್ಯ ವಹಿಸಿರಲು ಕಾರಣವೇನು; ಯಾವಾಗ ಕ್ರಮ ಕೈಗೊಳ್ಳಲಾಗುವುದು;	**<u>ಕರ್ನಾಟಕ ರಾಜ್ಯ ವಕ್ಫ್ ಮಂಡಳಿ:</u>** ಮಂಡ್ಯ ನಗರದ ಬಹಳಷ್ಟು ಮುಸ್ಲಿಂ ಖಬರಸ್ಥಾನಗಳಿಗೆ ಕಾಂಪೌಂಡ್ ನಿರ್ಮಾಣವಾಗಿದ್ದು, ಎಲ್ಲಾ ಖಬರಸ್ಥಾನಗಳಲ್ಲಿ ದೀಪದ ಮತ್ತು ನೀರಿನ ವ್ಯವಸ್ಥೆ ಇರುತ್ತದೆ. ಕೆಲವು ಭಾಗಗಳಲ್ಲಿ ಕೊರತೆ ಇರುತ್ತದೆ. ಹಳೇ ಎಂ.ಸಿ ರಸ್ತೆ ಮಂಡ್ಯ ಖಬರಸ್ಥಾನದ ಮೂಲಭೂತ ಅಭಿವೃದ್ಧಿಗಾಗಿ ರೂ.25.00ಲಕ್ಷ ಅನುದಾನ ಬಿಡುಗಡೆ ಮಾಡಲಾಗಿದ್ದು, ಕಾಮಗಾರಿಯು ಮುಗಿಯುವ ಹಂತದಲ್ಲಿದೆ.
ಆ)	ಮಂಡ್ಯ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಅಲ್ಪಸಂಖ್ಯಾತರಿಗೆ ಒದಗಿಸಿರುವ ಸೌಲಭ್ಯಗಳಾವುವು; ಯಾವ ಯಾವ ಸೌಲಭ್ಯಗಳಿಗೆ ಎಷ್ಟೆಷ್ಟು ಹಣ ಬಿಡುಗಡೆಗೊಳಿಸಲಾಗಿದೆ; ಪ್ರಸ್ತುತ ಯಾವ ಸ್ಥಿತಿಯಲ್ಲಿವೆ;	**<u>ಅಲ್ಪಸಂಖ್ಯಾತರ ನಿರ್ದೇಶನಾಲಯ:</u>** ಮಂಡ್ಯ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಅಲ್ಪಸಂಖ್ಯಾತರಿಗೆ ಒದಗಿಸಿರುವ ಸೌಲಭ್ಯಗಳಿಗೆ ಹಣ ಬಿಡುಗಡೆ ಮತ್ತು ಕಾಮಗಾರಿಗಳ ಪ್ರಸ್ತುತ ಸ್ಥಿತಿಯ ಮಾಹಿತಿಯನ್ನು ಅನುಬಂಧ-1ರಲ್ಲಿ ನೀಡಲಾಗಿದೆ. **<u>ಕರ್ನಾಟಕ ರಾಜ್ಯ ವಕ್ಫ್ ಮಂಡಳಿ:</u>** ಮಂಡ್ಯ ತಾಲ್ಲೂಕಿಗೆ ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ವತಿಯಿಂದ ಅಲ್ಪಸಂಖ್ಯಾತರ ವಕ್ಫ್ ಸಂಸ್ಥೆಗಳಿಗೆ ಒದಗಿಸಲಾಗಿರುವ ಯೋಜನಾವಾರು ಸೌಲಭ್ಯಗಳ ವಿವರಗಳನ್ನು ಅನುಬಂಧ-2 ಮತ್ತು 3ರಲ್ಲಿ ನೀಡಲಾಗಿದೆ. ಪ್ರಸ್ತುತ ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ.
ಇ)	ಮಂಡ್ಯ ಜಿಲ್ಲೆಯಲ್ಲಿ ಅಲ್ಪಸಂಖ್ಯಾತರಿಗೆ ನೀಡಿರುವ ಅನುದಾನವೆಷ್ಟು? (ವಿಧಾಸಭಾ ಕ್ಷೇತ್ರವಾರು ವಿವರ ನೀಡುವುದು)	**<u>ಅಲ್ಪಸಂಖ್ಯಾತರ ನಿರ್ದೇಶನಾಲಯ:</u>** ಮಂಡ್ಯ ಜಿಲ್ಲೆಯಲ್ಲಿ ಅಲ್ಪಸಂಖ್ಯಾತರಿಗೆ ನೀಡಿರುವ ಅನುದಾನ (ವಿಧಾನಸಭಾ ಕ್ಷೇತ್ರವಾರು) ವಿವರವನ್ನು ಅನುಬಂಧ-4ರಲ್ಲಿ ನೀಡಲಾಗಿದೆ.

ಕರ್ನಾಟಕ ರಾಜ್ಯ ವಕ್ಫ್ ಮಂಡಳಿ:
ಮಂಡ್ಯ ಜಿಲ್ಲೆಯಲ್ಲಿ 2018-19ನೇ ಸಾಲಿನಲ್ಲಿ ಮಂಜೂರಾಗಿರುವ ಅನುದಾನ ವಿವರ ಈ ಕೆಳಗಿನಂತಿದೆ.

ಕ್ರ.ಸಂ.	ವಿಧಾನಸಭಾ ಕ್ಷೇತ್ರ	ಮಂಜೂರಾಗಿರುವ ಅನುದಾನ ವಿವರ (ರೂ.ಲಕ್ಷಗಳಲ್ಲಿ)
1	ಮಂಡ್ಯ	31.00
2	ಮದ್ದೂರು	25.00
3	ಮಳವಳ್ಳಿ	10.00
4	ನಾಗಮಂಗಲ	5.00
5	ಪಾಂಡವಪುರ	00.00
6	ಕೆ.ಆರ್.ಪೇಟೆ	5.00
7	ಶ್ರೀರಂಗಪಟ್ಟಣ	28.00
	ಒಟ್ಟು	104.00

MWD 73 LMQ 2021

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ ಮತ್ತು ಜವಳಿ ಹಾಗೂ
ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

ನಮೂನೆ–01

ಅಲ್ಪಸಂಖ್ಯಾತರ ನಿರ್ದೇಶನಾಲಯ

ಮಾನ್ಯ ವಿಧಾನ ಸಭೆ ಸದಸ್ಯರಾದ ಶ್ರೀ. ಶ್ರೀನಿವಾಸ್ ಎಂ.(ಮಂಡ್ಯ) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1522 ಕ್ಕೆ ಅನುಬಂಧ–1

(ರೂ.ಲಕ್ಷಗಳಲ್ಲಿ)

ಕ್ರ. ಸಂ	ವಿಧಾನಸಭಾ ಕ್ಷೇತ್ರ	ನಿರ್ದೇಶನ ಮತ್ತು ಆಡಳಿತ			ಕ್ರಿಶ್ಚಿಯನ್ ಸಮುದಾಯ ಅಭಿವೃದ್ಧಿ			ಅಲ್ಪಸಂಖ್ಯಾತರ ಕಲ್ಯಾಣ ಮದರಸಾದಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣವನ್ನು ಒದಗಿಸುವುದು			ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಉತ್ತೇಜನ		
		ಬಿಡುಗಡೆ	ಖರ್ಚು	ಪ್ರಸ್ತುತ ಸ್ಥಿತಿ	ಬಿಡುಗಡೆ	ಖರ್ಚು	ಪ್ರಸ್ತುತ ಸ್ಥಿತಿ	ಬಿಡುಗಡೆ	ಖರ್ಚು	ಪ್ರಸ್ತುತ ಸ್ಥಿತಿ	ಬಿಡುಗಡೆ	ಖರ್ಚು	ಪ್ರಸ್ತುತ ಸ್ಥಿತಿ
1	2	3	4	5	6	7	8	9	10	11	12	13	14
1	ಮಂಡ್ಯ	2.76	1.38	ಮಾಹಿತಿ ಕೇಂದ್ರಗಳ ನಿರ್ವಹಣೆ ಅನುದಾನ ಬಳಕೆ ಮಾಡಲಾಗಿರುತ್ತದೆ.	–	–	–	–		–	–		–

ಅಲ್ಪಸಂಖ್ಯಾತರಿಗಾಗಿ ನೂತನ ಹಾಸ್ಟಲ್‌ಗಳ ಪ್ರಾರಂಭ			ಅಲ್ಪಸಂಖ್ಯಾತರ ವಸತಿ ಶಾಲೆಗಳು			ಅಲ್ಪಸಂಖ್ಯಾತರಿಗೆ ವಿದ್ಯಾರ್ಥಿವೇತನ ಮತ್ತು ಶುಲ್ಕ ಮರುಪಾವತಿ			ಜೈನ್, ಬೌದ್ಧ, ಮತ್ತು ಸಿಖ್ ಸಮುದಾಯದ ಅಭಿವೃದ್ಧಿ			ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ			ಅಲ್ಪಸಂಖ್ಯಾತರ ವಸತಿ ಶಾಲೆ/ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣ		
ಬಿಡುಗಡೆ	ಖರ್ಚು	ಪ್ರಸ್ತುತ ಸ್ಥಿತಿ	ಬಿಡುಗಡೆ	ಖರ್ಚು	ಪ್ರಸ್ತುತ ಸ್ಥಿತಿ	ಬಿಡುಗಡೆ	ಖರ್ಚು	ಪ್ರಸ್ತುತ ಸ್ಥಿತಿ	ಬಿಡುಗಡೆ	ಖರ್ಚು	ಪ್ರಸ್ತುತ ಸ್ಥಿತಿ	ಬಿಡುಗಡೆ	ಖರ್ಚು	ಪ್ರಸ್ತುತ ಸ್ಥಿತಿ	ಬಿಡುಗಡೆ	ಖರ್ಚು	ಪ್ರಸ್ತುತ ಸ್ಥಿತಿ
15	16	17	18	19	20	27	28	29	30	31	32	33	34	35	36	37	38
-		-	-		-	-		-	-		-	-		-	-		-

ಪ್ರಧಾನಮಂತ್ರಿ ಜನ ವಿಕಾಸ್ ಕಾರ್ಯಕ್ರಮ (ಎಂ.ಎಸ್.ಡಿ.ಪಿ)			ಅಲ್ಪಸಂಖ್ಯಾತರಿಗಾಗಿ ಹಾಸ್ಟಲ್‌ಗಳು			ಅಲ್ಪಸಂಖ್ಯಾತರಿಗಾಗಿ ಕಾನೂನು ಪದವೀಧರರಿಗೆ ತರಬೇತಿ ಭತ್ಯೆ			ಅಲ್ಪಸಂಖ್ಯಾತರ ಅನಾಥಾಲಯಗಳಿಗೆ ಸಹಾಯಾನುದಾನ			ಕಾರ್ಯಕಾರಿ ಸಿಬ್ಬಂದಿ		
ಬಿಡುಗಡೆ	ಖರ್ಚು	ಪ್ರಸ್ತುತ ಸ್ಥಿತಿ	ಬಿಡುಗಡೆ	ಖರ್ಚು	ಪ್ರಸ್ತುತ ಸ್ಥಿತಿ	ಬಿಡುಗಡೆ	ಖರ್ಚು	ಪ್ರಸ್ತುತ ಸ್ಥಿತಿ	ಬಿಡುಗಡೆ	ಖರ್ಚು	ಪ್ರಸ್ತುತ ಸ್ಥಿತಿ	ಬಿಡುಗಡೆ	ಖರ್ಚು	ಪ್ರಸ್ತುತ ಸ್ಥಿತಿ
39	40	41	42	43	44	45	46	47	48	49	50	51	52	53
–		–	56.01	30.51	ಮಂಡ್ಯ ನಗರದ ಮೆಟ್ರಿಕ್ ನಂತರದ ಬಾಲಕರ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಕ್ಕೆ ಅನುದಾವನ್ನು ಬಳಕೆ ಮಾಡಲಾಗಿದೆ.	0.90	0.35	ಅಲ್ಪಸಂಖ್ಯಾತರ ಒಬ್ಬರು ಕಾನೂನು ಪಧವೀಧರರಿಗೆ ಶಿಷ್ಯವೇತನ ನೀಡಲಾಗಿರುತ್ತದೆ.	–	–	–	24.19	20.00	ಜಿಲ್ಲಾ ಕಛೇರಿಯ ಸಿಬ್ಬಂದಿಗಳ ವೇತನ ಹಾಗೂ ನಿರ್ವಹಣೆಗೆ ಅನುದಾನ ಬಳಕೆ ಮಾಡಲಾಗಿದೆ.

ನಿರ್ದೇಶಕರು
ಅಲ್ಪಸಂಖ್ಯಾತರ ನಿರ್ದೇಶನಾಲಯ
ಬೆಂಗಳೂರು.

Protection of Wakf Property Scheme

Year 2018-19

Sl. No	G.O. Sl. No.	Name of the Institution	Purpose	Govt. Order. No. & G. O. Date	District	Taluk	Amount Sanctioned (Rs. in lakhs)	Amount Released (Rs. in lakhs)	Balance (Rs. in lakhs)
NIL									

Year 2019-20

Sl. No	G.O. Sl. No.	Name of the Institution	Purpose	Govt. Order. No. & G. O. Date	District	Taluk	Amount Sanctioned (Rs. in lakhs)	Amount Released (Rs. in lakhs)	Balance (Rs. in lakhs)
6	310	Masjid-e-Azam, Haluvadi Village Mandya Tq&Dist	Construction of Compound wall	MWD/05/WES/2020 DATED 21/01/2020	Mandya	Mandya	3.00	3.00	-

Year 2020-21

Sl. No	G.O. Sl. No.	Name of the Institution	Purpose	Govt. Order. No. & G. O. Date	District	Taluk	Amount Sanctioned (Rs. in lakhs)	Amount Released (Rs. in lakhs)	Balance (Rs. in lakhs)
NIL									

Repair & Renovation

Year 2018-19

Sl. No	G.O. Sl. No.	Name of the Institution	Purpose	Govt. Order. No. & G. O. Date	District	Taluk	Amount Sanctioned (Rs. in lakhs)	Amount Released (Rs. in lakhs)	Balance (Rs. in lakhs)	Reason for Not Release
1	126	Masjid-e-Noor Housing Board Mandya District	Repairs and Renovation of Masjid	MWD/27/WGA/2018 06-02-2019	Mandya	Mandya Tq	3.00	-	3.00	Incomplete documents are submitted and the same is informed to the Instituton

Year 2019-20

Sl. No	G.O. Sl. No.	Name of the Institution	Purpose	Govt. Order. No. & G. O. Date	District	Taluk	Amount Sanctioned (Rs. in lakhs)	Amount Released (Rs. in lakhs)	Balance (Rs. in lakhs)	Reason for Not Release
NIL										

Year 2020-21

Sl. No	G.O. Sl. No.	Name of the Institution	Purpose	Govt. Order. No. & G. O. Date	District	Taluk	Amount Sanctioned (Rs. in lakhs)	Amount Released (Rs. in lakhs)	Balance (Rs. in lakhs)	Reason for Not Release
NIL										

ನಮೂನೆ-2

ಅಲ್ಪಸಂಖ್ಯಾತರ ನಿರ್ದೇಶನಾಲಯ

ಮಾನ್ಯ ವಿಧಾನ ಸಭೆ ಸದಸ್ಯರಾದ ಶ್ರೀ. ಶ್ರೀನಿವಾಸ್ ಎಂ.(ಮಂಡ್ಯ) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1522 ಕ್ಕೆ ಅನುಬಂಧ-2

ಕ್ರ. ಸಂ	ತಾಲ್ಲೂಕು	ನಿರ್ದೇಶನ ಮತ್ತು ಆಡಳಿತ		ಕ್ರಿಶ್ಚಿಯನ್ ಸಮುದಾಯ ಅಭಿವೃದ್ಧಿ		ಅಲ್ಪಸಂಖ್ಯಾತರ ಕಲ್ಯಾಣ ಮದರಸಾದಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣವನ್ನು ಒದಗಿಸುವುದು		ಸರ್ಕಾರಿ ಅಲ್ಪಸಂಖ್ಯಾತರ ಶಾಲೆಗಳಿಗೆ ಶಿಕ್ಷಣ ಮತ್ತು ಕಲಿಕೆ ಸಾಧನಗಳು		ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಉತ್ತೇಜನ		ಅಲ್ಪಸಂಖ್ಯಾತರಿಗಾಗಿ ನೂತನ ಹಾಸ್ಟಲ್‌ಗಳ ಪ್ರಾರಂಭ		ಅಲ್ಪಸಂಖ್ಯಾತರ ವಸತಿ ಶಾಲೆಗಳು		ಅಲ್ಪಸಂಖ್ಯಾತರಿಗೆ ವಿದ್ಯಾರ್ಥಿವೇತನ ಮತ್ತು ಶುಲ್ಕ ಮರುಪಾವತಿ	
		ಬಿಡುಗಡೆ	ಖರ್ಚು	ಬಿಡುಗಡೆ	ಖರ್ಚು	ಬಿಡುಗಡೆ	ಖರ್ಚು	ಬಿಡುಗಡೆ	ಖರ್ಚು	ಬಿಡುಗಡೆ	ಖರ್ಚು	ಬಿಡುಗಡೆ	ಖರ್ಚು	ಬಿಡುಗಡೆ	ಖರ್ಚು	ಬಿಡುಗಡೆ	ಖರ್ಚು
1	2	3	4	5	6	7	8	9	10	11	12	13	14	15	16	17	18
1	ಮಂಡ್ಯ	2.76	1.38	-	-	-	-	-	-	-	-	-	-	-	-	-	-
2	ಮದ್ದೂರು	2.74	1.37	-	-	-	-	-	-	-	-	-	-	-	-	-	-
3	ಮಳವಳ್ಳಿ	2.74	1.37	-	-	-	-	-	-	-	-	-	-	-	-	-	-
4	ಪಾಂಡವಪುರ	2.88	1.44	-	-	-	-	-	-	-	-	-	-	-	-	-	-
5	ಕೆ.ಆರ್.ಪೇಟೆ	2.88	1.44	-	-	-	-	-	-	0.26	0.26	-	-	9.20	4.00	-	-
6	ಶ್ರೀರಂಗಪಟ್ಟಣ	2.88	1.44	-	-	-	-	-	-	0.04	0.04	-	-	1.67	0.20	-	-
7	ನಾಗಮಂಗಲ	2.88	1.44	-	-	-	-	-	-	-	-	-	-	-	-	-	-
		19.76	9.88	0.00	0.00	0.00	0.00	0.00	0.00	0.30	0.30	0.00	0.00	10.87	4.2	0.00	0.00

ಅಲ್ಪಸಂಖ್ಯಾತರಿಗೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ		ಜೈನ್, ಬೌದ್ಧ, ಮತ್ತು ಸಿಖ್ ಸಮುದಾಯದ ಅಭಿವೃದ್ಧಿ		ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ		ಅಲ್ಪಸಂಖ್ಯಾತರ ವಸತಿ ಶಾಲೆ/ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣ		ಪ್ರಧಾನಮಂತ್ರಿ ಜನ ವಿಕಾಸ್ ಕಾರ್ಯಕ್ರಮ (ಎಂ.ಎಸ್.ಡಿ.ಪಿ)		ಅಲ್ಪಸಂಖ್ಯಾತರಿಗಾಗಿ ಹಾಸ್ಟಲ್‌ಗಳು		ಅಲ್ಪಸಂಖ್ಯಾತರಿಗಾಗಿ ಕಾನೂನು ಪದವೀಧರರಿಗೆ ತರಬೇತಿ ಭತ್ಯೆ		ಅಲ್ಪಸಂಖ್ಯಾತರ ಅನಾಥಾಲಯಗಳಿಗೆ ಸಹಾಯಾನುದಾನ		ಕಾರ್ಯಕಾರಿ ಸಿಬ್ಬಂದಿ	
ಬಿಡುಗಡೆ	ಖರ್ಚು	ಬಿಡುಗಡೆ	ಖರ್ಚು	ಬಿಡುಗಡೆ	ಖರ್ಚು	ಬಿಡುಗಡೆ	ಖರ್ಚು	ಬಿಡುಗಡೆ	ಖರ್ಚು	ಬಿಡುಗಡೆ	ಖರ್ಚು	ಬಿಡುಗಡೆ	ಖರ್ಚು	ಬಿಡುಗಡೆ	ಖರ್ಚು	ಬಿಡುಗಡೆ	ಖರ್ಚು
19	20	21	22	23	24	25	26	27	28	29	30	31	32	33	34	35	36
-	-	-	-	-	-	-	-	-	-	56.01	30.51	0.90	0.35	-	-	24.19	20.00
-	-	-	-	-	-	-	-	-	-		-	-	-	-	-	-	-
-	-	-	-	-	-	-	-	-	-	-	-	-	-	-	-	-	-
-	-	-	-	-	-	-	-	-	-	36.01	20	-	-	-	-	-	-
-	-	-	-	-	-	-	-	-	-	-	-	-	-	-	-	-	-
-	-	-	-	-	-	-	-	-	-	-	-	-	-	-	-	-	-
-	-	-	-	-	-	-	-	-	-	-	-	-	-	-	-	-	-
0.00	0.00	0.00	0.00	0.00	0.00	0.00	0.00	0.00	0.00	92.02	50.51	0.90	0.35	0.00	0.00	15.35	20.00

ನಿರ್ದೇಶಕರು
ಅಲ್ಪಸಂಖ್ಯಾತರ ನಿರ್ದೇಶನಾಲಯ
ಬೆಂಗಳೂರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1523

ಸದಸ್ಯರ ಹೆಸರು : ಶ್ರೀ ಶ್ರೀನಿವಾಸ್ ಎಂ. (ಮಂಡ್ಯ)

ಉತ್ತರಿಸುವ ದಿನಾಂಕ : 10-03-2021

ಉತ್ತರಿಸುವ ಸಚಿವರು : ಕೃಷಿ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ.	ಮಂಡ್ಯ ವಿಧಾನಸಭಾ ಕ್ಷೇತ್ರದಲ್ಲಿ ಕೃಷಿ ಇಲಾಖೆಯ ವತಿಯಿಂದ ಎಸ್.ಸಿ.ಪಿ. ಮತ್ತು ಟಿ.ಎಸ್.ಪಿ ಯೋಜನೆಯಡಿ ನೀಡಿರುವ ಸೌಲಭ್ಯಗಳಾವುವು;	ಮಂಡ್ಯ ವಿಧಾನ ಸಭಾ ಕ್ಷೇತ್ರದಲ್ಲಿ ಕೃಷಿ ಇಲಾಖಾವತಿಯಿಂದ ಎಸ್.ಸಿ.ಪಿ. ಮತ್ತು ಟಿ.ಎಸ್.ಪಿ ಯೋಜನೆಯಡಿ ನೀಡಿರುವ ಸೌಲಭ್ಯಗಳು ಮತ್ತು ಅನುಷ್ಠಾನಗೊಳಿಸಿರುವ ಕಾರ್ಯಕ್ರಮಗಳ ವಿವರಗಳನ್ನು ಅನುಬಂಧ-1 ಮತ್ತು 2ರಲ್ಲಿ ನೀಡಿದೆ.
ಆ.	ಯಾವ ಯಾವ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗಿದೆ;	ಜಲಾನಯನ ಅಭಿವೃದ್ಧಿ ಇಲಾಖಾಯವತಿಯಿಂದ 2020-21ನೇ ಸಾಲಿನಲ್ಲಿ ಮಂಡ್ಯ ವಿಧಾನಸಭಾ ಕ್ಷೇತ್ರದಲ್ಲಿ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ-ಇತರೆ ಉಪಚಾರಗಳು ಯೋಜನೆಯ ಎಸ್.ಸಿ.ಪಿ ಘಟಕದಡಿ ರೂ.2.10 ಲಕ್ಷ ಅನುದಾನ ಬಿಡುಗಡೆಯಾಗಿದ್ದು, 1 ತಡೆಅಣೆ ಕಾಮಗಾರಿಯನ್ನು ನಿರ್ಮಿಸಲಾಗಿರುತ್ತದೆ. ರಾಷ್ಟ್ರೀಯ ಸುಸ್ಥಿರ ಕೃಷಿ ಅಭಿಯಾನ-ಮಳೆಯಾಶ್ರಿತ ಪ್ರದೇಶ ಯೋಜನೆಯ ಎಸ್.ಸಿ.ಪಿ ಘಟಕದಡಿ ರೂ.6.75 ಲಕ್ಷ ಅನುದಾನ ಬಿಡುಗಡೆಯಾಗಿದ್ದು, ರೂ.0.27 ಲಕ್ಷ ಅನುದಾನ ಸಮಗ್ರ ಕೃಷಿ ಪದ್ಧತಿ-ಪಶು ಸಂಗೋಪನೆ ಘಟಕಕ್ಕೆ ವೆಚ್ಚ ಭರಿಸಲಾಗಿರುತ್ತದೆ.
ಇ.	ಮಂಡ್ಯ ಜಿಲ್ಲೆಗೆ ಬಿಡುಗಡೆಯಾಗಿರುವ ಅನುದಾನವೆಷ್ಟು? (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)	ಅನುದಾನದ ವಿವರಗಳನ್ನು ಅನುಬಂಧ -3 (ಅ) ಮತ್ತು 3 (ಆ)ರಲ್ಲಿ ನೀಡಿದೆ.

ಸಂಖ್ಯೆ: AGRI-AML/63/2021

(ಬಿ.ಸಿ. ಪಾಟೀಲ್)
ಕೃಷಿ ಸಚಿವರು

LAQ 1523 ಅನುಬಂಧ-1

2020-21ನೇ ಸಾಲಿನಲ್ಲಿ ಕೃಷಿ ಇಲಾಖೆಯ ವತಿಂದ ಮಂಡ್ಯ ವಿಧಾನಸಭಾ ಕ್ಷೇತ್ರಕ್ಕೆ ಎಸ್.ಸಿ.ಪಿ ಮತ್ತು ಟಿ.ಎಸ್.ಪಿ ಯೋಜನೆಯಡಿ ನೀಡಿರುವ ಸೌಲಭ್ಯಗಳ ವಿವರ
(ರೂ. ಲಕ್ಷಗಳಲ್ಲಿ)

ಕ್ರ.ಸಂ	ಯೋಜನೆಯ ಹೆಸರು ಮತ್ತು ಲೆಕ್ಕಶೀರ್ಷಿಕೆ	ಪ.ಜಾತಿ				ಪ.ಪಂ			
		ಬಿಡುಗಡೆ	ಸಾಧನೆ		ಫಲಾನುಭವಿಗಳ ಸಂಖ್ಯೆ	ಬಿಡುಗಡೆ	ಸಾಧನೆ		ಫಲಾನುಭವಿಗಳ ಸಂಖ್ಯೆ
			ಭೌತಿಕ	ಆರ್ಥಿಕ			ಭೌತಿಕ	ಆರ್ಥಿಕ	
ರಾಜ್ಯ ವಲಯ									
1	ಕೃಷಿ ಪರಿಕರಗಳು ಮತ್ತು ಗುಣಮಟ್ಟ ನಿಯಂತ್ರಣ (2401-00-103-0-15)								
ಅ	ಬೀಜಗಳ ಪೂರೈಕೆ (ಕ್ವಿಂಟಾಲ್)	0.35	25.00	0.35	85	0.00	0.00	0.00	0
ಆ	ಕೃಷಿ ಯಾಂತ್ರೀಕರಣ	10.50	38.00	6.10	38	0.00	0.00	0.00	0
ಇ	ಕೃಷಿ ಸಂಸ್ಕರಣೆ	2.50	48.00	2.35	48	0.00	0.00	0.00	0
ಈ	ಮಣ್ಣಿನ ಸತ್ವ ಹೆಚ್ಚಿಸುವಿಕೆ (ಹೆ)	0.50	22.00	0.50	18	0.00	0.00	0.00	0
	ಉಪ ಮೊತ್ತ	**13.85**	**133.00**	**9.30**	**189**	**0.00**	**0.00**	**0.00**	**0**
	ರಾಜ್ಯ ವಲಯ ಒಟ್ಟು	**13.85**	**133.00**	**9.30**	**189**	**0.00**	**0.00**	**0.00**	**0**
ಕೇಂದ್ರ ವಲಯ									
2	ರಾಷ್ಟ್ರೀಯ ಆಹಾರ ಸುರಕ್ಷತೆ ಮಿಶನ್ CSS (2401-00-102-0-08)	6.00	315.00	3.15	315	2.15	81.00	1.12	81
3	ಮುಖ್ಯಮಂತ್ರಿಯವರ ಸೂಕ್ಷ್ಮ ನೀರಾವರಿ ಯೋಜನೆ (2401-00-108-1-15)	12.00	42.00	8.00	40	0.00	0.00	0.00	0
4	ಮಳೆಯಾಶ್ರಿತ ಪ್ರದೇಶಾಭಿವೃದ್ಧಿ (2401-00-108-1-16)	6.30	4.00	1.00	4	0.00	0.00	0.00	0
5	ಕೃಷಿ ಯಾಂತ್ರೀಕರಣ ಉಪ ಅಭಿಯಾನ (2401-00-113-0-02)	9.30	75.00	9.30	75	0.00	0.00	0.00	0
6	ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ (CSS) (2401-00-800-1-57)	0.14	11.00	0.14	11	0.00	0.00	0.00	0
7	ಮಣ್ಣಿನ ಫಲವತ್ತತೆಯ ಯೋಜನೆ (2402-00-101-0-03)	0.19	1.00	0.19	30	0.00	0.00	0.00	0
	ಕೇಂದ್ರ ವಲಯ ಒಟ್ಟು	**33.93**	**448.00**	**21.78**	**475**	**2.15**	**81.00**	**1.12**	**81**
	ಮಹಾಮೊತ್ತ (ರಾಜ್ಯ+ ಕೇಂದ್ರ ವಲಯ)	**47.78**	**581.00**	**31.08**	**664**	**2.15**	**81.00**	**1.12**	**81**

ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1523ರ ಅನುಬಂಧ-1

2020-21ನೇ ಸಾಲಿನಲ್ಲಿ ಕೃಷಿ ಇಲಾಖೆಯಿಂದ ಮಂಡ್ಯ ಜಿಲ್ಲೆಗೆ ಎಸ್.ಸಿ.ಪಿ ಮತ್ತು ಟಿ.ಎಸ್.ಪಿ ಯೋಜನೆಯಡಿ ಅನುಷ್ಠಾನಗೊಳಿಸಿರುವ ಕಾರ್ಯಕ್ರಮಗಳ ವಿವರ

ರಾಜ್ಯ ಸರ್ಕಾರದ ಯೋಜನೆಗಳು:

1) **ಬಿತ್ತನೆ ಬೀಜಗಳ ಪೂರೈಕೆ:** ಈ ಯೋಜನೆಯಡಿ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75 ರ ರಿಯಾಯಿತಿ ದರದಲ್ಲಿ ಭತ್ತ, ರಾಗಿ, ಜೋಳ, ಮುಸುಕಿನ ಜೋಳ, ಸಜ್ಜೆ, ತೊಗರಿ, ಕಡಲೆ, ಹೆಸರು, ಉದ್ದು, ಅಲಸಂದೆ, ನೆಲಗಡಲೆ, ಸೂರ್ಯಕಾಂತಿ, ಸೋಯಾ ಅವರೆ, ಹತ್ತಿ ಇತ್ಯಾದಿ ಬೆಳೆಗಳ ಪ್ರಮಾಣಿತ/ ನಿಜ ಚೀಟಿ ಬಿತ್ತನೆ ಬೀಜಗಳನ್ನು ವಿತರಣೆ ಮಾಡಲಾಗುವುದು.

2) **ಮಣ್ಣಿನ ಸತ್ವ ಹೆಚ್ಚಿಸುವಿಕೆ :** ಮಣ್ಣಿನ ಫಲವತ್ತತೆ ಮತ್ತು ಬೆಳೆ ಉತ್ಪಾದಕತೆಯನ್ನು ಹೆಚ್ಚಿಸಲು ಜೈವಿಕ ಗೊಬ್ಬರಗಳು, ಲಘುಪೋಷಕಾಂಶಗಳು, ಜಿಪ್ಸಂ, ಕೃಷಿ ಸುಣ್ಣ/ಡೊಲೋಮೈಟ್, ಹಸಿರೆಲೆ ಗೊಬ್ಬರ ಬೀಜ, ಎರೆಹುಳು ಗೊಬ್ಬರ, ಸಾವಯವ ಗೊಬ್ಬರಗಳನ್ನು ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75ರ ಸಹಾಯಧನದಡಿ ನೀಡುವುದರ ಜೊತೆಗೆ ಬಯೋಡೈಜೆಸ್ಟರ್ ಘಟಕ ಮತ್ತು ಎರೆಹುಳು ಗೊಬ್ಬರ ಉತ್ಪಾದನೆ ಘಟಕ ಸ್ಥಾಪನೆಗೆ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75ರ ಸಹಾಯಧನವನ್ನು ನೀಡಲಾಗುತ್ತಿದೆ.

3) **ಕೃಷಿ ಯಾಂತ್ರೀಕರಣ ಮತ್ತು ಕೃಷಿ ಸಂಸ್ಕರಣೆ :** ಈ ಕಾರ್ಯಕ್ರಮದಡಿ ರೈತರು ಸಕಾಲದಲ್ಲಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಲು ಹಾಗೂ ಕೃಷಿ ಕಾರ್ಮಿಕರ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಲು ಕೃಷಿ ಯಂತ್ರೋಪಕರಣಗಳಿಗೆ ಸಹಾಯಧನ ಒದಗಿಸಲಾಗುವುದು (ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.90 ರ ಸಹಾಯಧನದಲ್ಲಿ ರೂ.100000/- ಗರಿಷ್ಠ ಮಿತಿಯಲ್ಲಿ) ಸಣ್ಣ ಟ್ರ್ಯಾಕ್ಟರ್ ಖರೀದಿಗೆ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಸಣ್ಣ ಟ್ರ್ಯಾಕ್ಟರುಗಳಿಗೆ ರೂ.3.00ಲಕ್ಷ ಸಹಾಯಧನ ನೀಡಲಾಗುವುದು. ಕೃಷಿ ಸಂಸ್ಕರಣೆ ಘಟಕಗಳು ಮತ್ತು ಟಾರ್ಪಾಲಿನ್ ಗಳಿಗೆ ಜಾತಿ/ ಪಂಗಡದ ರೈತರಿಗೆ ಶೇ.90ರ ಸಹಾಯಧನವನ್ನು ನೀಡಲಾಗುತ್ತದೆ.

ಕೇಂದ್ರ ಪುರಸ್ಕೃತ ಯೋಜನೆಗಳು:

4) **ಮಣ್ಣಿನ ಫಲವತ್ತತೆಯ ಯೋಜನೆ:** ರಾಜ್ಯದಲ್ಲಿ ಕೃಷಿ ಹಿಡುವಳಿ ಹೊಂದಿರುವ ಎಲ್ಲಾ ರೈತರಿಗೆ ಮಣ್ಣು ಪರೀಕ್ಷೆ ಶಿಫಾರಸ್ಸುಗಳನ್ನು ಒಳಗೊಂಡ ಮಣ್ಣು ಆರೋಗ್ಯ ಚೀಟಿಗಳನ್ನು ವಿತರಿಸಲಾಗುತ್ತಿದೆ. ಮಣ್ಣು ಆರೋಗ್ಯ ಚೀಟಿ ಶಿಫಾರಸ್ಸಿನ ಅನ್ವಯ ಪ್ರಾತ್ಯಕ್ಷಿಕೆಗಳನ್ನು ಕೈಗೊಳ್ಳಲು ರಿಯಾಯಿತಿ ದರದಲ್ಲಿ ರಸಗೊಬ್ಬರ, ಸಾವಯವ ಗೊಬ್ಬರ, ಜೈವಿಕ ಗೊಬ್ಬರ, ಲಘುಪೋಷಕಾಂಶ ಮಣ್ಣು ಸುಧಾರಕಗಳನ್ನು ಗರಿಷ್ಠ ರೂ.2500/-(ಒಂದು ಹೇಕ್ಟೇರಿಗೆ) ಸಹಾಯಧನ ನೀಡಲಾಗುತ್ತದೆ. ಈ ಕಾರ್ಯಕ್ರಮವನ್ನು ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಮೊದಲು ಮಾದರಿ ಗ್ರಾಮಗಳಲ್ಲಿ ಮಾತ್ರ ಅನುಷ್ಠಾನಗೊಳಿಸಲಾಗುತ್ತಿದೆ. ಇದಲ್ಲದೆ, ಗ್ರಾಮ ಮಟ್ಟದ ಮಣ್ಣು ಪರೀಕ್ಷಾ ಘಟಕಗಳನ್ನು ಸ್ಥಾಪಿಸಲು ಶೇ.75ರ ಸಹಾಯಧನ (ರೂ.3.75ಲಕ್ಷ) ನೀಡಲಾಗುತ್ತಿದೆ.

5) **ರಾಷ್ಟ್ರೀಯ ಆಹಾರ ಸುರಕ್ಷತಾ ಅಭಿಯಾನ:** ಈ ಯೋಜನೆಯಡಿ ಬತ್ತ, ದ್ವಿದಳಧಾನ್ಯ, ನ್ಯೂಟ್ರಿ ಸಿರಿಧಾನ್ಯ, ಎಣ್ಣೆಕಾಳು, ಕಬ್ಬು ಮತ್ತು ಹತ್ತಿ ಬೆಳೆಗಳ ಉತ್ಪಾದನೆಯನ್ನು ಹೆಚ್ಚಿಸಲು ಆಧುನಿಕ ತಾಂತ್ರಿಕತೆಗಳ ಗುಚ್ಛ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸುವುದರ ಜೊತೆಗೆ ಬತ್ತ, ದ್ವಿದಳಧಾನ್ಯ, ನ್ಯೂಟ್ರಿ ಸಿರಿಧಾನ್ಯ ಉತ್ಪಾದನೆಗೆ ಬಿತ್ತನೆ ಬೀಜ, ಲಘು ಪೋಷಕಾಂಶಗಳು, ಜೈವಿಕ ಗೊಬ್ಬರಗಳು, ಸಸ್ಯ ಸಂರಕ್ಷಣಾ ರಾಸಾಯನಿಕಗಳು, ಜಿಪ್ಸಂ/ ಕೃಷಿ ಸುಣ್ಣ, ಕೃಷಿ ಉಪಕರಣಗಳು, ತುಂತುರು ನೀರಾವರಿ ಘಟಕಗಳ ಅಳವಡಿಕೆಗೆ ಶೇ.50ರ ಸಹಾಯಧನವನ್ನು ನೀಡಲಾಗುತ್ತದೆ. ಇದಲ್ಲದೆ, ದೃಢೀಕೃತ ಬಿತ್ತನೆ ಬೀಜದ ಉತ್ಪಾದನೆಯನ್ನು ಪ್ರೋತ್ಸಾಹಿಸಲು ದ್ವಿದಳಧಾನ್ಯ ಬೆಳೆಗಳಲ್ಲಿ ಪ್ರತಿ ಕ್ವಿಂಟಾಲಿಗೆ ರೂ.5000/- ಮತ್ತು ಸಿರಿಧಾನ್ಯಗಳಿಗೆ ರೂ.3000/- ಪ್ರೋತ್ಸಾಹ ಧನ ನೀಡಲಾಗುತ್ತದೆ.

6) **ಮುಖ್ಯಮಂತ್ರಿಯವರ ಸೂಕ್ಷ್ಮ ನೀರಾವರಿ ಯೋಜನೆ:** ರಾಜ್ಯದಲ್ಲಿ ಲಭ್ಯವಿರುವ ನೀರನ್ನು ಸಮರ್ಥ ಮತ್ತು ಸಮರ್ಪಕ ಬಳಕೆಗೆ ಪ್ರೋತ್ಸಾಹಿಸಲು ಹಾಗೂ ಮಿತ ಬಳಕೆಯಿಂದ ಅಧಿಕ ಇಳುವರಿ ಪಡೆಯಲು ಹಾಗೂ ಸೂಕ್ಷ್ಮ (ಹನಿ/ತುಂತುರು) ನೀರಾವರಿ ಪದ್ಧತಿಯ ಅಳವಡಿಕೆಗೆ ಎಲ್ಲಾ ವರ್ಗದ ರೈತರಿಗೆ 2.0 ಹೆಕ್ಟೇರ್ ಪ್ರದೇಶದವರೆಗೆ ಶೇ.90 ರಷ್ಟು ಹಾಗೂ 2.0ಹೆಕ್ಟೇರಿಗಿಂತ ಮೇಲ್ಪಟ್ಟು 5.0ಹೆಕ್ಟೇರ್ ಪ್ರದೇಶದವರೆಗೆ ಶೇ.45ರ ಸಹಾಯಧನವನ್ನು ನೀಡಲಾಗುತ್ತಿದೆ.

7) **ಕೃಷಿ ಯಾಂತ್ರೀಕರಣ ಉಪ ಅಭಿಯಾನ:** ಈ ಯೋಜನೆಯ ಉದ್ದೇಶ ಕೃಷಿ ಯಂತ್ರೋಪಕರಣಗಳ ಬಳಕೆಯಿಂದ ಸಾಗುವಳಿ ವಿಸ್ತೀರ್ಣದಲ್ಲಿ ಯಾಂತ್ರೀಕೃತ ಶಕ್ತಿಯನ್ನು ಪ್ರತಿ ಹೆಕ್ಟೇರಿಗೆ 2.0ಕಿಲೋ ವ್ಯಾಟ್ ಗಳಷ್ಟು ಹೆಚ್ಚಿಸುವುದಾಗಿದೆ. ಇದರಡಿ ಕೃಷಿ ಯಂತ್ರೋಪಕರಣಗಳನ್ನು ಪಡೆಯಲು ಹಣಕಾಸಿನ ನೆರವು, ಬಾಡಿಗೆ ಆಧಾರಿತ ಸೇವಾ ಕೇಂದ್ರಗಳಿಗೆ, ಗ್ರಾಮ ಮಟ್ಟದ ಯಂತ್ರೋಪಕರಣಗಳ ಬ್ಯಾಂಕ್/ ಹೈಟೆಕ್ ಉಪಕರಣಗಳ ಹಬ್ ಗಾಗಿ ಹಣಕಾಸಿನ ನೆರವು ನೀಡಲಾಗುವುದು.

8) **ಮಳೆಯಾಶ್ರಿತ ಪ್ರದೇಶ ಅಭಿವೃದ್ಧಿ:** ಈ ಕಾರ್ಯಕ್ರಮದಡಿಯಲ್ಲಿ ಮಳೆಯಾಶ್ರಿತ ಪ್ರದೇಶದಲ್ಲಿ ರೈತರ ಕ್ಷೇತ್ರದಲ್ಲಿ ಸಮಗ್ರ ಕೃಷಿ ಪದ್ಧತಿಯನ್ನು ಪ್ರೋತ್ಸಾಹಿಸಲು ಬಹು ಬೆಳೆ ಪದ್ಧತಿ, ಅಂತರ ಬೆಳೆ, ಮಿಶ್ರಬೆಳೆ (ಏಕದಳ ಧಾನ್ಯ, ದ್ವಿದಳಧಾನ್ಯ ಮತ್ತು ಎಣ್ಣೆಕಾಳು ಆಧಾರಿತ) ಪದ್ಧತಿಗಳು, ತೋಟಗಾರಿಕೆ ಆಧಾರಿತ, ಪಶುಸಂಗೋಪನೆ ಆಧಾರಿತ, ಕೃಷಿ ಅರಣ್ಯ ಆಧಾರಿತ ಬೆಳೆ ಪದ್ಧತಿಗಳ ಅನುಷ್ಠಾನ, ಮಣ್ಣು ಮತ್ತು ನೀರು ಸಂರಕ್ಷಣಾ ಕ್ರಮಗಳು, ಮೌಲ್ಯವರ್ಧನೆ ಮತ್ತು ಸಂಪನ್ಮೂಲಗಳ ಸಂರಕ್ಷಣೆ ಮುಂತಾದ ಘಟಕಗಳನ್ನು ಅನುಷ್ಠಾನ ಮಾಡುವುದರ ಮೂಲಕ ರೈತರ ಆದಾಯವನ್ನು ಹೆಚ್ಚಿಸುವುದರ ಜೊತೆಗೆ ಬರ, ನೆರೆ ಮತ್ತು ಇತರೆ ಹವಾಮಾನ್ಯ ವೈಪರೀತ್ಯಗಳನ್ನು ಎದುರಿಸಲು ಸಜ್ಜುಗೊಳಿಸಲಾಗುತ್ತದೆ. ಇದರಡಿ ಸಮಗ್ರ ಕೃಷಿ ಪದ್ಧತಿ ಅಳವಡಿಕೆಗೆ ಅವಶ್ಯವಿರುವ ಪರಿಕರಗಳು ಇತ್ಯಾದಿಗಳಿಗೆ ಶೇ.50ರ ಸಹಾಯಧನವನ್ನು ನೀಡಲಾಗುವುದು.

9) **ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ:** ಈ ಯೋಜನೆಯಡಿ ಕೃಷಿ ಮತ್ತು ಸಂಬಂಧಿಸಿದ ವಲಯಗಳಲ್ಲಿ ಹೆಚ್ಚಿನ ಸಾರ್ವಜನಿಕ ಹೂಡಿಕೆಗಾಗಿ ರಾಜ್ಯಗಳನ್ನು ಪ್ರೋತ್ಸಾಹಿಸಲಾಗುತ್ತದೆ. ಜಿಲ್ಲಾ ಕೃಷಿ ಯೋಜನೆಗಳಲ್ಲಿ ಸ್ಥಳೀಯ ಆದ್ಯತೆಗಳು / ಅವಶ್ಯಕತೆಗಳು/ ಬೆಳೆಗಳಿಗೆ ಹೆಚ್ಚಿನ ಪ್ರಾಮುಖ್ಯತೆಯನ್ನು ನೀಡಲು, ಹೊಸ ತಾಂತ್ರಿಕತೆಗಳನ್ನು ಅಳವಡಿಸಿ, ಮುಖ್ಯ ಬೆಳೆಗಳ ಉತ್ಪಾದಕತೆಯಲ್ಲಿ ಇರುವ ವ್ಯತ್ಯಯದ ಪ್ರಮಾಣವನ್ನು ಕಡಿತಗೊಳಿಸಲು, ಕೃಷಿ ಮತ್ತು ಸಂಬಂಧಿತ ವಲಯಗಳ ಎಲ್ಲಾ ಅವಶ್ಯಕತೆಗಳನ್ನು ತೆಗೆದುಕೊಂಡು ಉತ್ಪಾದನೆ/ ಉತ್ಪಾದಕತೆಯ ವಿವಿಧ ಘಟಕಗಳಲ್ಲಿ ಬದಲಾವಣೆ ತರಲು ಮತ್ತು ರೈತರಿಗೆ ಹೆಚ್ಚಿನ ಲಾಭಾಂಶ ದೊರಕಿಸಿಕೊಡಲು ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತದೆ. ಈ ಸಂಬಂಧ, ಕೃಷಿ ಮತ್ತು ಕೃಷಿ ಸಂಬಂಧಿತ ಇಲಾಖೆ/ ಸಂಸ್ಥೆಗಳಿಂದ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲಾಗುತ್ತದೆ.

ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1523ರ ಅನುಬಂಧ-2

2020-21ನೇ ಸಾಲಿನಲ್ಲಿ ಕೃಷಿ ಇಲಾಖೆಯಿಂದ ಮಂಡ್ಯ ಜಿಲ್ಲೆಗೆ ಎಸ್.ಸಿ.ಪಿ ಮತ್ತು ಟಿ.ಎಸ್.ಪಿ ಯೋಜನೆಯಡಿ ಅನುಷ್ಠಾನಗೊಳಿಸಿರುವ ಕಾರ್ಯಕ್ರಮಗಳ ವಿವರ

ಕ್ರ.ಸಂ	ಯೋಜನೆಯ/ ಕಾರ್ಯಕ್ರಮಗಳ ವಿವರ
1	ಕೃಷಿ ಪರಿಕರಗಳು ಮತ್ತು ಗುಣಮಟ್ಟ ನಿಯಂತ್ರಣ (2401-00-103-0-15)
	ಬೀಜಗಳ ಪೂರೈಕೆ
	ಕೃಷಿ ಯಾಂತ್ರೀಕರಣ
	ಕೃಷಿ ಸಂಸ್ಕರಣೆ
	ಮಣ್ಣಿನ ಸತ್ವ ಹೆಚ್ಚಿಸುವಿಕೆ
2	ರಾಷ್ಟ್ರೀಯ ಆಹಾರ ಸುರಕ್ಷತೆ ಮಿಶನ್ (2401-00-102-0-08)
3	ಮುಖ್ಯಮಂತ್ರಿಗಳ ಸೂಕ್ಷ್ಮ ನೀರಾವರಿ ಯೋಜನೆ -2401-00-108-1-15
4	ಮಳೆ ಆಶ್ರಿತ ಪ್ರದೇಶದ ಅಭಿವೃದ್ಧಿ (RAD)-2401-00-108-1-16
5	ಕೃಷಿ ಯಾಂತ್ರೀಕರಣ ಉಪ ಅಭಿಯಾನ (SMAM)-2401-00-113-0-02
6	ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ -2401-00-800-1-57
7	ಮಣ್ಣಿನ ಫಲವತ್ತತೆಯ ಯೋಜನೆ-2402-00-101-0-03

LAQ 1523 ಅನುಬಂಧ-3 (ಅ)

2020-21ನೇ ಸಾಲಿನಲ್ಲಿ ಕೃಷಿ ಇಲಾಖೆಯಿಂದ ಮಂಡ್ಯ ಜಿಲ್ಲೆಗೆ ಎಸ್.ಸಿ.ಪಿ ಮತ್ತು ಟಿ.ಎಸ್.ಪಿ ಯೋಜನೆಯಡಿ ಬಿಡುಗಡೆಯಾಗಿರುವ ಅನುದಾನದ ವಿವರ (ರೂ. ಲಕ್ಷಗಳಲ್ಲಿ)

ಕ್ರ. ಸಂ	ಯೋಜನೆಯ ಹೆಸರು ಮತ್ತು ಲೆಕ್ಕಶೀರ್ಷಿಕೆ	ಮಂಡ್ಯ				ಮದ್ದೂರು				ಮಳವಳ್ಳಿ				ಶ್ರೀರಂಗಪಟ್ಟಣ			
		ಪ.ಜಾತಿ		ಪ.ಪಂ		ಪ.ಜಾತಿ		ಪ.ಪಂ		ಪ.ಜಾತಿ		ಪ.ಪಂ		ಪ.ಜಾತಿ		ಪ.ಪಂ	
		ಬಿಡುಗಡೆ	ವೆಚ್ಚ	ಬಿಡುಗಡೆ	ವೆಚ್ಚ	ಬಿಡುಗಡೆ	ವೆಚ್ಚ	ಬಿಡುಗಡೆ	ವೆಚ್ಚ	ಬಿಡುಗಡೆ	ವೆಚ್ಚ	ಬಿಡುಗಡೆ	ವೆಚ್ಚ	ಬಿಡುಗಡೆ	ವೆಚ್ಚ	ಬಿಡುಗಡೆ	ವೆಚ್ಚ
	ರಾಜ್ಯ ವಲಯ																
1	ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪ ಯೋಜನೆ ಕಾಯ್ದೆ 2013ರಡಿ ಬಳಕೆಯಾಗದೆ ಇರುವ ಮೊತ್ತ (2401-00-001-1-75)	0.00	0.00	0.00	0.00	0.00	0.00	0.00	0.00	3.00	0.00	0.00	0.00	0.00	0.00	0.00	0.00
2	ಕೃಷಿ ಭಾಗ್ಯ 2401-00-102-0-27	0.00	0.00	0.00	0.00	0.00	0.00	0.00	0.00	0.00	0.00	0.00	0.00	0.00	0.00	0.00	0.00
3	ಕೃಷಿ ಪರಿಕರಗಳು ಮತ್ತು ಗುಣಮಟ್ಟ ನಿಯಂತ್ರಣ (2401-00-103-0-15)																
ಅ	ಬೀಜಗಳ ಪೂರೈಕೆ (ಕ್ವಿಂಟಾಲ್)	0.52	0.52	0.00	0.00	0.37	0.37	0.00	0.00	2.37	2.35	0.00	0.00	1.50	1.50	0.00	0.00
ಆ	ಕೃಷಿ ಯಾಂತ್ರೀಕರಣ	18.50	9.31	0.00	0.00	20.61	16.71	0.00	0.00	24.45	24.40	0.00	0.00	13.00	9.10	0.00	0.00
ಇ	ಕೃಷಿ ಸಂಸ್ಕರಣೆ	3.69	3.24	0.18	0.18	2.12	1.68	0.26	0.26	5.50	3.40	0.26	0.18	1.75	1.24	0.35	0.00
ಈ	ಮಣ್ಣಿನ ಸತ್ವ ಹೆಚ್ಚಿಸುವಿಕೆ (ಹೆ)	0.80	0.80	0.06	0.06	0.55	0.55	0.06	0.06	1.84	1.19	0.06	0.06	0.41	0.41	0.05	0.05
	ಉಪ ಮೊತ್ತ	**23.51**	13.86	**0.23**	**0.23**	**23.65**	**19.31**	**0.32**	**0.32**	**34.15**	**31.34**	**0.32**	**0.23**	**16.66**	**12.25**	**0.41**	**0.05**
4	ಸಾವಯವ ಕೃಷಿ (2401-00-104-0-12)	0.00	0.00	0.00	0.00	0.00	0.00	0.00	0.00	0.00	0.00	0.00	0.00	0.00	0.00	0.00	0.00
5	ಹೊಸ ಬೆಳೆ ವಿಮಾ ಯೋಜನೆ(ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆ) (2401-00-110-0-07)	0.00	0.00	0.00	0.00	0.00	0.00	0.00	0.00	0.00	0.00	0.00	0.00	0.00	0.00	0.00	0.00
	ರಾಜ್ಯ ವಲಯ ಒಟ್ಟು	23.51	13.86	0.23	0.23	23.65	19.31	0.32	0.32	37.15	31.34	0.32	0.23	16.66	12.25	0.41	0.05

ಕ್ರ ಸಂ	ಯೋಜನೆಯ ಹೆಸರು ಮತ್ತು ಲೆಕ್ಕಶೀರ್ಷಿಕೆ	ಮಂಡ್ಯ				ಮದ್ದೂರು				ಮಳವಳ್ಳಿ				ಶ್ರೀರಂಗಪಟ್ಟಣ			
		ಪ.ಜಾತಿ		ಪ.ಪಂ		ಪ.ಜಾತಿ		ಪ.ಪಂ		ಪ.ಜಾತಿ		ಪ.ಪಂ		ಪ.ಜಾತಿ		ಪ.ಪಂ	
		ಬಿಡುಗಡೆ	ವೆಚ್ಚ	ಬಿಡುಗಡೆ	ವೆಚ್ಚ	ಬಿಡುಗಡೆ	ವೆಚ್ಚ	ಬಿಡುಗಡೆ	ವೆಚ್ಚ	ಬಿಡುಗಡೆ	ವೆಚ್ಚ	ಬಿಡುಗಡೆ	ವೆಚ್ಚ	ಬಿಡುಗಡೆ	ವೆಚ್ಚ	ಬಿಡುಗಡೆ	ವೆಚ್ಚ
	ಕೇಂದ್ರ ವಲಯ																
7	ರಾಷ್ಟ್ರೀಯ ಆಹಾರ ಸುರಕ್ಷತೆ ಮಿಶನ್ CSS (2401-00-102-0-08)	11.49	6.76	4.31	2.07	9.29	5.04	3.50	1.55	11.95	6.74	3.88	1.03	6.92	3.56	2.87	0.76
8	ಮುಖ್ಯಮಂತ್ರಿಯವರ ಸೂಕ್ಷ್ಮ ನೀರಾವರಿ ಯೋಜನೆ (2401-00-108-1-15)	17.00	13.50	0.00	0.00	15.00	12.33	0.00	0.00	29.30	22.36	0.00	0.00	3.00	1.72	1.60	1.56
9	ಮಳೆಯಾಶ್ರಿತ ಪ್ರದೇಶಾಭಿವೃದ್ಧಿ (2401-00-108-1-16)	10.33	1.62	0.00	0.00	0.00	0.00	9.68	0.00	0.00	0.00	0.00	0.00	0.00	0.00	0.00	0.00
10	ಕೃಷಿ ಯಾಂತ್ರೀಕರಣ ಉಪ ಅಭಿಯಾನ (2401-00-113-0-02)	15.60	15.53	0.00	0.00	11.91	11.91	1.61	1.38	0.00	0.00	0.00	0.00	13.14	12.98	0.08	0.08
11	ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ (CSS) (2401-00-800-1-57)	0.20	0.20	0.00	0.00	0.20	0.20	0.00	0.00	0.00	0.00	0.00	0.00	0.16	0.16	0.00	0.00
12	ಮಣ್ಣಿನ ಫಲವತ್ತತೆಯ ಯೋಜನೆ (2402-00-101-0-03)	0.37	0.37	0.00	0.00	0.36	0.36	0.00	0.00	0.00	0.00	0.00	0.00	0.35	0.02	0.08	0.01
	ಕೇಂದ್ರ ವಲಯ ಒಟ್ಟು	**54.98**	**37.97**	4.31	2.07	**36.76**	**29.84**	14.79	2.93	**41.25**	**29.10**	3.88	1.03	23.56	**18.44**	4.62	2.41
ಮಹಾಮೊತ್ತ (ರಾಜ್ಯ+ ಕೇಂದ್ರ ವಲಯ)		**78.49**	**51.83**	4.54	2.30	**60.41**	**49.15**	15.11	3.25	**78.41**	**60.44**	4.20	1.26	40.22	30.69	5.02	2.46

ಕ್ರ. ಸಂ	ಯೋಜನೆಯ ಹೆಸರು ಮತ್ತು ಲೆಕ್ಕಶೀರ್ಷಿಕೆ	ಪಾಂಢವಪುರ				ಕೆ.ಆರ್.ಪೇಟೆ				ನಾಗಮಂಗಲ			
		ಪ.ಜಾತಿ		ಪ.ಪಂ		ಪ.ಜಾತಿ		ಪ.ಪಂ		ಪ.ಜಾತಿ		ಪ.ಪಂ	
		ಬಿಡುಗಡೆ	ವೆಚ್ಚ	ಬಿಡುಗಡೆ	ವೆಚ್ಚ	ಬಿಡುಗಡೆ	ವೆಚ್ಚ	ಬಿಡುಗಡೆ	ವೆಚ್ಚ	ಬಿಡುಗಡೆ	ವೆಚ್ಚ	ಬಿಡುಗಡೆ	ವೆಚ್ಚ
	ರಾಜ್ಯ ವಲಯ												
1	ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪ ಯೋಜನೆ ಕಾಯ್ದೆ 2013ರಡಿ ಬಳಕೆಯಾಗದೆ ಇರುವ ಮೊತ್ತ (2401-00-001-1-75)	0.00	0.00	0.19	0.19	3.00	2.93	4.93	4.91	0.00	0.00	0.00	0.00
2	ಕೃಷಿ ಭಾಗ್ಯ 2401-00-102-0-27	0.00	0.00	0.00	0.00	0.00	0.00	0.22	0.22	0.62	0.62	0.00	0.00
3	ಕೃಷಿ ಪರಿಕರಗಳು ಮತ್ತು ಗುಣಮಟ್ಟ ನಿಯಂತ್ರಣ (2401-00-103-0-15)												
ಅ	ಬೀಜಗಳ ಪೂರೈಕೆ (ಕ್ವಿಂಟಾಲ್)	0.46	0.46	0.00	0.00	1.48	1.48	0.57	0.57	20.00	0.00	1.00	0.00
ಆ	ಕೃಷಿ ಯಾಂತ್ರೀಕರಣ	14.00	8.00	0.00	0.00	36.16	36.00	1.00	0.96	18.25	18.25	0.00	0.00
ಇ	ಕೃಷಿ ಸಂಸ್ಕರಣೆ	2.23	1.45	0.18	0.18	8.36	4.58	9.41	3.25	1.00	0.00	0.53	0.00
ಈ	ಮಣ್ಣಿನ ಸತ್ವ ಹೆಚ್ಚಿಸುವಿಕೆ (ಹೆ)	0.53	0.53	0.07	0.07	1.20	0.83	0.23	0.23	1.97	1.97	0.00	0.00
	ಉಪ ಮೊತ್ತ	**17.22**	**10.44**	**0.25**	0.24	**47.20**	**42.89**	**11.21**	**5.00**	**41.22**	**20.22**	**1.53**	**0.00**
4	ಸಾವಯವ ಕೃಷಿ (2401-00-104-0-12)	0.00	0.00	0.00	0.00	0.00	0.00	0.00	0.00	0.00	0.00	0.00	0.00
5	ಹೊಸ ಬೆಳೆ ವಿಮಾ ಯೋಜನೆ(ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆ) (2401-00-110-0-07)	1.32	1.32	0.00	0.00	0.00	0.00	0.00	0.00	0.00	0.00	0.00	0.00
	ರಾಜ್ಯ ವಲಯ ಒಟ್ಟು	**18.54**	**11.75**	**0.44**	**0.43**	50.20	45.82	**16.36**	**10.13**	**41.84**	**20.84**	**1.53**	**0.00**

ಕ್ರ. ಸಂ	ಯೋಜನೆಯ ಹೆಸರು ಮತ್ತು ಲೆಕ್ಕಶೀರ್ಷಿಕೆ	ಪಾಂಢವಪುರ				ಕೆ.ಆರ್.ಪೇಟೆ				ನಾಗಮಂಗಲ			
		ಪ.ಜಾತಿ		ಪ.ಪಂ		ಪ.ಜಾತಿ		ಪ.ಪಂ		ಪ.ಜಾತಿ		ಪ.ಪಂ	
		ಬಿಡುಗಡೆ	ವೆಚ್ಚ	ಬಿಡುಗಡೆ	ವೆಚ್ಚ	ಬಿಡುಗಡೆ	ವೆಚ್ಚ	ಬಿಡುಗಡೆ	ವೆಚ್ಚ	ಬಿಡುಗಡೆ	ವೆಚ್ಚ	ಬಿಡುಗಡೆ	ವೆಚ್ಚ
	ಕೇಂದ್ರ ವಲಯ												
7	ರಾಷ್ಟ್ರೀಯ ಆಹಾರ ಸುರಕ್ಷತೆ ಮಿಶನ್ CSS (2401-00-102-0-08)	7.93	4.05	2.52	1.26	12.73	7.97	6.41	3.41	14.27	6.27	5.05	2.37
8	ಮುಖ್ಯಮಂತ್ರಿಯವರ ಸೂಕ್ಷ್ಮ ನೀರಾವರಿ ಯೋಜನೆ (2401-00-108-1-15)	29.00	27.00	0.00	0.00	23.00	13.88	2.18	2.06	18.00	14.73	1.22	1.22
9	ಮಳೆಯಾಶ್ರಿತ ಪ್ರದೇಶಾಭಿವೃದ್ಧಿ (2401-00-108-1-16)	2.04	0.30	0.00	0.00	4.21	0.00	0.00	0.00	0.43	0.43	0.00	0.00
10	ಕೃಷಿ ಯಾಂತ್ರೀಕರಣ ಉಪ ಅಭಿಯಾನ (2401-00-113-0-02)	11.91	11.80	0.00	0.00	17.36	17.35	11.70	11.70	12.41	12.30	0.00	0.00
11	ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ (CSS) (2401-00-800-1-57)	0.17	0.17	0.00	0.00	0.17	0.17	0.21	0.21	0.20	0.20	0.00	0.00
12	ಮಣ್ಣಿನ ಫಲವತ್ತತೆಯ ಯೋಜನೆ (2402-00-101-0-03)	0.00	0.00	0.00	0.00	0.00	0.00	0.00	0.00	0.00	0.00	0.00	0.00
	ಕೇಂದ್ರ ವಲಯ ಒಟ್ಟು	**51.05**	**43.31**	**2.52**	**1.26**	**57.46**	**39.37**	**20.51**	**17.39**	**45.31**	**33.93**	6.27	3.58
	ಮಹಾಮೊತ್ತ (ರಾಜ್ಯ+ ಕೇಂದ್ರ ವಲಯ)	**69.59**	**55.07**	2.96	**1.69**	**107.66**	**85.19**	36.86	**27.52**	**87.14**	54.76	7.80	**3.58**

ಅನುಬಂಧ-3(ಅ)

ಪ್ರಶ್ನೆ ಸಂಖ್ಯೆ:1523

2020-21ನೇ ಸಾಲಿನಲ್ಲಿ ಮಂಡ್ಯ ಜಿಲ್ಲೆಗೆ ವಿವಿಧ ಜಲಾನಯನ ಯೋಜನೆಗಳಡಿ ಎಸ್.ಸಿ.ಪಿ. ಮತ್ತು ಟಿ.ಎಸ್.ಪಿ ಘಟಕದಡಿ ತಾಲ್ಲೂಕುವಾರು ಬಿಡುಗಡೆಯಾಗಿರುವ ಅನುದಾನ ವಿವರ ಕೆಳಕಂಡಂತಿದೆ.

ಯೋಜನೆ	ತಾಲ್ಲೂಕು	ಬಿಡುಗಡೆಯಾದಅನುದಾನ (ರೂ.ಲಕ್ಷಗಳಲ್ಲಿ)	
		ಎಸ್.ಸಿ.ಪಿ.	ಟಿ.ಎಸ್.ಪಿ
ಪಿ.ಎಂ.ಕೆ.ಎಸ್.ವೈ-ಇತರೆಉಪಚಾರಗಳು	ಮಂಡ್ಯ	2.10	0
	ಮದ್ದೂರು	0	0
	ಮಳವಳ್ಳಿ	0	0
	ಶ್ರೀರಂಗಪಟ್ಟಣ	0	0
	ಪಾಂಡವಪುರ	0	0
	ಕೆ.ಆರ್.ಪೇಟೆ	0	0
	ನಾಗಮಂಗಲ	0	0
	ಒಟ್ಟು	2.10	0
ಎನ್.ಎಂ.ಎಸ್.ಎ.-ಆರ್.ಎ.ಡಿ	ಮಂಡ್ಯ	10.37	0
	ಮದ್ದೂರು	0	9.68
	ಮಳವಳ್ಳಿ	4.33	0
	ಶ್ರೀರಂಗಪಟ್ಟಣ	0.00	0.47
	ಪಾಂಡವಪುರ	2.04	0
	ಕೆ.ಆರ್.ಪೇಟೆ	4.21	0
	ನಾಗಮಂಗಲ	0.43	0
	ಒಟ್ಟು	21.38	**10.15**

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1585
ಸದಸ್ಯರ ಹೆಸರು : ಶ್ರೀ.ರಾಜೇಶ್ ನಾಯಕ್ ಯು. (ಬಂಟ್ವಾಳ)
ಉತ್ತರಿಸಬೇಕಾದ ದಿನಾಂಕ : 10-03-2021
ಉತ್ತರಿಸುವ ಸಚಿವರು : ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರದಿಂದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ರಾಜ್ಯದಲ್ಲಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು ಯಾವುವು; (ಯೋಜನೆವಾರು ವಿವರ ನೀಡುವುದು)	ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರದಿಂದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ರಾಜ್ಯದಲ್ಲಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ವಿವರ ಈ ಕೆಳಕಂಡಂತಿದೆ. **ರಾಜ್ಯವಲಯ ಯೋಜನೆ:-** • ಅಲ್ಪಸಂಖ್ಯಾತರಿಗೆ ವಿದ್ಯಾರ್ಥಿವೇತನ ಮತ್ತು ಶುಲ್ಕ ಮರುಪಾವತಿ • ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಉತ್ತೇಜನ • ಅಲ್ಪಸಂಖ್ಯಾತರ ವಸತಿ ಶಾಲೆಗಳು • ಮೌಲಾನಾ ಆಜಾದ್ ಶಾಲೆ/ಕಾಲೇಜುಗಳ ನಿರ್ವಹಣೆ • ಅಲ್ಪಸಂಖ್ಯಾತರಿಗಾಗಿ ಹಾಸ್ಟಲ್‌ಗಳು • ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ • ಕ್ರಿಶ್ಚಿಯನ್ ಸಮುದಾಯದ ಅಭಿವೃದ್ಧಿ • ಜೈನ್, ಬೌದ್ಧ ಮತ್ತು ಸಿಖ್ ಸಮುದಾಯದ ಅಭಿವೃದ್ಧಿ • ಮದರಸಾಗಳಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣವನ್ನು ಒದಗಿಸುವುದು • ಅಲ್ಪಸಂಖ್ಯಾತರಿಗೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ • ವಸತಿ ನಿಲಯ ಮತ್ತು ವಸತಿ ಶಾಲೆ ಕಟ್ಟಡಗಳ ನಿರ್ಮಾಣ ಅಲ್ಪಸಂಖ್ಯಾತರ ಕಛೇರಿ ಸಂಕೀರ್ಣಗಳು ಮತ್ತು ಉರ್ದು ಸಮಾವೇಶಗಳು ಮತ್ತು ಸಂಸ್ಕೃತಿ ಕೇಂದ್ರ • 11 ಕಾರ್ಪೋರೇಷನ್‌ಗಳಲ್ಲಿ ಅಲ್ಪಸಂಖ್ಯಾತರ ಸ್ಲಮ್ / ಕಾಲೋನಿ ಅಭಿವೃದ್ಧಿ ಯೋಜನೆ **ಕೇಂದ್ರವಲಯ ಯೋಜನೆ:-** • ಪ್ರಧಾನ ಮಂತ್ರಿ ಜನ ವಿಕಾಸ ಕಾರ್ಯಕ್ರಮ **ಜಿಲ್ಲಾವಲಯ ಯೋಜನೆ** • ಅಲ್ಪಸಂಖ್ಯಾತರಿಗಾಗಿ ಕಾನೂನು ಪದವೀಧರರಿಗೆ ತರಬೇತಿ ಭತ್ಯೆ • ಅಲ್ಪಸಂಖ್ಯಾತರಿಗಾಗಿ ಅನಾಥಾಲಯ

ಆ)	ಈ ಯೋಜನೆಗಳಲ್ಲಿ ಫಲಾನುಭವಿಗಳಾಗಿ ಆಯ್ಕೆಯಾಗಲು ಇರಬೇಕಾದ ಅರ್ಹತೆಗಳ/ ಮಾನದಂಡಗಳೇನು; (ಮಾಹಿತಿ ನೀಡುವುದು)	ಈ ಯೋಜನೆಗಳಲ್ಲಿ ಫಲಾನುಭವಿಗಳ ಆಯ್ಕೆಯಾಗಲು ಇರಬೇಕಾದ ಅರ್ಹತೆಗಳು/ ಮಾನದಂಡಗಳ ವಿವರ **ಅನುಬಂಧ-1ರಲ್ಲಿ** ಒದಗಿಸಲಾಗಿದೆ.
ಇ)	ಈ ಯೋಜನೆಗಳಲ್ಲಿ ಈವರೆಗೆ ಸಾಧಿಸಿದ ಪ್ರಗತಿ ಯಾವುವು; (ವಿವರ ಒದಗಿಸುವುದು)?	ಈ ಯೋಜನೆಗಳಲ್ಲಿ ಈವರೆಗೆ ಸಾಧಿಸಿದ ಪ್ರಗತಿ ವಿವರ **ಅನುಬಂಧ-2 ರಲ್ಲಿ** ಒದಗಿಸಲಾಗಿದೆ.

ಸಂಖ್ಯೆ:MWD 78 LMQ 2021

(ಶ್ರೀಮಂತ ಬಾಳಸಾಹೇಬ ಪಾಟೀಲ್)
ಕೈಮಗ್ಗ ಮತ್ತು ಜವಳಿ ಹಾಗೂ
ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

ಅನುಬಂಧ-1

1585

ಮಾನ್ಯ ವಿಧಾನಸಭೆಯ ಸದಸ್ಯರಾದ ಶ್ರೀ ರಾಜೇಶ್ ನಾಯಕ್ ಯು. (ಬಂಟ್ವಾಳ) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:1585ಕ್ಕೆ

ಅನುಬಂಧ-1

ಅಲ್ಪಸಂಖ್ಯಾತರ ನಿರ್ದೇಶನಾಲಯದಿಂದ ಜಾರಿಗೊಳಿಸುತ್ತಿರುವ ಯೋಜನೆಗಳಿಗೆ ಆಯ್ಕೆಯಾಗಲ ಇರುವ ಮಾನದಂಡಗಳು

ಕ್ರ ಸಂ	ಯೋಜನೆ/ಕಾಯಕ್ರಮ	ಕಾರ್ಯಕ್ರಮಗಳ ಮಾನದಂಡಗಳು/ವಿವರ
		ಅಲ್ಪಸಂಖ್ಯಾತರಿಗೆ ವಿದ್ಯಾರ್ಥಿವೇತನ ಮತ್ತು ಶುಲ್ಕ ಮರುಪಾವತಿ
1	(ಎ) ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ಕಾರ್ಯಕ್ರಮ	1) 1ನೇ ತರಗತಿಯಿಂದ 10ನೇ ತರಗತಿಯವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ನೀಡಲಾಗುವುದು. 2) ಅರ್ಜಿ ಸಲ್ಲಿಸುವ ವಿದ್ಯಾರ್ಥಿಯ ಕುಟುಂಬದ ವಾರ್ಷಿಕ ಆದಾಯ ಮಿತಿ ರೂ. 1.00 ಲಕ್ಷಕ್ಕೆ ಮೀರಿರಬಾರದು. 3) ವಿದ್ಯಾರ್ಥಿಯು ಹಿಂದಿನ ತರಗತಿಯಲ್ಲಿ ಶೇ.50 ರಷ್ಟು ಅಂಕ ಗಳಿಸಿರಬೇಕು (1ನೇ ತರಗತಿ ಹೊರತುಪಡಿಸಿ) ಶೇ30ರಷ್ಟು ವಿದ್ಯಾರ್ಥಿ ವೇತನವನ್ನು ಬಾಲಕಿಯರಿಗಾಗಿ ನೀಡಲಾಗುತ್ತಿದೆ. 4) ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ರಾಜ್ಯದ ಸರ್ಕಾರಿ/ಅನುದಾನಿತ/ಅನುದಾನ/ರಹಿತ ಹಾಗೂ ಖಾಸಗಿ ಶಾಲೆಗಳು 1 ರಿಂದ 10ನೇ ತರಗತಿ ವರೆಗೆ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವರ್ಷ ಒಂದಕ್ಕೆ ರೂ. 1000 ರಿಂದ 5000 ರವರೆಗೆ ವಿದ್ಯಾರ್ಥಿವೇತನ ನೀಡಲಾಗುವುದು.
2	(ಬಿ) ಮೆಟ್ರಿಕ್ ನಂತರ ವಿದ್ಯಾರ್ಥಿ ವೇತನ:	ಪದವಿಪೂರ್ವ, ಪದವಿ ಸ್ನಾತಕೋತ್ತರ ಹಾಗೂ ಎಂ.ಫಿಲ್ & ಪಿ.ಹೆಚ್.ಡಿ.ಯವರಿಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮಂಜೂರಿಗೆ ಅವಕಾಶವಿದೆ. 1) ಹಿಂದಿನ ತರಗತಿಗಳಲ್ಲಿ ಶೇ.50 ರಷ್ಟು ಅಂಕ ಗಳಿಸಿರಬೇಕು. 2) ಕುಟುಂಬದ ವಾರ್ಷಿಕ ವರಮಾನ ರೂ. 2 ಲಕ್ಷಕ್ಕೆ ಮೀರಿರಬಾರದು. 3) ಶೇ30ರಷ್ಟು ವಿದ್ಯಾರ್ಥಿ ವೇತನವನ್ನು ಬಾಲಕಿಯರಿಗಾಗಿ ಮೀಸಲಿರಿಸಿದೆ. 4) ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ರಾಜ್ಯದ ಸರ್ಕಾರಿ/ಅನುದಾನಿತ/ಅನುದಾನ/ರಹಿತ ಹಾಗೂ ಖಾಸಗಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಪಾವತಿಸಿದ ದಾಖಲಾತಿ ಶುಲ್ಕ ಹಾಗೂ ಭೋಧನ ಶುಲ್ಕ ಆಧಾರದನ್ವಯ ಗರಿಷ್ಠ ರೂ.3500/- ರಿಂದ ರೂ.14000/-ರವರೆಗೆ ಪ್ರತಿ ವರ್ಷಕ್ಕೆ ವಿದ್ಯಾರ್ಥಿವೇತನನೀಡಲಾಗುತ್ತಿದೆ.
3	(ಸಿ)ಮೆರಿಟ್ - ಕಮ್-ಮೀನ್ಸ್ ಆಧಾರಿತ ವಿದ್ಯಾರ್ಥಿವೇತನ:	ತಾಂತ್ರಿಕ ಹಾಗೂ ವೃತ್ತಿಪರ ವಿವಿಧ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮಂಜೂರಿಗೆ ಅವಕಾಶವಿದೆ. 1) ಈ ಯೋಜನೆಯಡಿಯಲ್ಲಿ ತಾಂತ್ರಿಕ ಹಾಗೂ ವೃತ್ತಿಪರ ವಿವಿಧ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ನೀಡಲಾಗುವುದು. ವಿದ್ಯಾರ್ಥಿಯು ಶೇ 50 ರಷ್ಟು ಅಂಕಗಳಿಸಿರಬೇಕು. 2) ಕುಟುಂಬದ ವಾರ್ಷಿಕ ವರಮಾನ ರೂ.2.50 ಲಕ್ಷಗಳು ಮೀರಿರಬಾರದು

ಪು.ತಿ.ನೋ

		3) ಶೇ 30 ರಷ್ಟು ವಿದ್ಯಾರ್ಥಿ ವೇತನವನ್ನು ಬಾಲಕಿಯರಿಗಾಗಿ ಮೀಸಲಿಟ್ಟಿಸಿದೆ. 4) ಗರಿಷ್ಠ ರೂ. 30 ಸಾವಿರದವರೆಗೆ ಶುಲ್ಕ ಮರುಪಾವತಿಸಲು ಅವಕಾಶವಿದೆ.
4	(ಡಿ) ಶುಲ್ಕ ಮರುಪಾವತಿ ಯೋಜನೆ ಅನುಷ್ಠಾನದ ಮಾರ್ಗಸೂಚಿಗಳು.	ಅಲ್ಪಸಂಖ್ಯಾತರ ನಿರ್ದೇಶನಾಲಯದಿಂದ ಮೆಟ್ರಿಕ್ ನಂತರ ಮತ್ತು ಮೆರಿಟ್ ಕಮ್ ಮೀನ್ಸ್ ವಿದ್ಯಾರ್ಥಿವೇತನಕ್ಕೆ ಆನ್‌ಲೈನ್ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳ ಪೈಕಿ ಅರ್ಹ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ನೀಡಲಾಗುವುದು. ಕೇಂದ್ರ ಸರ್ಕಾರದಿಂದ ಆಯ್ಕೆಯಾದ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ವಿದ್ಯಾರ್ಥಿವೇತನ ಮೊತ್ತ ಕಡಿಮೆ ಇರುವುದರಿಂದ ಹೊಂದಾಣಿಕೆ ಮೊತ್ತವನ್ನು ಶುಲ್ಕಮರುಪಾವತಿ ಯೋಜನೆಯಡಿ ನೀಡಲಾಗುವುದು.
5	(ಇ) ವಿದೇಶದಲ್ಲಿ ಉನ್ನತ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ	ರಾಜ್ಯದ ಅಲ್ಪಸಂಖ್ಯಾತರ ವಿದ್ಯಾರ್ಥಿಗಳು ಹೊರದೇಶಗಳಲ್ಲಿ ಉನ್ನತ ವ್ಯಾಸಂಗ ಮಾಡಲು ಸ್ನಾತಕೋತ್ತರ, ಪಿಹೆಚ್‌ಡಿ ಮತ್ತು ಪೋಸ್ಟ್ ಡಾಕ್ಟರೇಟ್ ಕೋರ್ಸ್ ಮುಂತಾದವುಗಳನ್ನು ವಿದೇಶದ ವಿಶ್ವವಿದ್ಯಾನಿಲಯಗಳಲ್ಲಿ ವ್ಯಾಸಂಗ ಮಾಡಲು ವಿದ್ಯಾರ್ಥಿವೇತನ ನೀಡುವ ಕಾರ್ಯಕ್ರಮವನ್ನು ಕರ್ನಾಟಕ ಸರ್ಕಾರದಿಂದ ಹಮ್ಮಿಕೊಳ್ಳಲಾಗಿದೆ. ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನ 6 ಲಕ್ಷಕ್ಕಿಂತ ಕಡಿಮೆ ಇರುವಂತಹ ವಿದ್ಯಾರ್ಥಿಗಳಿಗೆ 2 ವರ್ಷಕ್ಕೆ ಗರಿಷ್ಠ 20 ಲಕ್ಷ ಮತ್ತು 6 ಲಕ್ಷಕ್ಕಿಂತ 15 ಲಕ್ಷ ಇರುವ ವಾರ್ಷಿಕ ವರಮಾನದ ವಿದ್ಯಾರ್ಥಿಗಳಿಗೆ 2 ವರ್ಷಕ್ಕೆ 10 ಲಕ್ಷ ವಿದ್ಯಾರ್ಥಿವೇತನವನ್ನು ನೀಡಲಾಗುವುದು. ಈ ವಿದ್ಯಾರ್ಥಿ ವೇತನವನ್ನು ವಿದ್ಯಾರ್ಥಿಯ 1 ಅಥವಾ 2 ವರ್ಷಗಳ ಅವಧಿಗೆ ಮಾತ್ರ ನೀಡಲಾಗುವುದು.
6	(ಎಫ್) ಪಿಹೆಚ್‌ಡಿ ಮತ್ತು ಎಂಫಿಲ್ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಫೆಲೋಶಿಫ್:-	ಭಾರತ/ಕರ್ನಾಟಕ ರಾಜ್ಯದ ಶಾಸನಬದ್ಧ ಅಂಗೀಕೃತವಾದ ವಿಶ್ವವಿದ್ಯಾನಿಯಗಳಲ್ಲಿ ಪಿಹೆಚ್‌ಡಿ ವ್ಯಾಸಂಗ ಮಾಡುವ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ 3 ವರ್ಷ ಮತ್ತು ಎಂಫಿಲ್ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಜೆ.ಆರ್.ಎಫ್ ಮಾದರಿಯಲ್ಲಿ ವಾರ್ಷಿಕ ರೂ. 1.00 ಲಕ್ಷಗಳಂತೆ ಫೆಲೋಶಿಫ್ ಮೂಲಕ ನೀಡಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಿದೆ. ಷರತ್ತುಗಳು:- 1) ಪಿಹೆಚ್‌ಡಿ/ಎಂಫಿಲ್ ವ್ಯಾಸಂಗವನ್ನು ಭಾರತ/ಕರ್ನಾಟಕ ರಾಜ್ಯದ ಶಾಸನಬದ್ಧ ಅಂಗೀಕೃತವಾದ ವಿಶ್ವವಿದ್ಯಾನಿಯಗಳಲ್ಲಿ ಮಾಡತಕ್ಕದ್ದು. 2) ವಿದ್ಯಾರ್ಥಿಯ ಹಾಗೂ ಕುಟುಂಬದ ವಾರ್ಷಿಕ ಆದಾಯ ಮಿತಿ ಎಲ್ಲಾ ಮೂಲಗಳಿಂದ ವರ್ಷಕ್ಕೆ ರೂ. 6.00 ಲಕ್ಷ ಮೀರಿರಬಾರದು. 3) ವಿದ್ಯಾರ್ಥಿಯ ವಯಸ್ಸು 35 ವರ್ಷಕ್ಕಿಂತ ಕಡಿಮೆ ಇರಬೇಕು. 4) ವಿದ್ಯಾರ್ಥಿಯು ಯಾವುದೇ ಸರ್ಕಾರಿ ಉದ್ಯೋಗದಲ್ಲಿರಬಾರದು.
		ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಉತ್ತೇಜನ
7	(ಅ) ಐಐಎಂ, ಐಐಟಿ, ಐಐಎಸ್‌ಸಿ ಮುಂತಾದ ಪ್ರತಿಷ್ಠಿತ ರಾಷ್ಟ್ರೀಯ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಗೆ ಒಂದು ಬಾರಿ ತಲಾ 2 ಲಕ್ಷ ರೂ.ಗಳ ಪ್ರೋತ್ಸಾಹಧನ:-	ಪ್ರತಿಷ್ಠಿತ ರಾಷ್ಟ್ರೀಯ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ IIT, IIM, IISC, IITs, IIITs, NITs, IIMs, IISERs, AIIMS, NLU, INIs, INI & IuSLAs ಕೋರ್ಸ್‌ಗಳಲ್ಲಿ ಪ್ರವೇಶ ಪಡೆದಿರುವ ರಾಜ್ಯದ ಅಲ್ಪಸಂಖ್ಯಾತ ಸಮುದಾಯದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್ ಬೌದ್ಧರು ಮತ್ತು ಪಾರ್ಸಿ ಜನಾಂಗದ ವಿದ್ಯಾರ್ಥಿಗಳಿಗೆ ಒಂದು ಬಾರಿ ಮಾತ್ರ (ಮೊದಲನೇ ವರ್ಷದಿಂದ ಅಂತಿಮ ವರ್ಷದವರೆಗೆ) ತಲಾ ರೂ. 2.00 ಲಕ್ಷಗಳ ಪ್ರೋತ್ಸಾಹಧನ ನೀಡಲು ಮಂಜೂರಾತಿ ನೀಡಿ ಆದೇಶಿಸಿದೆ. ಷರತ್ತುಗಳು:- 1) ಸರ್ಕಾರದಿಂದ ಶಾಸನಬದ್ಧ ಅನುಮತಿ ಪಡೆದ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳು ಮಾತ್ರ ಪ್ರೋತ್ಸಾಹಧನ ಪಡೆಯಲು ಅರ್ಹರಾಗಿರುತ್ತಾರೆ. 2) ವಿದ್ಯಾರ್ಥಿಯ ಕುಟುಂಬದ ವಾರ್ಷಿಕ ಆದಾಯವು ರೂ. 6.00 ಲಕ್ಷಕ್ಕಿಂತ ಮೀರಿರಬಾರದು.
8	ಆ) ಬಿ.ಎಡ್ & ಡಿ.ಎಡ್	National Council for Teacher Education ನಿಂದ ಮಾನ್ಯತೆ ಪಡೆದಿರುವ ಬಿ.ಎಡ್ ಹಾಗೂ ಸರ್ಕಾರಿ/ಅರೆ

ಮು.ತಿ.ನೋ

	ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹಧನ:–	ಸರ್ಕಾರಿ/ಅನುದಾನಿತ ಹಾಗೂ ಖಾಸಗಿ ಕಾಲೇಜು, Department of State Educational Research and Training ನಿಂದ ಮಾನ್ಯತೆ ಪಡೆದಿರುವ ಡಿ.ಎಡ್ ಹಾಗೂ ಸರ್ಕಾರಿ/ಅರೆ ಸರ್ಕಾರಿ/ಅನುದಾನಿತ ಹಾಗೂ ಖಾಸಗಿ ಕಾಲೇಜುಗಳಲ್ಲಿ ಬಿ.ಎಡ್ (B.Ed) ಮತ್ತು ಡಿ.ಎಡ್ (D.Ed) ಕೋರ್ಸುಗಳಲ್ಲಿ ದಾಖಲಾತಿ ಹೊಂದಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಾರ್ಷಿಕ ರೂ.25,000/–ಗಳ ವಿಶೇಷ ಪ್ರೋತ್ಸಾಹಧನ ನೀಡಲಾಗುವುದು. ಷರತ್ತುಗಳು:–1. ಬಿ.ಎಡ್ ಮತ್ತು ಡಿ.ಎಡ್ ಕೋರ್ಸುಗಳ ಅವಧಿಗೆ ತಕ್ಕಂತೆ ಪ್ರತಿ ವರ್ಷ (ಗರಿಷ್ಠ 2 ವರ್ಷ) ಅನುದಾನವನ್ನು ನೀಡಲಾಗುವುದು. 2. ಅಲ್ಪಸಂಖ್ಯಾತರ ಅಭ್ಯರ್ಥಿಗಳ ಪೋಷಕರ ವಾರ್ಷಿಕ ವರಮಾನ ಗರಿಷ್ಠ ರೂ. 6.00 ಲಕ್ಷಕ್ಕೆ ಮೀರಿರಬಾರದು. 3. ಅಭ್ಯರ್ಥಿಗಳನ್ನು ಅರ್ಹತೆ ಪರೀಕ್ಷೆ/ಹಿಂದಿನ ಸಾಲಿನ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡತಕ್ಕದ್ದು. 4. ಸದರಿ ಕಾರ್ಯಕ್ರಮದಡಿ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಅರ್ಹತೆ ಪರೀಕ್ಷೆ/ಹಿಂದಿನ ಸಾಲಿನ ಪರೀಕ್ಷೆಯಲ್ಲಿ ಕನಿಷ್ಠ 50% ರಷ್ಟು ಅಂಕಗಳನ್ನು ಪಡೆದಿರತಕ್ಕದ್ದು.
9	(ಇ) ಅಲ್ಪಸಂಖ್ಯಾತರ ಸಮುದಾಯದ ಅಭ್ಯರ್ಥಿಗಳಿಗೆ ಪತ್ರಿಕೋದ್ಯಮ ಮತ್ತು ಸಂವಹನ ತರಬೇತಿ	ಅಲ್ಪಸಂಖ್ಯಾತರ ಸಮುದಾಯದ ಅಭ್ಯರ್ಥಿಗಳಿಗೆ ಪತ್ರಿಕೋದ್ಯಮ ಮತ್ತು ಸಂವಹನ ತರಬೇತಿ ನೀಡಲು ಪ್ರತಿ ಅಭ್ಯರ್ಥಿಗೆ 03 ತಿಂಗಳ ಅವ ತರಬೇತಿಗೆ ರೂ. 30,000/–, 6 ತಿಂಗಳ ಅವಧಿ ತರಬೇತಿಗೆ ರೂ. 60,000/– ಗಳು 1 ವರ್ಷದ ಅವಧಿಯ ತರಬೇತಿಗೆ ರ 1,20,000/– ಗಳ ಪ್ರೋತ್ಸಾಹಧನ ನೀಡಲಾಗುತ್ತಿದೆ. ಷರತ್ತುಗಳು:–1) ಅಭ್ಯರ್ಥಿಯ ವಯೋಮಿತಿಯು ಕನಿಷ್ಠ 18 ರಿಂದ ಗರಿಷ್ಠ 40 ವರ್ಷಗಳಾಗಿರಬೇಕು. 2)ಅಭ್ಯರ್ಥಿಯ ಕುಟುಂಬದ ವಾರ್ಷಿಕ ಆದಾಯವು ರೂ.6.00 ಲಕ್ಷಕ್ಕಿಂತ ಮೀರಿರಬಾರದು. 3) ಪತ್ರಿಕೋದ್ಯಮ ತರಬೇತಿಯನ್ನು ಸರ್ಕಾರಿ/ಅರೆ ಸರ್ಕಾರಿ/ಪ್ರತಿಷ್ಠಿತ ಖಾಸಗಿ ಸಂಸ್ಥೆಗಳ ಮೂಲಕ ಪಡೆಯುತ್ತಿರಬೇಕು.
10	(ಈ) ಪ್ರತಿಭಾ ಪುರಸ್ಕಾರ:–	ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ಪೂರ್ವ/ಮೆಟ್ರಿಕ್ ನಂತರ ವಿದ್ಯಾರ್ಥಿನಿಲಯ, ಮೊರಾರ್ಜಿದೇಸಾಯಿ ವಸತಿ ಶಾಲೆ/ಕಾಲೇಜು, ಸರ್ಕಾರಿ ಮುಸ್ಲಿಂ ವಸತಿ ಶಾಲೆ, ಅಲ್ಪಸಂಖ್ಯಾತರ ಮಾದರಿ ವಸತಿ ಶಾಲೆ ಹಾಗೂ ಮೌಲಾನಾ ಅಜಾದ್ ಶಾಲೆಗಳಲ್ಲಿನ ವಿದ್ಯಾರ್ಥಿಗಳು ಎಸ್.ಎಸ್.ಎಲ್.ಸಿ, 2ನೇ ಪಿಯುಸಿ, ಅಂತಿಮ ವರ್ಷದ ಟಿ.ಸಿ.ಹೆಚ್/ಡಿಪ್ಲೋಮ, ಅಂತಿಮ ವರ್ಷದ ಪದವಿ, ಅಂತಿಮ ವರ್ಷದ ಸ್ನಾತಕೋತ್ತರ ಪದವಿಗಳಲ್ಲಿ ಮೊದಲ ಪ್ರಯತ್ನದಲ್ಲೇ ಪ್ರಥಮ ದರ್ಜೆಯಲ್ಲಿ ತೇರ್ಗಡೆಯಾಗಿ ಅತಿ ಹೆಚ್ಚು ಅಂಕಗಳನ್ನು ಗಳಿಸಿದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಈ ಕೆಳಕಂಡಂತೆ ಪ್ರೋತ್ಸಾಹಧನವನ್ನು ಮತ್ತು ಮೊದಲ ಪ್ರಯತ್ನದಲ್ಲೇ ಶೇಕಡ 100% ಫಲಿತಾಂಶ ಗಳಿಸಿದ ಅಲ್ಪಸಂಖ್ಯಾತರ ವಸತಿ ಶಾಲೆ/ಕಾಲೇಜು, ಮೌಲಾನಾ ಅಜಾದ್ ಮಾದರಿ ಶಾಲೆಗಳಿಗೆ ತಲಾ ರೂ. 10,000/–ರಂತೆ ಪ್ರತಿಭಾ ಪುರಸ್ಕಾರ ನೀಡಲಾಗುತ್ತಿದೆ.

(ರೂ.ಗಳಲ್ಲಿ)

ಕ್ರಸಂ	ಕೋರ್ಸುಗಳ ವಿವರ	ಪ್ರತಿ ವಿದ್ಯಾರ್ಥಿ/ಶಾಲಾ/ ಕಾಲೇಜುಗಳಿಗೆ ಪ್ರೋತ್ಸಾಹಧನ
1	ಎಸ್.ಎಸ್.ಎಲ್.ಸಿ	1,000/–
2	2ನೇ ಪಿಯುಸಿ	1,500/–
3	ಅಂತಿಮ ವರ್ಷದ ಟಿ.ಸಿ.ಹೆಚ್/ಡಿಪ್ಲೋಮ	1,500/–
4	ಅಂತಿಮ ವರ್ಷದ ಪದವಿ	2,000/–
5	ಅಂತಿಮ ವರ್ಷದ ಸ್ನಾತಕೋತ್ತರಪದವಿ	3,000/–
6	ಅಲ್ಪಸಂಖ್ಯಾತರ ವಸತಿ ಶಾಲಾ/ಕಾಲೇಜು	10,000/–

ಶಾಲೆ/ಕಾಲೇಜು/ವಿದ್ಯಾರ್ಥಿನಿಲಯಗಳು

11 **(ಅ) ಅಲ್ಪಸಂಖ್ಯಾತರ ವಸತಿ ಶಾಲೆಗಳು:–**

ಜೀವನದಲ್ಲಿ ಕಿಶೋರಾವಸ್ಥೆಯು ಮಾನಸಿಕ, ಬೌದ್ಧಿಕ, ಭಾವನಾತ್ಮಕ ಬೆಳವಣಿಗೆಗೆ ಸಂಬಂಧಿಸಿದಂತೆ ಒಂದು ಪ್ರಮುಖ ಅವಧಿಯಾಗಿದೆ. ಹೆಚ್ಚಿನ ರೀತಿಯಲ್ಲಿ ಸೌಲಭ್ಯ ಒದಗಿಸುವುದಕ್ಕಾಗಿ ಹೊಸ ಚಿಂತನೆಯ ರೂಪದಲ್ಲಿ ಕಿಶೋರಿ ಶಕ್ತಿ ಯೋಜನೆ (KSY) ಹಾಗೂ ಸಬಲ ಯೋಜನೆಗಳನ್ನು ವಿಲೀನಗೊಳಿಸಿ ಕೇಂದ್ರ ಸರ್ಕಾರವು 2018–19ನೇ ಸಾಲಿಗೆ ಸದರಿ ಯೋಜನೆಯನ್ನು ಪ್ರಾಯಪೂರ್ವ ಬಾಲಕಿಯರ ಯೋಜನೆಯನ್ನಾಗಿ ಹೆಸರಿಸಿ ರಾಜ್ಯದ 30 ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗಿದೆ. ಸದರಿ ಯೋಜನೆಯಡಿ 11–14 ವರ್ಷದ ಶಾಲೆಯಿಂದ ಹೊರಗುಳಿದ ಪ್ರಾಯಪೂರ್ವ ಬಾಲಕಿಯರನ್ನು ಫಲಾನುಭವಿಗಳೆಂದು ಗುರುತಿಸಲಾಗುತ್ತಿದ್ದು, ಈ ಯೋಜನೆಯಡಿ ಪೂರಕ ಪೌಷ್ಠಿಕ ಆಹಾರ ಕಾರ್ಯಕ್ರಮ (SNP) ಹಾಗೂ ಪೌಷ್ಠಿಕೇತರ ಅಂಶ ಕಾರ್ಯಕ್ರಮ (Non-Nutrition Components) ಗಳ ಸೇವೆಯನ್ನು ಪ್ರಾಯಪೂರ್ವ ಬಾಲಕಿಯರಿಗೆ ನೀಡಲಾಗುತ್ತಿದೆ.

- **ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ವಂತಿಕೆ ಆಧಾರಿತ ಪಿಂಚಣಿ ಯೋಜನೆ : ಲೆಕ್ಕ ಶೀರ್ಷಿಕೆ: 2235–60–103–0–01 : ಕೇಂದ್ರದ ಪಾಲು: ರಾಜ್ಯದ ಪಾಲು 0:100**

ಈ ಯೋಜನೆಯಡಿ 18–55 ವರ್ಷದ ಅಂ.ಕಾರ್ಯಕರ್ತೆ/ಅಂ. ಸಹಾಯಕಿಯರಿಂದ ಕ್ರಮವಾಗಿ ರೂ.150 ಹಾಗೂ ರೂ.84 ಮಾಹೆಯಾನ ವಂತಿಗೆಯಲ್ಲಿ ಪಡೆದು ವಸೂಲಿ ಮಾಡಿ ಅಷ್ಟೇ ಮೊತ್ತದ ವಂತಿಗೆಯನ್ನು ಸರ್ಕಾರ ಭರಿಸುತ್ತದೆ.

- **ಪ್ರಧಾನ ಮಂತ್ರಿ ಮಾತೃವಂದನಾ ಯೋಜನೆ : ಲೆಕ್ಕ ಶೀರ್ಷಿಕೆ: 2235–02–103–0–61 : ಕೇಂದ್ರದ ಪಾಲು: ರಾಜ್ಯದ ಪಾಲು 60:40 :–**

2010–11ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗಿದ್ದ ಇಂದಿರಾಗಾಂಧಿ ಮಾತೃತ್ವ ಸಹಯೋಗ ಯೋಜನೆ (ಐಜಿಎಮ್‌ಎಸ್‌ವೈ)ಯನ್ನು 2018–19ನೇ ಸಾಲಿನಿಂದ ಪ್ರಧಾನ ಮಂತ್ರಿ ಮಾತೃವಂದನಾ ಯೋಜನೆ ಎಂಬ ಹೆಸರಿನಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳಿಗೆ ವಿಸ್ತರಿಸಲಾಗಿದೆ. ಈ ಯೋಜನೆಯು 60:40 ಕೇಂದ:ರಾಜ್ಯ ಸರ್ಕಾರದ ಧನ ಸಹಾಯ ಯೋಜನೆಯಾಗಿದೆ. 0–6 ತಿಂಗಳವರೆಗೆ ಕೇವಲ ತಾಯಿ ಎದೆ ಹಾಲುಣಿಸುವುದು, ಹೆರಿಗೆಯಾದ ಒಂದು ಗಂಟೆಯೊಳಗೆ ಎದೆ ಹಾಲುಣಿಸುವುದು ಹಾಗೂ ಅತಿ ಸಣ್ಣಮಕ್ಕಳಿಗೆ ಎದೆ ಹಾಲುಣಿಸುವ ಅಭ್ಯಾಸಗಳನ್ನು (ಐವೈಸಿಎಫ್) ಬೆಳಸಿಕೊಳ್ಳುವ ಬಗ್ಗೆ ಮಹಿಳೆಯರನ್ನು ಪ್ರೋತ್ಸಾಹಿಸುವುದು ಹಾಗೂ ಗರ್ಭಿಣಿಯರಿಗೆ ಬಾಣಂತಿಯರಿಗೆ ಆರೋಗ್ಯ ಮಟ್ಟವನ್ನು ಸುಧಾರಿಸುವ ನಿಟ್ಟಿನಲ್ಲಿ ಉತ್ತಮ ವಾತಾವರಣವನ್ನು ಸೃಷ್ಟಿಸಲು ನಗದು ರೂಪದಲ್ಲಿ ಪ್ರೋತ್ಸಾಹಧನ ನೀಡಲಾಗುವುದು.

ಮೊದಲನೆ ಕಂತು ರೂ.1000/–ಗಳನ್ನು, ಗರ್ಭಿಣಿಯಾದ 6 ತಿಂಗಳಲ್ಲಿ, ಎರಡನೇ ಕಂತು ರೂ.2000/–ಗಳನ್ನು ಗರ್ಭಿಣಿಯಾದ 6 ತಿಂಗಳ ನಂತರ ನೀಡಲಾಗುವುದು. ಮೂರನೆಯ ಕಂತು ರೂ.2000/– ಗಳನ್ನು ಮಗು ಮೊದಲನೇ ಹಂತದ ಚುಚ್ಚುಮದ್ದು ಪಡೆದ ನಂತರ ನೀಡಲಾಗುವುದು. ಒಟ್ಟು 3 ಕಂತುಗಳಲ್ಲಿ ರೂ.5000/– ಗಳ ಹೆರಿಗೆ ಭತ್ಯೆಯನ್ನು ನೇರ ನಗದು ವರ್ಗಾವಣೆ ಮೂಲಕ ಫಲಾನುಭವಿಯ ಖಾತೆಗೆ ಜಮಾ ಮಾಡಲಾಗುವುದು. ಮೇಲ್ಕಂಡ ಫಲಾನುಭವಿಗಳು ಎನ್.ಆರ್.ಹೆಚ್.ಎಮ್. ಅಡಿ ಜನನಿ ಸುರಕ್ಷಾ ಯೋಜನೆಯ ಸೌಲಭ್ಯಕ್ಕೆ ಅರ್ಹರಾಗಿರುತ್ತಾರೆ.

- **ರಾಷ್ಟ್ರೀಯ ಶಿಶುಪಾಲನಾ ಕೇಂದ್ರ ಯೋಜನೆ : ಲೆಕ್ಕ ಶೀರ್ಷಿಕೆ: 2235–02–102–0–13–101 : ಕೇಂದ್ರದ ಪಾಲು: ರಾಜ್ಯದ ಪಾಲು:ಸ್ವಯಂ ಸೇವಾ ಸಂಸ್ಥೆ – 60:30:10 :–**

ರಾಷ್ಟ್ರೀಯ ಶಿಶು ಪಾಲನಾ ಕೇಂದ್ರ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಸದರಿ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಕೇಂದ್ರ ಸರ್ಕಾರ, ರಾಜ್ಯ ಸರ್ಕಾರ ಹಾಗೂ ಸ್ವಯಂ ಸೇವಾ ಸಂಸ್ಥೆಗಳ ಪಾಲು ಅನುಕ್ರಮವಾಗಿ 60:30:10 ಅನುಪಾತದಂತೆ ಅನುದಾನವನ್ನು ಒದಗಿಸಲಾಗಿರುತ್ತದೆ. ನವೀಕೃತಗೊಂಡ ಈ ಯೋಜನೆಯು 6 ತಿಂಗಳಿಂದ 3 ವರ್ಷದ ಮಕ್ಕಳಿಗೆ ಪ್ರಾರಂಭಿಕ ಬಾಲ್ಯಾವಸ್ಥೆಯ ಸೇವೆಗಳನ್ನು

ನೀಡುವಲ್ಲಿ ಮಹತ್ವಪೂರ್ಣ ಬದಲಾವಣೆಯನ್ನು ತರುವ ಉದ್ದೇಶ ಹೊಂದಿರುತ್ತದೆ. ಉದ್ಯೋಗಸ್ಥ ತಾಯಂದಿರು ತಮ್ಮ ಕೆಲಸದ ಅವಧಿಯಲ್ಲಿ ಮಕ್ಕಳ ಸಮಗ್ರ ಪೋಷಣೆಗಾಗಿ ಶಿಶು ಪಾಲನಾ ಕೇಂದ್ರದಲ್ಲಿ ತಮ್ಮ ಮಕ್ಕಳನ್ನು ಕಳುಹಿಸಲು ಅನುಕೂಲವಾಗುತ್ತದೆ.

ಉದ್ದೇಶಗಳು:

- ಉದ್ಯೋಗಸ್ಥ ತಾಯಂದಿರ 6 ತಿಂಗಳಿಂದ 6 ವರ್ಷದ ಮಕ್ಕಳನ್ನು ದಿನಪೂರ್ತಿ ಸುರಕ್ಷಿತವಾಗಿ ನೋಡಿಕೊಳ್ಳುವುದು.
- ಮಕ್ಕಳ ಪೌಷ್ಠಿಕ ಹಾಗೂ ಆರೋಗ್ಯ ಮಟ್ಟವನ್ನು ಸುಧಾರಿಸುವುದು.
- ಮಕ್ಕಳ ಭೌತಿಕ, ಸಾಮಾಜಿಕ, ಭಾವನಾತ್ಮಕ ಬೆಳವಣಿಗೆಯನ್ನು ಉತ್ತೇಜಿಸುವುದು
- ಮಕ್ಕಳನ್ನು ಕಾಳಜಿಯಿಂದ ನೋಡಿಕೊಳ್ಳುವಂತೆ ತಾಯಂದಿರಿಗೆ ಹಾಗೂ ಪೋಷಕರಿಗೆ ಶಿಕ್ಷಣ ನೀಡುವುದು

ಸೇವೆಗಳು:

- ದಿನದ ಆರೈಕೆ, ವಿಶ್ರಾಂತಿ ಸೌಲಭ್ಯ ಒಳಗೊಂಡಿರುತ್ತದೆ.
- 0–3 ವರ್ಷದ ಮಕ್ಕಳಿಗೆ ಪ್ರಾಥಮಿಕ ಉತ್ತೇಜನ ನೀಡುವುದು ಹಾಗೂ 3–6 ವರ್ಷದ ಮಕ್ಕಳಿಗೆ ಶಾಲಾಪೂರ್ವ ಶಿಕ್ಷಣ ನೀಡುವುದು.
- ಪೂರಕ ಪೌಷ್ಠಿಕ ಆಹಾರ.
- ಬೆಳವಣಿಗೆ ಪರಿಶೀಲನೆ.
- ಆರೋಗ್ಯ ತಪಾಸಣೆ ಮತ್ತು ಚುಚ್ಚುಮದ್ದು.

- **<u>ರಾಷ್ಟ್ರೀಯ ಪೌಷ್ಟಿಕತೆ ಅಭಿಯಾನ–ಪೋಷಣ್ ಅಭಿಯಾನ :</u> ಲೆಕ್ಕ ಶೀರ್ಷಿಕೆ:2235–02–102–043 : ಕೇಂದ್ರದ ಪಾಲು: ರಾಜ್ಯದ ಪಾಲು – 60:40 :–**

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಫಲಾನುಭವಿಗಳ ಗುರಿಯನ್ನಾಧರಿಸಿ ಎಲ್ಲಾ ಪೌಷ್ಠಿಕತೆಯ ಯೋಜನೆಗಳನ್ನು ಒಗ್ಗೂಡಿಸುವ ಯೋಜನೆ ಇದಾಗಿದೆ. ಮುಖ್ಯವಾಗಿ ಮುಂದಿನ 3 ವರ್ಷಗಳಲ್ಲಿ 0–6 ವರ್ಷದ ಮಕ್ಕಳು, ಗರ್ಭಿಣಿಯರು ಮತ್ತು ಹಾಲುಣಿಸುವ ತಾಯಂದಿರ ಪೌಷ್ಠಿಕತೆಯ ಸ್ಥಿತಿಯನ್ನು ನಿರ್ದಿಷ್ಟ ಅವಧಿಗೆ ಅನುಗುಣವಾಗಿ ಸುಧಾರಿಸುವುದು ಈ ಯೋಜನೆಯ ಮುಖ್ಯವಾದ ಗುರಿಯಾಗಿದೆ. 8ನೇ ಮಾರ್ಚ್ 2018ಕ್ಕೆ ಈ ಯೋಜನೆ ಪ್ರಾರಂಭವಾಗಿದೆ.

ಉದ್ದೇಶಗಳು:

- 0–6 ವರ್ಷದ ಮಕ್ಕಳಲ್ಲಿನ ಕುಂಠಿತ ಬೆಳವಣಿಗೆಯನ್ನು ಕಡಿಮೆಗೊಳಿಸುವುದು (ವರ್ಷಕ್ಕೆ ಶೇಕಡಾ 2 ರಂತೆ).
- 0–6 ವರ್ಷದ ಮಕ್ಕಳಲ್ಲಿನ ಅಪೌಷ್ಠಿಕತೆಯ (ಕಡಿಮೆ ತೂಕದ ಸರಾಸರಿ ಪ್ರಮಾಣ) ಕಡಿಮೆಗೊಳಿಸವುದು (ವರ್ಷಕ್ಕೆ ಶೇಕಡಾ 2 ರಂತೆ).
- 6 ತಿಂಗಳಿಂದ 59 ತಿಂಗಳವರೆಗಿನ ಮಕ್ಕಳಲ್ಲಿ ರಕ್ತಹೀನತೆಯ ಪ್ರಮಾಣ ಕಡಿಮೆಗೊಳಿಸುವುದು.
- 15 ರಿಂದ 49 ವಯಸ್ಸಿನ ಮಹಿಳೆಯರು ಮತ್ತು ಹದಿಹರೆಯದ ಹೆಣ್ಣು ಮಕ್ಕಳಲ್ಲಿ ರಕ್ತಹೀನತೆಯ ಪ್ರಮಾಣವನ್ನು ಕಡಿಮೆಗೊಳಿಸುವುದು. (ವರ್ಷಕ್ಕೆ ಶೇಕಡಾ 3 ರಂತೆ).
- ಕಡಿಮೆ ತೂಕದ ಜನನಗಳ ಪ್ರಮಾಣವನ್ನು ಕಡಿಮೆಗೊಳಿಸುವುದು (ವರ್ಷಕ್ಕೆ ಶೇಕಡಾ 2 ರಂತೆ).

- **ಸ್ತ್ರೀಶಕ್ತಿ ಯೋಜನೆ:–** ಸ್ತ್ರೀಶಕ್ತಿ ಯೋಜನೆಯನ್ನು ಅಕ್ಟೋಬರ್–2000 ರಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಮಹಿಳೆಯರನ್ನು ಸ್ತ್ರೀಶಕ್ತಿ ಗುಂಪುಗಳಲ್ಲಿ ಸಂಘಟಿಸುವುದರ ಮೂಲಕ ಆರ್ಥಿಕ ಹಾಗೂ ಸಾಮಾಜಿಕ ಸಶಕ್ತತೆಯನ್ನು ತರುವುದು ಯೋಜನೆಯ ಮುಖ್ಯ ಉದ್ದೇಶವಾಗಿದೆ. ಪ್ರಸ್ತುತ ರಾಜ್ಯದಲ್ಲಿ 1.62 ಲಕ್ಷ ಸ್ತ್ರೀಶಕ್ತಿ ಗುಂಪುಗಳು ರಚನೆಯಾಗಿರುತ್ತವೆ.

- **ಬಾಲಕಿಯರ ವಸತಿನಿಲಯ:–** ಹಿಂದುಳಿದ ತಾಲ್ಲೂಕುಗಳ ಗ್ರಾಮಾಂತರ ಪ್ರದೇಶದ ಹೆಣ್ಣುಮಕ್ಕಳ ವಿದ್ಯಾಭ್ಯಾಸವನ್ನು ಪ್ರೋತ್ಸಾಹಿಸಲು ಹಾಗೂ ಶಾಲೆ ಬಿಡುವುದನ್ನು ತಪ್ಪಿಸಲು ಅನುಕೂಲವಾಗುವಂತೆ, ಇಲಾಖಾ ಅನುದಾನಿತ ಸ್ವಯಂಸೇವಾ ಸಂಸ್ಥೆಗಳ ಮೂಲಕ 20 ಜಿಲ್ಲೆಗಳಲ್ಲಿ 39 ವಸತಿ ನಿಲಯಗಳನ್ನು ನಡೆಸಲಾಗುತ್ತದೆ.

- **ಕೌಟುಂಬಿಕ ದೌರ್ಜನ್ಯದಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ 2005, ನಿಯಮ 2006:–** ಕುಟುಂಬದಲ್ಲಿ ಮಹಿಳೆಯರ ಮೇಲೆ ದೌರ್ಜನ್ಯ ಉಂಟಾದಾಗ ನ್ಯಾಯಾಲಯದ ಮುಖಾಂತರ ಮಹಿಳೆಯರಿಗೆ ಆರ್ಥಿಕ ಪರಿಹಾರ, ರಕ್ಷಣಾ ಆದೇಶ, ವಾಸದ ಆದೇಶ, ಮಕ್ಕಳ ವಶ, ತಾತ್ಕಾಲಿಕ ಆಶ್ರಯ, ವೈದ್ಯಕೀಯ ಹಾಗೂ ಕಾನೂನು ನೆರವನ್ನು ಒದಗಿಸಲು ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ 2005, ನಿಯಮ 2006ನ್ನು ಅನುಷ್ಠಾನಗೊಳಿಸಲಾಗುತ್ತಿದೆ.

- **ಸಾಂತ್ವನ ಯೋಜನೆ:–** ಸಮಾಜದಲ್ಲಿ ವರದಕ್ಷಿಣೆ, ಕಿರುಕುಳ, ಲೈಂಗಿಕ ಕಿರುಕುಳ, ಕೌಟುಂಬಿಕ ದೌರ್ಜನ್ಯ ಅತ್ಯಾಚಾರಕ್ಕೊಳಗಾದ ಮಹಿಳೆಯರಿಗೆ ಕಾನೂನು ನೆರವು, ತಾತ್ಕಾಲಿಕ ಆಶ್ರಯ, ಆರ್ಥಿಕ ಪರಿಹಾರ ಹಾಗೂ ತರಬೇತಿ ಮುಖಾಂತರ ಸ್ವಾವಲಂಬಿಗಳಾಗುವಂತೆ ಸಾಮಾಜಿಕವಾಗಿ ಹಾಗೂ ಆರ್ಥಿಕವಾಗಿ ಸಶಕ್ತರಾಗಿಸಲು ಗುರಿ ಹೊಂದಿದೆ. ಪ್ರಸ್ತುತ 2020–21 ಸಾಲಿನಲ್ಲಿ 193 ಸಾಂತ್ವನ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, ಅನುದಾನ ನಿಗದಿಪಡಿಸಿರುವುದಿಲ್ಲ. 2020–21ನೇ ಸಾಲಿನಲ್ಲಿ 31.03.2021 ರವರೆಗೆ ಸಾಂತ್ವನ ಯೋಜನೆಯನ್ನು ಮುಂದುವರಿಸಲಾಗಿದೆ. (ಸರ್ಕಾರದ ಪತ್ರ ಸಂ:ಮಮಇ 101 ಮಮಅ 2020 (348886) ದಿನಾಂಕ:25.11.2020) 2020–21ನೇ ಸಾಲಿನಲ್ಲಿ ಅನುದಾನ ನಿಗದಿಪಡಿಸದೆ ಇರುವ ಕಾರಣ ಭಾಗ್ಯಲಕ್ಷ್ಮಿ ಯೋಜನೆಯಡಿ ಅನುದಾನವನ್ನು ಪುನರ್ ವಿನಿಯೋಗ ಮಾಡಿಕೊಡಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.

- **ಹೆಚ್.ಐ.ವಿ./ಏಡ್ಸ್‌ನಿಂದ ಬಾಧಿತರಾದ ಮಹಿಳೆಯರಿಗೆ ಆಶ್ರಯ ಒದಗಿಸುವುದು:–** ರಾಜ್ಯದಲ್ಲಿ ಹೆಚ್.ಐ.ವಿ./ಏಡ್ಸ್‌ನಿಂದ ಬಾಧಿತರಾದ ಕುಟುಂಬ ಹಾಗೂ ಮಹಿಳೆಯರಿಗೆ ಪೋಷಣೆ ಮತ್ತು ರಕ್ಷಣೆಗಾಗಿ ವಿಭಾಗೀಯ ಮಟ್ಟದಲ್ಲಿ ಆಶ್ರಯ ಕೇಂದ್ರ ಸ್ಥಾಪಿಸಲಾಗಿದೆ.

- **ಸ್ವಾಧಾರಗೃಹ ಯೋಜನೆ (ಕೇಂದ್ರ ಸರ್ಕಾರದ ಯೋಜನೆ) :** ಸಂಕಷ್ಟದಲ್ಲಿರುವ ಮಹಿಳೆಯರಿಗಾಗಿ ಆಶ್ರಯ, ಆಹಾರ, ಬಟ್ಟೆ, ತರಬೇತಿ ಹಾಗೂ ಶಿಕ್ಷಣ ನೀಡುವುದರ ಮೂಲಕ ಆರ್ಥಿಕವಾಗಿ ಸಾಮಾಜಿಕವಾಗಿ ಸಶಕ್ತರಾಗುವಂತೆ ಮಾಡುವುದು ಯೋಜನೆಯ ಉದ್ದೇಶ. ಪ್ರಸ್ತುತ 2020–21ನೇ ಸಾಲಿನಲ್ಲಿ ಈ ಯೋಜನೆಯಲ್ಲಿ 53 ಸ್ವಾಧಾರಗೃಹಗಳು ಕಾರ್ಯನಿರ್ವಹಿಸುತ್ತಿದೆ.

- **ಒನ್ ಸ್ಟಾಪ್ ಸೆಂಟರ್ (ಸಖಿ) (ಕೇಂದ್ರ ಸರ್ಕಾರದ ಯೋಜನೆ):–** ದೌರ್ಜನ್ಯಕ್ಕೆ ಒಳಗಾದ ಮಹಿಳೆಯರಿಗೆ ಒಂದೇ ಸೂರಿನಡಿ ವೈದ್ಯಕೀಯ ಚಿಕಿತ್ಸೆ ಮತ್ತು ನೆರವು, ಪೊಲೀಸ್ ನೆರವು, ಕಾನೂನು ನೆರವು ಹಾಗು ಸಮಾಲೋಚನೆ ವ್ಯವಸ್ಥೆಗಳನ್ನು ಒದಗಿಸಲು ಭಾರತ ಸರ್ಕಾರವು ರಾಜ್ಯದ ಎಲ್ಲಾ 30 ಜಿಲ್ಲೆಗಳಲ್ಲಿ ಒನ್ ಸ್ಟಾಪ್ ಸೆಂಟರ್ (ಸಖಿ) ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ರಾಜ್ಯದ ಎಲ್ಲಾ 30 ಜಿಲ್ಲೆಗಳಲ್ಲಿ ಒನ್ ಸ್ಟಾಪ್ ಸೆಂಟರ್ (ಸಖಿ) ಕೇಂದ್ರಗಳು ಕಾರ್ಯನಿರ್ವಹಿಸುತ್ತಿದೆ.

- **ಯೂನಿವರ್ಸಲೈಸೇಷನ್ ಆಫ್ ವುಮೆನ್ ಹೆಲ್ಪ್‌ಲೈನ್ ಸಂಖ್ಯೆ 181:–** ಮಹಿಳೆಯರಿಗೆ ಮಾಹಿತಿಯನ್ನು ನೀಡಲು ಹಾಗೂ ದೌರ್ಜನ್ಯ ಹಾಗೂ ಸಂಕಷ್ಟದಲ್ಲಿರುವ ಮಹಿಳೆಯರಿಗೆ ತುರ್ತು ನೆರವನ್ನು ಒಂದೇ ಸೂರಿನಡಿ ಒದಗಿಸುವ ನಿಟ್ಟಿನಲ್ಲಿ ಯೂನಿವರ್ಸಲೈಸೇಷನ್ ಆಫ್ ವುಮೆನ್ ಹೆಲ್ಪ್‌ಲೈನ್ ಸಂಖ್ಯೆ 181 ಎಂಬ ಉಚಿತ ದೂರವಾಣಿ ಸೇವೆಯನ್ನು 24*7 ರಾಜ್ಯಾದ್ಯಂತ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಭಾಗಿತ್ವದೊಂದಿಗೆ ಜಾರಿಗೊಳಿಸಲಾಗುತ್ತಿದೆ.

- **ಭಾಗ್ಯಲಕ್ಷ್ಮಿ ಯೋಜನೆ:–** ಭಾಗ್ಯಲಕ್ಷ್ಮಿ ಯೋಜನೆಯು ಹೆಣ್ಣು ಮಕ್ಕಳ ಶಿಕ್ಷಣ ಮತ್ತು ಸಬಲೀಕರಣಕ್ಕಾಗಿ ಬಿಪಿಎಲ್ ಕುಟುಂಬದ ಎರಡು ಹೆಣ್ಣು ಮಕ್ಕಳಿಗೆ 2006–07 ರಿಂದ ಜಾರಿಗೆ ತರಲಾಗಿದೆ. ಸದರಿ ಯೋಜನೆಯಡಿ ಮೊದಲನೇ ಫಲಾನುಭವಿಗೆ ರೂ.19,300/– ಮತ್ತು ಎರಡನೇ ಫಲಾನುಭವಿಗೆ ರೂ.18,350/–ಗಳನ್ನು ಪಾಲುದಾರು ಹಣಕಾಸು

ಸಂಸ್ಥೆಯಾದ ಭಾರತೀಯ ಜೀವ ವಿಮಾ ನಿಗಮದಲ್ಲಿ ಠೇವಣಿ ಹೂಡಲಾಗುತ್ತಿದ್ದು, ಫಲಾನುಭವಿಗೆ 18 ವರ್ಷ ತುಂಬಿದ ನಂತರ ಅಂದಾಜು ರೂ.1,00,000/- ಪರಿಪಕ್ವ ಮೊತ್ತವಾಗಿ ದೊರೆಯುತ್ತದೆ.

2020-21ನೇ ಸಾಲಿಂದ ಭಾಗ್ಯಲಕ್ಷ್ಮಿ ಯೋಜನೆಯನ್ನು ಅಂಚೆ ಇಲಾಖೆಯ ಸುಕನ್ಯಾ ಸಮೃದ್ಧಿ ಖಾತೆ ಯೋಜನೆಯ ಮೂಲಕ ಅನುಷ್ಠಾನಗೊಳಿಸಲು ಸಚಿವ ಸಂಪುಟದ ಅನುಮೋದನೆ ಪಡೆದು ಸರ್ಕಾರದ ಆದೇಶ ಸಂಖ್ಯೆ: ಮಮಇ 87 ಮಮಅ 2020 ಬೆಂಗಳೂರು. ದಿನಾಂಕ: 10-11-2020 ರಲ್ಲಿ ಆಡಳಿತಾತ್ಮಕ ಅನುಮೋದನೆಯನ್ನು ನೀಡಿರುತ್ತದೆ. ಇದಕ್ಕಾಗಿ 2020-21ನೇ ಸಾಲಿನಲ್ಲಿ ರೂ.100.00 ಕೋಟಿಗಳ ಅನುದಾನವನ್ನು ಮೀಸಲಿಡಲಾಗಿದೆ.

ಭಾಗ್ಯಲಕ್ಷ್ಮಿ ಯೋಜನೆಯ ಹೆಸರು ಹಾಗೆಯೇ ಮುಂದುವರೆಯುತ್ತದೆ ಹಾಗೂ ಇಂದಿನಂತೆಯೇ ಬಿಪಿಎಲ್ ಕುಟುಂಬದ ಇಬ್ಬರು ಹೆಣ್ಣು ಮಕ್ಕಳಿಗೆ ಯೋಜನೆಯಡಿ ಸೌಲಭ್ಯವನ್ನು ಒದಗಿಸಲಾಗುತ್ತದೆ. ಪ್ರತಿ ಮಗುವಿನ ಹೆಸರಿನಲ್ಲಿ ರೂ.3,000/- ದಂತೆ 15 ವರ್ಷಗಳ ವರೆಗೆ ಒಟ್ಟು ರೂ.45,000/-ಗಳನ್ನು ಠೇವಣಿ ಹೂಡಲಾಗುತ್ತದೆ. 21 ವರ್ಷ ಅವಧಿ ಪೂರ್ಣಗೊಂಡ ನಂತರ ಅಥವಾ 18 ವರ್ಷಗಳ ನಂತರ ವಿವಾಹವಾದಲ್ಲಿ (ಯಾವುದು ಮೊದಲೋ ಅದು) ಪರಿಪಕ್ವ ಮೊತ್ತ ರೂ.1.27 ಲಕ್ಷ ನೀಡಲಾಗುತ್ತದೆ. 10ನೇ ತರಗತಿ ನಂತರ ಉನ್ನತ ವಿದ್ಯಾಭ್ಯಾಸಕ್ಕಾಗಿ ಖಾತೆಯಲ್ಲಿರುವ ಮೊತ್ತದ ಶೇ.50 ರಷ್ಟು ಭಾಗವನ್ನು ಹಿಂಪಡೆಯಲು ಅವಕಾಶವಿರುತ್ತದೆ.

- **ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿ:** 6-15 ವರ್ಷದ ವಯೋಮಿತಿಯೊಳಗಿನ ಮಕ್ಕಳಲ್ಲಿ ಅಪ್ರತಿಮ ಶೌರ್ಯವನ್ನು ಪ್ರದರ್ಶಿಸಿ ಇತರರ ಪ್ರಾಣ ರಕ್ಷಣೆ ಮಾಡುವ ಮಕ್ಕಳಿಗೆ ಪ್ರಶಸ್ತಿ ನೀಡುವ ಯೋಜನೆಯನ್ನು 2006-07 ರಿಂದ ಜಾರಿಗೆ ತರಲಾಗಿದೆ. ಸದರಿ ಯೋಜನೆಯ ಮಾರ್ಗಸೂಚಿಗಳನ್ನು ಪರಿಷ್ಕರಿಸಿ 2017-18ನೇ ಸಾಲಿನಿಂದ 6-18 ವರ್ಷ ವಯೋಮಿತಿಯೊಳಗಿನ ಬಾಲಕರನ್ನು ಹೊಯ್ಸಳ ಪ್ರಶಸ್ತಿಗೆ ಮತ್ತು ಬಾಲಕಿಯರನ್ನು ಕೆಳದಿ ಚೆನ್ನಮ್ಮ ಪ್ರಶಸ್ತಿಗೆ ಆಯ್ಕೆ ಮಾಡಲು ಆದೇಶವನ್ನು ಹೊರಡಿಸಲಾಗಿದೆ. ಈ ಪ್ರಶಸ್ತಿಯು ರೂ.10,000/-ಗಳ ನಗದು ಹಾಗೂ ಪ್ರಶಸ್ತಿ ಪತ್ರವನ್ನು ಒಳಗೊಂಡಿರುತ್ತದೆ. ಈ ಪ್ರಶಸ್ತಿಗಾಗಿ ಆಯ್ಕೆಯಾದ ಮಕ್ಕಳಿಗೆ ದ್ವಿತೀಯ ಪಿಯುಸಿ ಪೂರೈಸುವವರೆಗೂ ವಿದ್ಯಾಭ್ಯಾಸ ಮುಂದುವರೆಸಲು ಪ್ರತಿ ವರ್ಷ ರೂ.2000/- ಗಳ ಶಿಷ್ಯವೇತನವನ್ನು ನೀಡಲಾಗುವುದು.

- **ಉಜ್ವಲ ಯೋಜನೆ:** ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಮಂತ್ರಾಲಯವು ಮಹಿಳೆಯರ ಮತ್ತು ಮಕ್ಕಳ ಸಾಗಾಣಿಕೆ ತಡೆಗಟ್ಟಲು ಹಾಗೂ ಸಾಗಾಣಿಕೆಗೆ ಮತ್ತು ವಾಣಿಜ್ಯ ಲೈಂಗಿಕ ಉಪಯೋಗಕ್ಕೆ ಒಳಪಟ್ಟವರನ್ನು ರಕ್ಷಿಸಲು, ಇವರಿಗೆ ಪುನರ್ವಸತಿ ಕಲ್ಪಿಸಲು ಹಾಗೂ ಕುಟುಂಬದವರೊಂದಿಗೆ ಪುನರ್ವಿಲೀನಗೊಳಿಸಲು ಉಜ್ವಲ ಎಂಬ ಸಮಗ್ರ ಯೋಜನೆಯನ್ನು ರೂಪಿಸಿರುತ್ತದೆ.
  ಟಾರ್ಗೆಟ್ ಗುಂಪು:
  - ➢ ವಾಣಿಜ್ಯ ಲೈಂಗಿಕ ದುರುಪಯೋಗಕ್ಕಾಗಿ ತುತ್ತಾಗಬಹುದಾದ ಮಹಿಳೆಯರು ಮತ್ತು ಮಕ್ಕಳು.
  - ➢ ವಾಣಿಜ್ಯ ಲೈಂಗಿಕ ದುರುಪಯೋಗಕ್ಕಾಗಿ ಒಳಪಟ್ಟಿರುವ ಮಹಿಳೆಯರು ಮತ್ತು ಮಕ್ಕಳು.

- **ಮಕ್ಕಳ ದಿನಾಚರಣೆ ಕಾರ್ಯಕ್ರಮ:** ಅಂತರ ರಾಷ್ಟ್ರೀಯ ಮಕ್ಕಳ ವರ್ಷದ ಅಂಗವಾಗಿ ಭಾರತ ಸರ್ಕಾರವು 1979 ರಲ್ಲಿ ಜಾರಿಗೆ ತಂದ ರಾಷ್ಟ್ರ ಪ್ರಶಸ್ತಿಗೆ ಅನುಗುಣವಾಗಿ ರಾಜ್ಯ ಸರ್ಕಾರವು ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ನಿರತವಾಗಿರುವ ಕನಿಷ್ಠ 5 ವರ್ಷಗಳ ಕಾಲ ನಿರಂತರವಾಗಿ ಸೇವೆ ಸಲ್ಲಿಸಿದ 4 ಸಂಸ್ಥೆಗಳನ್ನು ಹಾಗೂ 4 ವ್ಯಕ್ತಿಗಳನ್ನು ಸನ್ಮಾನಿಸಲು ರಾಜ್ಯ ಪ್ರಶಸ್ತಿಯನ್ನು ಜಾರಿಗೆ ತಂದಿರುತ್ತದೆ. ಈ ಪ್ರಶಸ್ತಿಯನ್ನು ಪ್ರತಿ ವರ್ಷ ನವೆಂಬರ್-14 ರಂದು ಆಚರಿಸಲಾಗುವ ಮಕ್ಕಳ ದಿನಾಚರಣೆಯ ದಿನದಂದು ನೀಡಲಾಗುವುದು.

- **ಬೇಟಿ ಬಚಾವೋ ಬೇಟಿ ಪಡಾವೋ ಕಾರ್ಯಕ್ರಮ:** ಸನ್ಮಾನ್ಯ ಪ್ರಧಾನ ಮಂತ್ರಿಗಳು "ಬೇಟಿ ಬಚಾವೋ ಬೇಟಿ ಪಡಾವೋ ಕಾರ್ಯಕ್ರಮ" (Beti Bachao Beti Padhao) ಎಂಬ ಹೊಸ ಯೋಜನೆಯನ್ನು 22, ಜನವರಿ 2015 ರಂದು ರಾಷ್ಟ್ರೀಯ ಮಟ್ಟದಲ್ಲಿ ಜಾರಿಗೆ ತಂದಿರುತ್ತದೆ. ಕುಸಿಯುತ್ತಿರುವ ಮಕ್ಕಳ ಲಿಂಗ ಅನುಪಾತವನ್ನು (Declining CSR) ಉತ್ತಮ ಪಡಿಸುವುದು ಹಾಗೂ ಮಹಿಳೆಯರನ್ನು ಸಬಲೀಕರಣಗೊಳಿಸುವುದು, "ಬೇಟಿ ಬಚಾವೋ ಬೇಟಿ ಪಡಾವೋ" ಯೋಜನೆಯ ಮುಖ್ಯ ಉದ್ದೇಶವಾಗಿರುತ್ತದೆ.ಈ ಯೋಜನೆಯನ್ನು

ಅನುಷ್ಠಾನಗೊಳಿಸಲು, ಮಕ್ಕಳ ಲಿಂಗಾನುಪಾತ ಇಳಿಮುಖವಾಗುತ್ತಿರುವ ಕರ್ನಾಟಕ ರಾಜ್ಯದ ವಿಜಯಪುರ, ಬಾಗಲಕೋಟೆ, ಹಾವೇರಿ, ಗದಗ , ದಕ್ಷಿಣ ಕನ್ನಡ ಜಿಲ್ಲೆಗಳನ್ನು ಆಯ್ಕೆ ಮಾಡಲಾಗಿದೆ. ಈ ಯೋಜನೆಯನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ಹಾಗೂ ಮಾನವ ಸಂಪನ್ಮೂಲ ಅಭಿವೃದ್ಧಿ ಸಚಿವಾಲಯಗಳ ಸಹಕಾರದಿಂದ ಅನುಷ್ಠಾನಗೊಳಿಸಲಾಗುತ್ತದೆ.

- **ಮಹಿಳೆಯರ ಮತ್ತು ಮಕ್ಕಳ ಅನ್ಯೆತಿಕ ಸಾಗಾಣಿಕೆ ತಡೆಗಟ್ಟುವಿಕೆ:** 2006-07ನೇ ಸಾಲಿನಲ್ಲಿ ಜಾರಿಗೆ ಬಂದಿರುತ್ತದೆ. ಮಹಿಳೆಯರ ಮತ್ತು ಮಕ್ಕಳ ಸಾಗಾಣಿಕೆಯನ್ನು ತಡೆಗಟ್ಟಲು ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಮಟ್ಟದಲ್ಲಿ ಜಾಗೃತಿಯನ್ನು ಮೂಡಿಸಲು 17180 ಸದಸ್ಯರಿಗೆ ಉಪಗ್ರಹ ಆಧಾರಿತ ತರಬೇತಿಯನ್ನು ನೀಡಲಾಗಿದೆ. ಅಲ್ಲದೆ ದೂರದರ್ಶನ ರೇಡಿಯೋಗಳಲ್ಲಿ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. 2020-21ನೇ ಸಾಲಿಗೆ ರೂ.30.00 ಲಕ್ಷಗಳನ್ನು ನಿಗದಿಪಡಿಸಲಾಗಿದೆ.

- **ಬಾಲ್ಯವಿವಾಹ ನಿಷೇಧ ಕಾಯ್ದೆ-2006:** ಬಾಲ್ಯವಿವಾಹ ನಿಷೇಧ ಕಾಯ್ದೆ-2006ನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಸಂಬಂಧ ಕರ್ನಾಟಕ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ:11154/2006 ರಲ್ಲಿ ನೀಡಿದ ನಿರ್ದೇಶನದಂತೆ ಕ್ರಿಯಾ ಯೋಜನೆಯನ್ನು ತಯಾರಿಸಲು ಸರ್ಕಾರವು ಭಾರತದ ಸರ್ವೋಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಮೂರ್ತಿಗಳಾದ ಜಸ್ಟೀಸ್ ಶಿವರಾಜ್ ವಿ. ಪಾಟೀಲ್ ಇವರ ಅಧ್ಯಕ್ಷತೆಯಲ್ಲಿ ಕೋರ್ ಕಮಿಟಿಯನ್ನು ರಚಿಸಿದ್ದು, ಸದರಿ ಕೋರ್ ಕಮಿಟಿಯು ದಿನಾಂಕ:30-06-2011 ರಂದು ಅಂತಿಮ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತದೆ. ವರದಿಯಲ್ಲಿ ಮಾಡಲಾಗಿರುವ ಶಿಫಾರಸ್ಸುಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಸರ್ಕಾರದ ಆದೇಶ ಸಂಖ್ಯೆ: ಮಮಇ 501 ಎಸ್ ಜೆಡಿ 2011 ದಿನಾಂಕ:16-11-2011 ರಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ನಿರ್ದೇಶನಾಲಯದಲ್ಲಿ 1 ಉಪನಿರ್ದೇಶಕರು, 1 ಸಹಾಯಕ ನಿರ್ದೇಶಕರು, 02 ಪ್ರಥಮ ದರ್ಜೆ ಸಹಾಯಕರು, 02 ಗಣಕಯಂತ್ರ ಸಹಾಯಕರು ಮತ್ತು 1 ಸೇವಕರನ್ನೊಳಗೊಂಡಂತೆ ಉಸ್ತುವಾರಿ ಕೋಶವನ್ನು ಸ್ಥಾಪಿಸಲಾಗಿದೆ.

ಸದರಿ ವರದಿಯಲ್ಲಿನ ಶಿಫಾರಸ್ಸುಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಬಾಲ್ಯವಿವಾಹ ನಿಷೇಧ ಉಸ್ತುವಾರಿ ಕೋಶವು 2020-21ನೇ ಸಾಲಿನಲ್ಲಿ ಬಾಲ್ಯವಿವಾಹ ನಿಷೇಧ ಕಾರ್ಯಕ್ರಮಗಳಿಗಾಗಿ 2020-21ನೇ ಸಾಲಿನಲ್ಲಿ ರೂ.175.00 ಲಕ್ಷಗಳ ಅನುದಾನ ನಿಗಧಿಪಡಿಸಲಾಗಿದ್ದು, ರೂ.87.50 ಲಕ್ಷಗಳ ಅನುದಾನ ಬಿಡುಗಡೆಯಾಗಿರುತ್ತದೆ. 01-04-2020 ರಿಂದ 30-11-2020 ರವರೆಗೆ 1877 ಬಾಲ್ಯವಿವಾಹಗಳನ್ನು ತಡೆಗಟ್ಟಲಾಗಿದೆ. 2020-21ನೇ ಸಾಲಿನಲ್ಲಿ ಬಾಲ್ಯವಿವಾಹ ತಡೆಗಟ್ಟುವುದು ಮತ್ತು ಬಾಲ್ಯವಿವಾಹ ನಿಷೇಧದ ಬಗ್ಗೆ ಸಮಾಜದಲ್ಲಿ ಅರಿವು ಮೂಡಿಸಲು ಆಕಾಶವಾಣಿ ಮತ್ತು ದೂರದರ್ಶನ ಕೇಂದ್ರಗಳಲ್ಲಿ ಕಾರ್ಯಕ್ರಮಗಳನ್ನು ಪ್ರಸಾರ ಮಾಡಲು ಕ್ರಿಯಾ ಯೋಜನೆಯಲ್ಲಿ ಹಮ್ಮಿಕೊಳ್ಳಲಾಗಿದೆ.

- **ಸ್ವೀಕಾರ ಕೇಂದ್ರ ಹಾಗೂ ರಾಜ್ಯ ಮಹಿಳಾ ನಿಲಯ:-** ಅನ್ಯೆತಿಕ ವ್ಯವಹಾರಗಳ (ತಡೆಗಟ್ಟುವ) ಅಧಿನಿಯಮ 1956 ನಿಯಮ 1989ರ ಅಡಿ ರಾಜ್ಯದಲ್ಲಿ 04 ಸ್ವೀಕಾರ ಕೇಂದ್ರಗಳು ಮತ್ತು 08 ರಾಜ್ಯ ಮಹಿಳಾ ನಿಲಯಗಳು ಸರ್ಕಾರದಿಂದ ನಡೆಸಲ್ಪಡುತ್ತಿವೆ. ಸ್ವೀಕಾರ ಕೇಂದ್ರಗಳು 18 ವರ್ಷದ ಮೇಲ್ಪಟ್ಟ ಮಹಿಳೆಯರಿಗೆ ತಾತ್ಕಾಲಿಕ ಪುನರ್ವಸತಿ ಕೇಂದ್ರವಾಗಿರುತ್ತದೆ ಹಾಗೂ ರಾಜ್ಯ ಮಹಿಳಾ ನಿಲಯಗಳಲ್ಲಿ ಧೀರ್ಘಾವಧಿ ಪುನರ್‌ವಸತಿ ಅವಶ್ಯವಿರುವ ಮಹಿಳೆಯರಿಗೆ ಆಶ್ರಯ ಮತ್ತು ಪೋಷಣೆ ಅಗತ್ಯವಿರುವ ಮಹಿಳೆಯರು ಸ್ವ-ಇಚ್ಛೆಯಿಂದ, ಸ್ವಯಂ ಸೇವಾ ಸಂಸ್ಥೆಗಳ ಮುಖಾಂತರ, ಯಾವುದೇ ವ್ಯಕ್ತಿಗಳ ಮುಖಾಂತರ ಹಾಗೂ ಅನ್ಯೆತಿಕ ವ್ಯವಹಾರಗಳ (ತಡೆಗಟ್ಟುವ) ಅಧಿನಿಯಮ 1956ರ ಅಡಿಯಲ್ಲಿ ನ್ಯಾಯಾಲಯದಿಂದ ಪ್ರಕರಣವನ್ನು ದಾಖಲಿಸಿ ಕಳುಹಿಸಲ್ಪಟ್ಟ ಮಹಿಳೆಯರನ್ನು ದಾಖಲಿಸಿಕೊಳ್ಳಲಾಗುವುದು. ಸಂಸ್ಥೆಯಲ್ಲಿ ನಿವಾಸಿಯರಿಗೆ ಪಾಲನೆ, ಪೋಷಣೆ, ಊಟ, ವಸತಿ, ಬಟ್ಟೆ, ವೈದ್ಯಕೀಯ ಸೌಲಭ್ಯ, ರಕ್ಷಣೆ ಮತ್ತು ತರಬೇತಿಯನ್ನು ನೀಡಲಾಗುವುದು.

- **ನಿರ್ಗತಿಕ ಮಕ್ಕಳ ಕುಟೀರ:-** ಅನಾಥ ಮತ್ತು ನಿರ್ಗತಿಕ ಮಕ್ಕಳ ಪಾಲನೆ/ಪೋಷಣೆ ಮಾಡುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿರುತ್ತದೆ. ಸದರಿ ಯೋಜನೆಯಡಿ ಕನಿಷ್ಠ 3 ವರ್ಷ ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸಿರುವ ನೊಂದಾಯಿತ ಸ್ವಯಂ ಸೇವಾ ಸಂಸ್ಥೆಗಳಿಗೆ 25 ಮಕ್ಕಳ ಒಂದು ಘಟಕದಂತೆ ಪಾಲನೆ ಹಾಗೂ ಪೋಷಣೆಗೆ ನಿರ್ಗತಿಕ ಮಕ್ಕಳ ಕುಟೀರವನ್ನು ತೆರೆಯಲು ಅನುಮತಿಯೊಂದಿಗೆ ಧನ ಸಹಾಯವನ್ನು ನೀಡಲಾಗುವುದು. ಈ ಯೋಜನೆಯಡಿ ಪ್ರತಿ ಮಗುವಿನ ನಿರ್ವಹಣೆಗಾಗಿ ಮಾಸಿಕ ರೂ.1000/-ಗಳ ಅನುದಾನವನ್ನು ಕೊಡಲಾಗುತ್ತದೆ.

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ

ವಿಕಲಚೇತನರಿಗಾಗಿ ಜಾರಿಗೊಳಿಸುತ್ತಿರುವ ಯೋಜನೆಗಳು

(ಎ) ಶೈಕ್ಷಣಿಕ:-

1) ಶ್ರವಣದೋಷವುಳ್ಳ ಮಕ್ಕಳಿಗಾಗಿ ವಸತಿಯುತ ಶಾಲೆಗಳು:

ಶ್ರವಣದೋಷವುಳ್ಳ ಮಕ್ಕಳಿಗಾಗಿ ಮೈಸೂರು, ಕಲಬುರ್ಗಿ, ಬಳ್ಳಾರಿ, ಬೆಳಗಾವಿ ಜಿಲ್ಲೆಗಳಲ್ಲಿ 4 ಕಿವುಡು ಮಕ್ಕಳ ವಸತಿ ಶಾಲೆಗಳನ್ನು ಇಲಾಖಾವತಿಯಿಂದ ನಡೆಸಲಾಗುತ್ತಿದೆ.ಈ ಶಾಲೆಗಳಲ್ಲಿ ಮಕ್ಕಳಿಗೆ ಉಚಿತ ವಸತಿ, ಊಟ ಮತ್ತು ಶಿಕ್ಷಣವನ್ನು ನೀಡಲಾಗುತ್ತಿದೆ.ಈ ಪೈಕಿ ಶ್ರವಣದೋಷವುಳ್ಳ ಹೆಣ್ಣು ಮಕ್ಕಳಿಗಾಗಿ ಬೆಳಗಾವಿಯಲ್ಲಿ ಪ್ರತ್ಯೇಕ ವಸತಿ ಶಾಲೆ ಇರುತ್ತದೆ.

2. ಅಂಧ ಮಕ್ಕಳಿಗಾಗಿ ವಸತಿಯುತ ಶಾಲೆಗಳು:

ಅಂಧ ಮಕ್ಕಳಿಗಾಗಿ ಕಲಬುರ್ಗಿ, ಮೈಸೂರು, ದಾವಣಗೆರೆ ಹಾಗೂ ಹುಬ್ಬಳ್ಳಿಯಲ್ಲಿ ವಿಶೇಷ ಶಾಲೆಗಳನ್ನು ನಡೆಸಲಾಗುತ್ತಿದೆ.ಈ ಶಾಲೆಗಳಲ್ಲಿ ದೃಷ್ಟಿದೋಷವುಳ್ಳ ಮಕ್ಕಳಿಗೆ ಉಚಿತ ಊಟ, ವಸತಿ ಮತ್ತು ಶಿಕ್ಷಣವನ್ನು ನೀಡಲಾಗುತ್ತಿದೆ.ಈ ಪೈಕಿ ದೃಷ್ಟಿದೋಷವುಳ್ಳ ಹೆಣ್ಣು ಮಕ್ಕಳಿಗಾಗಿ ದಾವಣಗೆರೆಯಲ್ಲಿ ಪ್ರತ್ಯೇಕ ವಸತಿ ಶಾಲೆ ಇರುತ್ತದೆ.

3. 1982ರ ರಾಜ್ಯ ಅನುದಾನ ಸಂಹಿತೆಯಡಿ ನಡೆಯುತ್ತಿರುವ ವಿಶೇಷ ಶಾಲೆಗಳು:

(ಅ) 1982ರ ರಾಜ್ಯ ಅನುದಾನ ಸಂಹಿತೆಯಡಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ 34 ವಿಶೇಷ ಶಾಲೆ/ ತರಬೇತಿ ಕೇಂದ್ರಗಳನ್ನು ದೈಹಿಕ, ಅಂಧ, ಶ್ರವಣದೋಷ ಹಾಗೂ ಬುದ್ಧಿಮಾಂದ್ಯ ಮಕ್ಕಳಿಗಾಗಿ ನಡೆಸಲಾಗುತ್ತಿದೆ.ರಾಜ್ಯ ಸರ್ಕಾರದಿಂದ ಅನುದಾನವನ್ನು ಜಿಲ್ಲಾ ಪಂಚಾಯತ್ ಮೂಲಕ ಬಿಡುಗಡೆ ಮಾಡಲಾಗುತ್ತಿದೆ.

ವಿಕಲಚೇತನರಿಗೆ ವೃತ್ತಿ ತರಬೇತಿ ಕೇಂದ್ರಗಳು:

ಈ ಯೋಜನೆಯಡಿ ವಿವಿಧ ರೀತಿಯ ವಿಕಲಚೇತನರಿಗೆ ವೃತ್ತಿ ತರಬೇತಿಯನ್ನು ನೀಡುವುದಾಗಿದೆ.1982ರ ರಾಜ್ಯ ಅನುದಾನ ಸಂಹಿತೆಯಡಿ 5 ವೃತ್ತಿ ತರಬೇತಿ ಕೇಂದ್ರಗಳನ್ನು ರಾಜ್ಯ ಸಹಾಯಾನುದಾನದಡಿ ಬೆಂಗಳೂರಿನಲ್ಲಿ 03 ಮತ್ತು ಮೈಸೂರಿನಲ್ಲಿ 02 ಹಾಗೂ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಂದು ವಾಕ್ ಶ್ರವಣ ಕೇಂದ್ರವನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದೆ. ವೃತ್ತಿ ತರಬೇತಿ ಕೇಂದ್ರಗಳಲ್ಲಿ ವಿವಿಧ ರೀತಿಯ ವಿಕಲಚೇತನರಿಗೆ ಫಿಟ್ಟರ್, ಟರ್ನರ್, ಸರಳ ಇಂಜಿನಿಯರಿಂಗ್, ಬೆತ್ತ, ಹಗ್ಗ, ಚಾಪೆ ಹೆಣೆಯುವುದು ಹಾಗೂ ಪ್ಲಾಸ್ಟಿಕ್ ಮೌಲ್ಡಿಂಗ್ ತರಬೇತಿಯನ್ನು ನೀಡಲಾಗುತ್ತಿದೆ.ಪ್ರತಿ ತರಬೇತಿ ಕೇಂದ್ರದಲ್ಲಿ ವಾರ್ಷಿಕ 25 ಫಲಾನುಭವಿಗಳು ತರಬೇತಿ ಪಡೆಯಲು ಅವಕಾಶವಿರುತ್ತದೆ.

(ಆ)ಅಂಗವಿಕಲ ಮಕ್ಕಳ ಕೇಂದ್ರೀಕೃತ ವಿಶೇಷ ಶೈಕ್ಷಣಿಕ ಯೋಜನೆ:

ಈ ಯೋಜನೆಯಡಿ ಬುದ್ದಿಮಾಂದ್ಯ (ಸೆರಬ್ರಲ್ ಪಾಲ್ಸಿ, ಆಟಿಸಂ), ದೃಷ್ಟಿದೋಷ, ಶ್ರವಣದೋಷವುಳ್ಳ ಮಕ್ಕಳಿಗಾಗಿ ವಸತಿಯುತ ಹಾಗೂ ವಸತಿರಹಿತ ಶಾಲೆಗಳು ಸೇರಿದಂತೆ ಒಟ್ಟು 138 ವಿಶೇಷ ಶಾಲೆಗಳು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಯುತ್ತಿವೆ. ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಶ್ರವಣದೋಷವುಳ್ಳ ಹಾಗೂ ದೃಷ್ಟಿದೋಷವುಳ್ಳ ಮಕ್ಕಳ ವಸತಿಯುತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ

ಮಾಹೆಯಾನ ತಲಾ ರೂ.6200/- ರಂತೆ ಹಾಗೂ ವಸತಿರಹಿತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.5200/- ರಂತೆ ಹಾಗೂ ಬುದ್ಧಿಮಾಂದ್ಯ ಮಕ್ಕಳ ಮಕ್ಕಳ ವಸತಿಯುತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.6800/- ರಂತೆ ಹಾಗೂ ವಸತಿರಹಿತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ. 6000/- ರಂತೆ ವರ್ಷದಲ್ಲಿ 10 ತಿಂಗಳ ಅವಧಿಗೆ ಅನುದಾನವನ್ನು ಮಂಜೂರು ಮಾಡಲಾಗುತ್ತಿದೆ.ಈ ಅನುದಾನದಲ್ಲಿ ಶಿಕ್ಷಕರ ಗೌರವಧನ, ಮಕ್ಕಳ ಆಹಾರ ವೆಚ್ಚ, ಕಟ್ಟಡದ ಬಾಡಿಗೆ ಹಾಗೂ ನಿರ್ವಹಣಾ ವೆಚ್ಚ, ಸಮವಸ್ತ್ರ, ವೈದ್ಯಕೀಯ ವೆಚ್ಚ ಹಾಗೂ ಸಾದಿಲ್ವಾರು ವೆಚ್ಚಗಳು ಒಳಗೊಂಡಿರುತ್ತವೆ.

(ಇ) ಕೇಂದ್ರ ಸರ್ಕಾರದ ದೀನ್‌ದಯಾಳ್ ಪುನರ್ವಸತಿ ಯೋಜನೆಯಡಿ 8 ಸ್ವಯಂ ಸೇವಾ ಸಂಸ್ಥೆಗಳ ಮೂಲಕ ವಿಶೇಷ ಶಾಲೆ /ವೃತ್ತಿ ತರಬೇತಿ ಕೇಂದ್ರಗಳು ನಡೆಯುತ್ತಿದ್ದು, ಸದರಿ ಶಾಲೆ ಹಾಗೂ ತರಬೇತಿ ಕೇಂದ್ರಗಳಿಗೆ ಕೇಂದ್ರ ಸರ್ಕಾರದಿಂದ ಶೇ.90ರಷ್ಟು ಅನುದಾನವನ್ನು ಮಂಜೂರು ಮಾಡಲಾಗುತ್ತಿದ್ದು, ಉಳಿದ ಶೇ.10ರಷ್ಟು ವೆಚ್ಚವನ್ನು ಸಂಸ್ಥೆಯವರು ಭರಿಸಬೇಕಾಗಿರುತ್ತದೆ.

4. <u>ಅಂಗವಿಕಲ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮತ್ತು ಪ್ರೋತ್ಸಾಹಧನ:</u>

ಈ ಯೋಜನೆಯಡಿ ಒಂದನೇ ತರಗತಿಯಿಂದ ಸ್ನಾತಕೋತ್ತರ ಪದವಿಯವರೆಗೆ ವ್ಯಾಸಂಗ ಮಾಡುತ್ತಿರುವ ಅರ್ಹ ವಿಕಲಚೇತನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನವನ್ನು ಆಯಾ ಜಿಲ್ಲಾ ಕಛೇರಿಗಳ ಮೂಲಕ ಮಂಜೂರು ಮಾಡಲಾಗುತ್ತಿದೆ. 2001-02ನೇ ಸಾಲಿನಿಂದ ಈ ಯೋಜನೆಯ ಫಲಾನುಭವಿಗಳಿಗೆ ಆದಾಯ ಮಿತಿಯಿಂದ ವಿನಾಯಿತಿಗೊಳಿಸಲಾಗಿದೆ.

<u>ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ಯೋಜನೆ:</u>

ಸಾರ್ವತ್ರಿಕ ಪರೀಕ್ಷೆಗಳಲ್ಲಿ ಶೇಕಡ 60 ಕ್ಕಿಂತಲೂ ಹೆಚ್ಚಿನ ಅಂಕಗಳನ್ನು ಪಡೆದ ಪ್ರತಿಭಾನ್ವಿತ ವಿಕಲಚೇತನ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ನೀಡುವ ಯೋಜನೆ ಇದಾಗಿದೆ.ಈ ಯೋಜನೆಯನ್ನು 2001-02ನೇ ಸಾಲಿನಿಂದ ಬಿ.ಎಡ್, ಎಂ.ಎಡ್. ಮತ್ತು ಟಿ.ಸಿ.ಹೆಚ್. ವಿದ್ಯಾರ್ಥಿಗಳಿಗೂ ವಿಸ್ತರಿಸಲಾಗಿದೆ.

<u>ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಶುಲ್ಕ ಮರುಪಾವತಿ:</u>

ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಎಸ್.ಎಸ್.ಎಲ್.ಸಿ ನಂತರ ಉನ್ನತ ಶಿಕ್ಷಣ, ವೃತ್ತಿ ಶಿಕ್ಷಣ, ತಾಂತ್ರಿಕ ಶಿಕ್ಷಣ, ಸ್ನಾತಕೋತ್ತರ, ಔದ್ಯೋಗಿಕ ಶಿಕ್ಷಣಗಳಿಗೆ ನಿಯಮಾನುಸಾರ ಆಯ್ಕೆಯಾಗುವ ವಿದ್ಯಾರ್ಥಿಗಳಿಗೆ ಸರ್ಕಾರವು ನಿಗದಿಪಡಿಸಿರುವ ಪರೀಕ್ಷಾ ಶುಲ್ಕ ಬೋಧನಾ ಶುಲ್ಕ, ಪ್ರಯೋಗಾಲಯ ಶುಲ್ಕ, ಕ್ರೀಡಾ ಶುಲ್ಕ ಹಾಗೂ ಗ್ರಂಥಾಲಯ ಶುಲ್ಕಗಳನ್ನು ಮರುಪಾವತಿಸುವ ಯೋಜನೆಯನ್ನು 2013-14ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಸೌಲಭ್ಯ ಪಡೆಯುವ ವಿದ್ಯಾರ್ಥಿಗಳಿಗೆ ಯಾವುದೇ ಆದಾಯಮಿತಿ ಇರುವುದಿಲ್ಲ. ವೈದ್ಯಕೀಯ ಮಂಡಳಿಯವರು ಶಿಫಾರಸ್ಸು ಮಾಡಿರುವ ವಿಕಲಚೇತನ ಅಭ್ಯರ್ಥಿಗಳು ಮಾತ್ರ ಈ ಯೋಜನೆಯಡಿ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ

<u>ಬ್ರೈಲ್ ಮುದ್ರಣಾಲಯ:</u>

ದೃಷ್ಟಿದೋಷವುಳ್ಳ ಮಕ್ಕಳಿಗೆ ಬೇಕಾಗುವ ಬ್ರೈಲ್ ಪುಸ್ತಕಗಳನ್ನು ಮುದ್ರಿಸಿ ಸಂಬಂಧಪಟ್ಟ ಅಂಧರ ಶಾಲೆಗಳಿಗೆ ಮೈಸೂರಿನಲ್ಲಿರುವ ಬ್ರೈಲ್ ಮುದ್ರಣಾಲಯದ ಮೂಲಕ ಉಚಿತವಾಗಿ ಸರಬರಾಜು ಮಾಡಲಾಗುತ್ತಿದೆ.

8. **ವಿಶೇಷ ಶಿಕ್ಷಣ ತರಬೇತಿ ಕೇಂದ್ರ ಯೋಜನೆ:**

ದೃಷ್ಟಿದೋಷವುಳ್ಳ ಹಾಗೂ ಶ್ರವಣದೋಷವುಳ್ಳ ವಿದ್ಯಾರ್ಥಿಗಳಿಗೆ ಬೋಧಿಸುವ ಶಿಕ್ಷಕರಿಗೆ ವಿಶೇಷ ಶಿಕ್ಷಣ ನೀಡಲು ತಲಾ ಒಂದರಂತೆ ವಿಶೇಷ ಶಿಕ್ಷಕರ ತರಬೇತಿ ಕೇಂದ್ರವನ್ನು ಮೈಸೂರಿನಲ್ಲಿ ನಡೆಸುತ್ತಿದ್ದು, ಪ್ರತಿ ವರ್ಷ ಪ್ರತಿ ಕೇಂದ್ರದಲ್ಲಿ 25 ಪ್ರಶಿಕ್ಷಣಾರ್ಥಿಗಳು ತರಬೇತಿ ಪಡೆಯಲು ಅವಕಾಶವಿರುತ್ತದೆ.

9. **ಮಾನಸಿಕ ಅಸ್ವಸ್ಥ, ಸೆರೆಬ್ರಲ್ ಪಾಲ್ಸಿ, ಆಟಿಸಂ ಮಕ್ಕಳ ಹಗಲು ಯೋಗಕ್ಷೇಮ ಕೇಂದ್ರಗಳು:** ಸೆರೆಬ್ರಲ್ ಪಾಲ್ಸಿ, ಆಟಿಸಂ, ಮಾನಸಿಕ ಅಸ್ವಸ್ಥ ಹಾಗೂ ತೀವ್ರತರದ ಅಂಗವೈಕಲ್ಯತೆ ಹೊಂದಿರುವ ಮೂರರಿಂದ 25 ವರ್ಷದ ಒಳಗಿನ ಮಕ್ಕಳಿಗಾಗಿ 02 ಹಗಲು ಯೋಗಕ್ಷೇಮ ಕೇಂದ್ರಗಳನ್ನು ಬೆಂಗಳೂರು ನಗರ ಜಿಲ್ಲೆಯಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸುತ್ತಿದ್ದು, ಪ್ರತಿ ಕೇಂದ್ರದಲ್ಲಿ 25 ಮಕ್ಕಳನ್ನು ದಾಖಲಿಸಲು ಅವಕಾಶವಿದ್ದು, ಪ್ರತಿ ಮಗುವಿಗೆ ಮಾಸಿಕ ರೂ.10,000/-ಗಳಂತೆ ವಾರ್ಷಿಕ 25.00 ಲಕ್ಷಗಳನ್ನು ಮಂಜೂರು ಮಾಡಲಾಗುತ್ತಿದೆ.

(ಬಿ) ಉದ್ಯೋಗ ಮತ್ತು ತರಬೇತಿ:

2. **ಅಂಗವಿಕಲ ಪುರುಷ ಹಾಗೂ ಮಹಿಳೆಯರ ವಸತಿನಿಲಯ:**

ಬೆಂಗಳೂರಿನ ಕೆಂಗೇರಿಯಲ್ಲಿ ವಿಕಲಚೇತನ ಮಹಿಳೆ ಮತ್ತು ವಿಕಲಚೇತನ ಪುರುಷರಿಗಾಗಿ ಅಂಗವಿಕಲ ಉದ್ಯೋಗಸ್ಥ ನೌಕರರು ಮತ್ತು ಪ್ರಶಿಕ್ಷಣಾರ್ಥಿಗಳಿಗಾಗಿ ಮಹಿಳೆಯರು ಹಾಗೂ ಪುರುಷರಿಗಾಗಿ ಪ್ರತ್ಯೇಕವಾದ ವಸತಿ ನಿಲಯವನ್ನು ಬೆಂಗಳೂರು ನಗರ ಜಿಲ್ಲೆಯಲ್ಲಿ ನಡೆಸಲಾಗುತ್ತಿದೆ. ಪ್ರಸ್ತುತ ಈ ಎರಡೂ ವಸತಿ ನಿಲಯಗಳು ಬೆಂಗಳೂರಿನ ಕೆಂಗೇರಿಯಲ್ಲಿ ನಡೆಯುತ್ತಿವೆ. ಪ್ರತಿ ವಸತಿ ನಿಲಯದಲ್ಲಿ 50 ನಿವಾಸಿಗಳನ್ನು ದಾಖಲಿಸಲು ಅವಕಾಶವಿರುತ್ತದೆ.

3. **ಆಧಾರ ಯೋಜನೆ :**

ವಿಕಲಚೇತನರು ಸ್ವಯಂ ಉದ್ಯೋಗ ಕೈಗೊಂಡು ಜೀವನ ಸಾಗಿಸಲು ಅನುಕೂಲವಾಗುವಂತೆ ಆಧಾರ ಎಂಬ ಸಾಲ ಯೋಜನೆಯನ್ನು ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳ ನೇತೃತ್ವದಲ್ಲಿ ಜಾರಿಗೊಳಿಸಲಾಗುತ್ತಿದೆ.ಈ ಯೋಜನೆಯಡಿ ರೂ.1.00 ಲಕ್ಷ ರೂ.ಗಳ ಸಹಾಯಧನವನ್ನು ನೀಡಲು ಅವಕಾಶವಿದ್ದು, ಇದರಲ್ಲಿ ಶೇ.50ರಷ್ಟು ಬಡ್ಡಿ ಸಹಿತವಾಗಿ ಬ್ಯಾಂಕ್ ಸಾಲ ಮತ್ತು ಶೇ.50ರಷ್ಟು ಸಹಾಯಧನ ಒದಗಿಸಲಾಗುವುದು.

4. **ಗ್ರಾಮೀಣ ಪುನರ್ವಸತಿ ಯೋಜನೆ:**

ಈ ಯೋಜನೆಯನ್ನು ರಾಜ್ಯದ ಎಲ್ಲಾ 30 ಜಿಲ್ಲೆಗಳ 176 ತಾಲ್ಲೂಕುಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ.ಪ್ರತಿ ಗ್ರಾಮ ಪಂಚಾಯತಿ ಅಡಿಯಲ್ಲಿ ಎಸ್.ಎಸ್.ಎಲ್.ಸಿ. ಉತ್ತೀರ್ಣ/ ಅನುತ್ತೀರ್ಣರಾದ ಸಮರ್ಥ ವಿಕಲಚೇತನರನ್ನು ಗ್ರಾಮೀಣ ಪುನರ್ವಸತಿ ಕಾರ್ಯಕರ್ತರೆಂದು ಹಾಗೂ ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ ಸ್ಥಳೀಯ ಸಮರ್ಥ ಪದವೀಧರ ವಿಕಲಚೇತನರೊಬ್ಬರನ್ನು ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರೆಂದು, ಸ್ಥಳೀಯ ನಗರ ಪ್ರದೇಶಗಳಲ್ಲಿ ನಗರ ಪುನರ್ವಸತಿ ಕಾರ್ಯಕರ್ತರೆಂದು ಮತ್ತು ನಿರ್ದೇಶನಾಲಯದಲ್ಲಿ ರಾಜ್ಯ ಸಂಯೋಜಕರನ್ನು ಗೌರವಧನ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗಿದೆ. ಈ ಕಾರ್ಯಕರ್ತರ ಮೂಲಕ ವಿಕಲಚೇತನರಿಗೆ ಎಲ್ಲಾ ಸೇವಾ ಸೌಲಭ್ಯಗಳನ್ನು ಅವರಿರುವ ಸ್ಥಳಗಳಲ್ಲಿಯೇ ವಿಕಲಚೇತನರ ಮೂಲಕವೇ ತಲುಪಿಸಲಾಗುವುದು.

ಸರ್ಕಾರದ ಆದೇಶ ಸಂಖ್ಯೆ:ಮಮಇ/241/ಪಿಹೆಚ್‌ಪಿ/2019, ದಿನಾಂಕ: 07-02-2020ರಂತೆ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು ಹಾಗೂ ನಗರ ಪುನರ್ವಸತಿ ಕಾರ್ಯಕರ್ತರುಗಳ ಗೌರವಧನವನ್ನು ರೂ.3000/-ಗಳಿಂದ ರೂ.6000/-ಗಳಿಗೆ ಹಾಗೂ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರ ಗೌರವಧನವನ್ನು ರೂ.6000/-ಗಳಿಂದ ರೂ.12,000/-ಗಳಿಗೆ ಹೆಚ್ಚಿಸಿ ಆದೇಶ ಹೊರಡಿಸಲಾಗಿದೆ.

ಮರಣ ಪರಿಹಾರ ನಿಧಿ ಯೋಜನೆ: ಗ್ರಾಮೀಣ ಪುನರ್ವಸತಿ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಕಾರ್ಯಕರ್ತರು ನಿಧನ ಹೊಂದಿದ್ದಲ್ಲಿ ರೂ.50,000/-ಗಳ ಪರಿಹಾರ ಧನ ನೀಡಲು ಅವಕಾಶವಿರುತ್ತದೆ.

5. ಉದ್ಯೋಗಸ್ಥ ವಿಕಲಚೇತನ ಮಹಿಳೆಯರಿಗೆ ವಸತಿ ನಿಲಯಗಳು:

ಅಂಗವಿಕಲ ಉದ್ಯೋಗಸ್ಥ ಮಹಿಳೆಯರಿಗಾಗಿ ಹಾಗೂ ವಿದ್ಯಾರ್ಥಿನಿ/ತರಬೇತಾರ್ಥಿಗಳಿಗೆ ಸ್ವಯಂ ಸೇವಾ ಸಂಸ್ಥೆಗಳ ಮೂಲಕ 25 ಜಿಲ್ಲೆಗಳಲ್ಲಿ ಮಹಿಳಾ ವಸತಿ ನಿಲಯಗಳು (ಬೆಂಗಳೂರು ನಗರ ಜಿಲ್ಲೆಯಲ್ಲಿ 4 ವಸತಿ ನಿಲಯಗಳು) ನಡೆಯುತ್ತಿವೆ. ಸದರಿ ವಸತಿ ನಿಲಯದಲ್ಲಿ ಉದ್ಯೋಗಸ್ಥ ವಿಕಲಚೇತನ ಮಹಿಳೆಯರಿಗೆ ಮತ್ತು ವಿದ್ಯಾರ್ಥಿನಿಯರಿಗೆ ಹಾಗೂ ತರಬೇತಿದಾರರಿಗೆ ವಸತಿ ಸೌಲಭ್ಯವನ್ನು ಕಲ್ಪಿಸಲಾಗಿದೆ. ಸದರಿ ವಸತಿ ನಿಲಯದಲ್ಲಿ ವಿದ್ಯಾರ್ಥಿನಿಯರು ಹಾಗೂ ತರಬೇತಿದಾರರಿಗೆ ಉಚಿತ ಊಟದ ವ್ಯವಸ್ಥೆಯಿದ್ದು, ಉದ್ಯೋಗಸ್ಥ ಮಹಿಳೆಯರು ಮಾಸಿಕ 800/-ಗಳನ್ನು ಪಾವತಿಸಬೇಕಾಗಿರುತ್ತದೆ. ರಾಮನಗರ, ದಾವಣಗೆರೆ, ರಾಯಚೂರು, ಉತ್ತರ ಕನ್ನಡ ಹಾಗೂ ಚಿಕ್ಕಮಗಳೂರು ಈ ಜಿಲ್ಲೆಗಳಲ್ಲಿ ಆಡಳಿತಾತ್ಮಕ ಕಾರಣಗಳಿಂದ ವಸತಿ ನಿಲಯಗಳನ್ನು ನಡೆಯುತ್ತಿಲ್ಲ.

ಸಿ. ಸಾಮಾಜಿಕ ಭದ್ರತಾ ಯೋಜನೆಗಳು:

1. ಸಮಾಜ ಸೇವಾ ಸಂಕೀರ್ಣ:

ನಿರ್ಗತಿಕ ಬುದ್ಧಿಮಾಂದ್ಯ ಪುರುಷರಿಗಾಗಿ ಸಮಾಜ ಸೇವಾ ಸಂಕೀರ್ಣ ಸಂಸ್ಥೆಯು ಬೆಂಗಳೂರಿನಲ್ಲಿ ಸರ್ಕಾರದ ವತಿಯಿಂದ ನಡೆಯುತ್ತಿದ್ದು, ಈ ಸಂಸ್ಥೆಯಲ್ಲಿ ಉಚಿತ ಊಟ, ವಸತಿ, ವೈದ್ಯಕೀಯ ಸೌಲಭ್ಯ, ಸಂರಕ್ಷಣೆ ಒದಗಿಸಲಾಗುತ್ತಿದೆ. ಪ್ರಸ್ತುತ ಸಂಸ್ಥೆಯಲ್ಲಿ 85 ನಿವಾಸಿಗಳು ದಾಖಲಾಗಿರುತ್ತಾರೆ.

2. ಮಂದಮತಿ ಮಹಿಳೆಯರ ಅನುಪಾಲನಾ ಗೃಹ:

18 ವರ್ಷ ಮೇಲ್ಪಟ್ಟ ನಿರ್ಗತಿಕ ಮಹಿಳಾ ಬುದ್ಧಿಮಾಂದ್ಯರಿಗೆ ಉಚಿತ ಊಟ, ವಸತಿ, ವೈದ್ಯಕೀಯ ಸೌಲಭ್ಯ ಮತ್ತು ಸಂರಕ್ಷಣೆ ಒದಗಿಸುವ ಉದ್ದೇಶದಿಂದ ಮಂದಮತಿ ಮಹಿಳೆಯರ ಅನುಪಾಲನಾ ಗೃಹಗಳನ್ನು ಬೆಂಗಳೂರು ನಗರ ಹಾಗೂ ಹುಬ್ಬಳ್ಳಿಯಲ್ಲಿ ಇಲಾಖಾವತಿಯಿಂದ ನಡೆಸಲಾಗುತ್ತಿದೆ. ಪ್ರಸ್ತುತ ಬೆಂಗಳೂರು ಅನುಪಾಲನಾ ಕೇಂದ್ರದಲ್ಲಿ 100 ಮಂದಿ ಹಾಗೂ ಹುಬ್ಬಳ್ಳಿ ಅನುಪಾಲನ ಕೇಂದ್ರದಲ್ಲಿ 70 ನಿವಾಸಿಗಳು ದಾಖಲಾಗಿರುತ್ತಾರೆ.

3. ಮಾನಸಿಕ ಅಸ್ವಸ್ಥರಿಗೆ ಮಾನಸ ಕೇಂದ್ರಗಳು:

ಮಾನಸಿಕ ಅಸ್ವಸ್ಥರಿಗಾಗಿ ಮಾನಸ ಕೇಂದ್ರಗಳನ್ನು ಬೆಂಗಳೂರು ನಗರ ಹಾಗೂ ಬೆಳಗಾವಿ ಜಿಲ್ಲೆಗಳಲ್ಲಿ ನಡೆಸುತ್ತಿದ್ದು, ರಾಜ್ಯ ಉಚ್ಚ ನ್ಯಾಯಾಲಯ ಮತ್ತು ಅಧೀನ ನ್ಯಾಯಾಲಯಗಳಿಂದ ಆದೇಶಿಸಲ್ಪಡುವ ಮಾನಸಿಕ ಅಸ್ವಸ್ಥರನ್ನು ಹಾಗೂ ರಸ್ತೆಗಳಲ್ಲಿ ಓಡಾಡುವ ನಿರ್ಗತಿಕ ಮಾನಸಿಕ ಅಸ್ವಸ್ಥರನ್ನು ಈ ಕೇಂದ್ರಗಳಲ್ಲಿ ನಿರ್ದಿಷ್ಟ ವೈದ್ಯಕೀಯ ಪ್ರಾಧಿಕಾರದ ಆದೇಶದ ಮೇರೆಗೆ ದಾಖಲಿಸಲು ಅವಕಾಶವಿರುತ್ತದೆ. ಈ ಕೇಂದ್ರಗಳಲ್ಲಿ ಫಲಾನುಭವಿಗಳಿಗೆ ಉಚಿತ ಊಟ, ವಸತಿ, ವೈದ್ಯಕೀಯ ಶುಶ್ರೂಷೆ, ವೈದ್ಯಕೀಯ ಸಲಹೆ(ಕೌನ್ಸಲಿಂಗ್) ಸೌಲಭ್ಯವನ್ನು ನೀಡಲಾಗುತ್ತಿದ್ದು, ಇವು ಅಲ್ಪಾವಧಿ ಕೇಂದ್ರಗಳಾಗಿರುತ್ತವೆ.

4. ಬುದ್ಧಿಮಾಂದ್ಯ ಮಕ್ಕಳ ಪೋಷಕರಿಗೆ ವಿಮಾ ಯೋಜನೆ:

ಬುದ್ಧಿಮಾಂದ್ಯ ಮಕ್ಕಳ/ವ್ಯಕ್ತಿಗಳ ತಂದೆ: ತಾಯಿ: ಪೋಷಕರ ವಿಮಾ ಯೋಜನೆಯನ್ನು ಭಾರತೀಯ ಜೀವ ವಿಮಾ ನಿಗಮದ ಮೂಲಕ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಬುದ್ಧಿಮಾಂದ್ಯ ಮಕ್ಕಳ/ವ್ಯಕ್ತಿಗಳ ತಂದೆ:ತಾಯಿ: ಪೋಷಕರು ಮರಣ ಹೊಂದಿದ ನಂತರ ಬುದ್ಧಿಮಾಂದ್ಯ ಮಕ್ಕಳ ಜೀವನ ನಿರ್ವಹಣೆಗಾಗಿ ರೂ.20,000/-ಗಳ ಪರಿಹಾರ ಧನವನ್ನು ಕುಟುಂಬದ ನಾಮ ನಿರ್ದೇಶಿತ ಸದಸ್ಯರಿಗೆ ಪಾವತಿಸಲಾಗುತ್ತಿದೆ.

5. ವಿಕಲಚೇತನ ವ್ಯಕ್ತಿಗಳನ್ನು ಸಾಮಾನ್ಯರು ಮದುವೆಯಾದಲ್ಲಿ ಪ್ರೋತ್ಸಾಹ ಧನ ನೀಡುವ ಯೋಜನೆ:

ವಿಕಲಚೇತನ ಯುವಕ/ಯುವತಿಯರನ್ನು ವಿವಾಹವಾಗುವ ಸಾಮಾನ್ಯ ಯುವಕ/ ಯುವತಿಯರಿಗೆ ನಿರಂತರವಾಗಿ ಮಾಸಿಕ ಆದಾಯ ದೊರಕಿಸಲು ವಿಕಲಚೇತನ ವ್ಯಕ್ತಿಯ ಹೆಸರಿನಲ್ಲಿ ರೂ.50,000/-ಗಳನ್ನು ಮದುವೆಯಾದ ಸಾಮಾನ್ಯ ವ್ಯಕ್ತಿ ಹಾಗೂ ವಿಕಲಚೇತನರ ಜಂಟಿ ಹೆಸರಿನಲ್ಲಿ 05 ವರ್ಷದ ಅವಧಿಗೆ ಹೂಡಿಕೆಯ ರೂಪದಲ್ಲಿ ನೀಡಿ ಪ್ರೋತ್ಸಾಹ ನೀಡಲು ಹಾಗೂ ಅದರಿಂದ ಬರುವ ಬಡ್ಡಿ ಹಣವನ್ನು ಉಪಯೋಗಿಸುವುದು ಹಾಗೂ 05 ವರ್ಷಗಳ ನಂತರ ಠೇವಣಿ ಮೊತ್ತವನ್ನು ವಾಪಸ್ಸು ಪಡೆಯಬಹುದು ಅಥವಾ ಮುಂದುವರೆಸಲು ಅವಕಾಶವಿರುತ್ತದೆ.

6. ಅಂಧ ಮಹಿಳೆಯರಿಗೆ ಜನಿಸುವ ಮಕ್ಕಳಿಗೆ ಆರೈಕೆ ಭತ್ಯೆ ಒದಗಿಸುವ ಯೋಜನೆ :

ಅಂಧ ಮಹಿಳೆಯರು ಮಗುವಿಗೆ ಜನ್ಮ ನೀಡಿದಾಗ ಆ ಮಗುವನ್ನು ಇತರೆ ಸಾಮಾನ್ಯ ತಾಯಂದಿರಂತೆ ಆರೈಕೆ ಮಾಡುವುದು ಕಷ್ಟಕರವಾಗಿರುತ್ತದೆ.ಇಂತಹ ಅಂಧ ಮಹಿಳೆಯರಿಗೆ ಜನಿಸುವ ಮಕ್ಕಳಿಗೆ ಆರೈಕೆ ಮಾಡಲು ಆಯಾ ಸೇವೆ, ಆರೋಗ್ಯ ಪಾಲನೆ, ಪೌಷ್ಠಿಕ ಆಹಾರ, ಔಷಧೋಪಚಾರಗಳಿಗೆ ಮಾಹೆಯಾನ ರೂ.2000/- ದಂತೆ **5 ವರ್ಷಗಳ** ಅವಧಿಗೆ ಸಹಾಯಧನವನ್ನು ನೀಡಲಾಗುತ್ತಿದೆ.ಈ ಸೌಲಭ್ಯವನ್ನು ಕನಿಷ್ಠ 2 ಮಕ್ಕಳವರೆಗೆ ಪಡೆಯಬಹುದಾಗಿದೆ.

(ಡಿ) ಪುನರ್ವಸತಿ ಯೋಜನೆಗಳು:

1. ಅಂಗವಿಕಲರಿಗೆ ಸಾಧನ ಸಲಕರಣೆಗಳು :

ಈ ಯೋಜನೆಯಡಿಯಲ್ಲಿ ಅಂಗವಿಕಲರಿಗೆ ಅವಶ್ಯವಾಗಿರುವ ಸಾಧನ ಸಲಕರಣೆಗಳನ್ನು ನೀಡಲಾಗುತ್ತಿದೆ. ಫಲಾನುಭವಿಯ ಕುಟುಂಬದ ವಾರ್ಷಿಕ ಆದಾಯ ಮಿತಿಯನ್ನು ಗ್ರಾಮೀಣ ಪ್ರದೇಶದ ಫಲಾನುಭವಿಗಳಿಗೆ ರೂ.11,500/- ಮತ್ತು ನಗರ ಪ್ರದೇಶದ ಫಲಾನುಭವಿಗಳಿಗೆ ರೂ.24,000/- ನಿಗದಿಗೊಳಿಸಲಾಗಿದೆ. ಈ ಯೋಜನೆಯಡಿ ರೂ.15,000/-ಗಳ ಮಿತಿಯೊಳಗೆ ವಿಕಲಚೇತನರಿಗೆ ಅವಶ್ಯವಿರುವ ಕ್ಯಾಲಿಪರ್ಸ್, ಕ್ರಚರ್ಸ್, ಶ್ರವಣ ಸಾಧನ, ವೈಟ್ ಕೇನ್, ಬ್ರೈಲ್ ವಾಚ್ ಇನ್ನಿತರ ಸಲಕರಣೆಗಳನ್ನು ಉಚಿತವಾಗಿ ನೀಡಲಾಗುತ್ತಿದೆ.

ಅ. ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ಯೋಜನೆ :

ಎಸ್.ಎಸ್.ಎಲ್.ಸಿ ನಂತರ ವ್ಯಾಸಂಗ ಮಾಡುವ ದೃಷ್ಟಿದೋಷವುಳ್ಳ ವಿಕಲಚೇತನ ವಿದ್ಯಾರ್ಥಿಗಳು ಇತ್ತೀಚಿನ ತಂತ್ರಜ್ಞಾನ ಮತ್ತು ತಂತ್ರಾಂಶದ ಉಪಯೋಗದಿಂದ ಉನ್ನತ ಶಿಕ್ಷಣವನ್ನು ಪಡೆಯಲು ಅನುಕೂಲವಾಗುವಂತೆ ಮಾತನಾಡುವ (ಟಾಕಿಂಗ್) ಲ್ಯಾಪ್‌ಟಾಪ್‌ಗಳನ್ನು ಅರ್ಹ ಫಲಾನುಭವಿಗಳಿಗೆ ನೀಡಲಾಗುತ್ತಿದೆ.

ತೀವ್ರತರನಾದ ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರವಾಹನ ಯೋಜನೆ :

20 ರಿಂದ 60 ವರ್ಷದ ವಯೋಮಾನದ ತೀವ್ರತರವಾದ ದೈಹಿಕ ವಿಕಲಚೇತನರಿಗೆ ಓಡಾಡಲು ಅನುಕೂಲವಾಗುವಂತೆ ಜೀವಿತ ಕಾಲದಲ್ಲಿ ಒಂದು ಬಾರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನವನ್ನು ಮಂಜೂರು ಮಾಡಲಾಗುತ್ತದೆ. ಈ ಯೋಜನೆಯಡಿ ಫಲಾನುಭವಿಯ ಕುಟುಂಬದ ವಾರ್ಷಿಕ ವರಮಾನ ರೂ.2.00 ಲಕ್ಷಗಳಿಗಿಂತ ಕಡಿಮೆ ಇರಬೇಕಾಗಿರುತ್ತದೆ.

2.ಜಿಲ್ಲಾ ಅಂಗವಿಕಲರ ಪುನರ್ವಸತಿ ಕೇಂದ್ರ ಯೋಜನೆ:-

ವಿಕಲಚೇತನರನ್ನು ಗುರುತಿಸಿ ಅವರಿಗೆ ಶೈಕ್ಷಣಿಕ, ಉದ್ಯೋಗ ಮತ್ತು ತರಬೇತಿ, ಸಾಮಾಜಿಕ ಭದ್ರತೆ ಹಾಗೂ ಪುನರ್ವಸತಿ ಸೇವೆಗಳನ್ನು ಅವರ ಮನೆ ಬಾಗಿಲಿನಲ್ಲಿಯೇ ಒದಗಿಸಿ ಅವರ ಸರ್ವಾಂಗೀಣ ಪುನರ್ವಸತಿಯನ್ನು ಕಲ್ಪಿಸುವುದು ಈ ಯೋಜನೆಯ ಪ್ರಮುಖ ಉದ್ದೇಶವಾಗಿದೆ.ಈ ಯೋಜನೆಯಡಿ ವಿಕಲಚೇತನರಿಗೆ ಅಗತ್ಯವಿರುವ ವೈದ್ಯಕೀಯ ಸೇವೆ, ವೃತ್ತಿ ಚಿಕಿತ್ಸೆ, ವಿವಿಧ ರೀತಿಯ ಸಾಧನ ಸಲಕರಣೆಗಳನ್ನು ಕೇಂದ್ರಗಳಲ್ಲಿ ತಯಾರಿಸಿ ಒದಗಿಸಲಾಗುವುದು. ಪ್ರಸ್ತುತ 16 ಜಿಲ್ಲೆಗಳಲ್ಲಿ ಜಿಲ್ಲಾ ಪುನರ್ವಸತಿ ಕೇಂದ್ರಗಳು ನಡೆಯುತ್ತಿವೆ. (ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಬೆಳಗಾವಿ, ಬೀದರ್, ಚಿತ್ರದುರ್ಗ, ದಕ್ಷಿಣ ಕನ್ನಡ, ಮೈಸೂರು, ಉಡುಪಿ, ಹಾಸನ, ವಿಜಯಪುರ, ರಾಯಚೂರು, ಚಿಕ್ಕಮಗಳೂರು, ಬಳ್ಳಾರಿ, ಹಾವೇರಿ, ಚಾಮರಾಜನಗರ, ಗದಗ)

3. <u>ಅಂಗವಿಕಲತೆಯನ್ನು ನಿವಾರಿಸುವ ಶಸ್ತ್ರಚಿಕಿತ್ಸೆಗಾಗಿ ವೈದ್ಯಕೀಯ ಪರಿಹಾರ ನಿಧಿ ಯೋಜನೆ:-</u>

ಅಂಗವಿಕಲ ವ್ಯಕ್ತಿಗಳಿಗೆ ಅಂಗವಿಕಲತೆಯನ್ನು ನಿವಾರಿಸಲು ಶಸ್ತ್ರ ಚಿಕಿತ್ಸೆಗಾಗಿ ಸರ್ಕಾರಿ ಆಸ್ಪತ್ರೆ, ಸಂಜಯಗಾಂಧಿ ಆಸ್ಪತ್ರೆಗಳಲ್ಲಿ ಹಾಗೂ ಸುಸಜ್ಜಿತ ಖಾಸಗಿ ಆಸ್ಪತ್ರೆಗಳಲ್ಲಿ ಅಂಗವಿಕಲತೆ ನಿವಾರಣಾ ಶಸ್ತ್ರ ಚಿಕಿತ್ಸೆಗಾಗಿ ರೂ.1.00 ಲಕ್ಷಗಳವರೆಗೆ ಸಹಾಯ ಧನವನ್ನು ಮಂಜೂರು ಮಾಡಲಾಗುತ್ತಿದೆ.

4. <u>ಸಾಧನೆ ಮತ್ತು ಪ್ರತಿಭೆ ಯೋಜನೆ:</u>

ವಿಕಲಚೇತನ ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡಿ ಧನಸಹಾಯ ನೀಡಲು "ಸಾಧನೆ" ಎಂಬ ಯೋಜನೆಯು ಜಾರಿಯಲ್ಲಿದ್ದು, ಕ್ರೀಡೆಗಳಲ್ಲಿ ವಿಶೇಷ ಸಾಧನೆಗೈದ ವಿಕಲಚೇತನರಿಗೆ ರೂ.50,000/-ಗಳ ಧನ ಸಹಾಯವನ್ನು ನೀಡಲಾಗುತ್ತಿದೆ.

ವಿಕಲಚೇತನರು ನೀಡುವ ಸಾಂಸ್ಕೃತಿಕ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡಿ ಧನಸಹಾಯ ನೀಡುವ ಸಲುವಾಗಿ "ಪ್ರತಿಭೆ" ಎಂಬ ಯೋಜನೆಯು ಜಾರಿಯಲ್ಲಿದ್ದು, ವೈಯಕ್ತಿಕ ಸಾಂಸ್ಕೃತಿಕ ರೂ.2,000/-ಗಳು ಹಾಗೂ ಸಮೂಹ ಕಾರ್ಯಕ್ರಮಕ್ಕೆ ರೂ.10,000/-ಗಳ ಪ್ರೋತ್ಸಾಹಧನ ನೀಡಲಾಗುತ್ತದೆ.

<u>5. ನಿರಾಮಯ ಆರೋಗ್ಯ ವಿಮಾ ಯೋಜನೆ :</u>

ಬುದ್ಧಿಮಾಂದ್ಯ, ಸೆರೆಬ್ರಲ್ ಪಾಲ್ಸಿ, ಆಟಿಸಂ ಮತ್ತು ಬಹುವಿಧ ಅಂಗವಿಕಲತೆ ಹೊಂದಿರುವ ಪ್ರತಿ ವ್ಯಕ್ತಿ ಹಾಗೂ ಮಗುವಿಗೆ ವರ್ಷಕ್ಕೆ ಒಂದು ಬಾರಿ ಪ್ರೀಮಿಯಂ ಮೊತ್ತ ರೂ.250/-ಗಳನ್ನು ಭಾರತ ಸರ್ಕಾರದಿಂದ ಗುರುತಿಸಲ್ಪಟ್ಟ ಅಧಿಕೃತ ಸಂಸ್ಥೆಯಾದ ಅಂಗವಿಕಲರ ಪುನಶ್ಚೇತನ ಸಂಸ್ಥೆ (ರಿ) (ಎ.ಪಿ.ಡಿ) ಬೆಂಗಳೂರು ರವರಿಗೆ ಪಾವತಿಸಲಾಗುವುದು. ಪ್ರತಿ ವರ್ಷ ಯೋಜನೆಯಡಿ ಬರುವ ಫಲಾನುಭವಿಗಳು ರೂ.1.00 ಲಕ್ಷಗಳವರೆಗೆ ವೈದ್ಯಕೀಯ ಸೌಲಭ್ಯ ಪಡೆಯಬಹುದಾಗಿರುತ್ತದೆ. ಈ ಮೊತ್ತದಲ್ಲಿ ರೂ.60,000/-ಗಳವರೆಗೆ ಸರ್ಜರಿ ವೆಚ್ಚ ಉಳಿದ ರೂ.40,000/-ಗಳಲ್ಲಿ ವೈದ್ಯಕೀಯ ಖರ್ಚು ಥೆರಪಿ, ಪ್ರಯಾಣ ವೆಚ್ಚಗಳನ್ನು ಒಳಗೊಂಡಿರುತ್ತದೆ.

7. **ಸ್ಪರ್ಧಾ ಚೇತನ:-**

ಈ ಯೋಜನೆಯಡಿ ವಿಶೇಷ ಸಾಮರ್ಥ್ಯ/ಭಿನ್ನ ಸಾಮರ್ಥ್ಯದ ವಿದ್ಯಾವಂತ ವ್ಯಕ್ತಿಗೆಗಳಿಗೆ ಐ.ಎ.ಎಸ್./ಕೆ.ಎ.ಎಸ್. ಹಾಗೂ ಇತರೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸರ್ಕಾರದ ಇತರೆ ಇಲಾಖೆಗಳಡಿ ಗುರುತಿಸಲ್ಪಟ್ಟ ಪೂರ್ವ ಪರೀಕ್ಷಾ ತರಬೇತಿ ಕೇಂದ್ರಗಳು ಹಾಗೂ ಈ ಇಲಾಖೆಯಿಂದ ಗುರುತಿಸಲ್ಪಟ್ಟ ತರಬೇತಿ ಕೇಂದ್ರಗಳ ಮೂಲಕ ತರಬೇತಿಯನ್ನು ಉಚಿತವಾಗಿ ನೀಡಲಾಗುತ್ತಿದೆ.

8. **ನಿರುದ್ಯೋಗ ಭತ್ಯೆ:-** ಎಸ್.ಎಸ್.ಎಲ್.ಸಿ ಹಾಗೂ ನಂತರ ವ್ಯಾಸಂಗ ಮಾಡಿರುವ ನಿರುದ್ಯೋಗಿ ವಿಕಲಚೇತನರಿಗೆ ಮಾಸಿಕ ರೂ.1000/-ಗಳ ನಿರುದ್ಯೋಗ ಭತ್ಯೆಯನ್ನು ಮಂಜೂರು ಮಾಡಲಾಗುತ್ತಿದೆ.

(ಇ) ಸಾರ್ವಜನಿಕ ಅರಿವು ಮೂಡಿಸುವ ಯೋಜನೆಗಳು:

1. ವಿಕಲಚೇತನರ ಮಾಹಿತಿ ಸಲಹಾ ಕೇಂದ್ರ :

ಅಂಗವಿಕಲರಿಗೆ ಲಭ್ಯವಿರುವ ರಾಜ್ಯ ಸರ್ಕಾರದ ಹಾಗೂ ಕೇಂದ್ರ ಸರ್ಕಾರದ ಯೋಜನೆಗಳ ಹಾಗೂ ವಿಶೇಷ ಶಾಲೆಗಳು ಹಾಗೂ ವೃತ್ತಿ ತರಬೇತಿ ಸಂಸ್ಥೆಗಳ ಬಗ್ಗೆ ಮಾಹಿತಿಯನ್ನು ಒದಗಿಸಲು ನಿರ್ದೇಶನಾಲಯದಲ್ಲಿ ಹಾಗೂ ರಾಜ್ಯದ 30 ಜಿಲ್ಲೆಗಳಲ್ಲಿ ವಿಕಲಚೇತನರ ಸಹಾಯವಾಣಿ / ಮಾಹಿತಿ ಕೇಂದ್ರಗಳನ್ನು ನಡೆಸಲಾಗುತ್ತಿದೆ.ಈ ಕೇಂದ್ರಗಳಲ್ಲಿ ಒಳ್ಳೆಯ ಗುಣ ಮಟ್ಟದ ಕೃತಕಾಂಗಗಳು ದೊರೆಯುವ ಮಾಹಿತಿ ಹಾಗೂ ಅಂಗವಿಕಲರಿಗೆ ಬೇಕಾಗಿರುವ ಮಾಹಿತಿಗಳನ್ನು ಮತ್ತು ಇದರ ಜೊತೆಗೆ ರಾಜ್ಯ ಸರ್ಕಾರ, ಕೇಂದ್ರ ಸರ್ಕಾರ, ಸಾರ್ವಜನಿಕ ಉದ್ಯಮ ಹಾಗೂ ಖಾಸಗಿ ಉದ್ಯಮಗಳಲ್ಲಿ ಅಂಗವಿಕಲರಿಗೆ ಉದ್ಯೋಗ ಅವಕಾಶಗಳ ಬಗ್ಗೆ ಮಾಹಿತಿಯನ್ನು ನೀಡಲಾಗುವುದು.

2) ವಿಕಲಚೇತನರಿಗೆ ಗುರುತಿನ ಚೀಟಿ ನೀಡುವ ಯೋಜನೆ:-

ಈ ಯೋಜನೆಯಡಿಯಲ್ಲಿ ವಿಕಲಚೇತನ ವ್ಯಕ್ತಿಗಳಿಗೆ ಗುರುತಿನ ಚೀಟಿಗಳನ್ನು ನೀಡಲಾಗುತ್ತಿದೆ.ಈ ಗುರುತಿನ ಚೀಟಿಯನ್ನು ವಿವಿಧ ಸರ್ಕಾರಿ ಸೌಲಭ್ಯಗಳನ್ನು ಪಡೆಯಲು ಉಪಯೋಗಿಸಿಕೊಳ್ಳಬಹುದಾಗಿದೆ. **ವಿಕಲಚೇತನರಿಗೆ ವಿಶಿಷ್ಠ ಗುರುತಿನ ಚೀಟಿ (ಗಟಟಿಕಿಗಇ ಆಖಖಂಃಖಖಖಖಿಜ ಖಆ)**ನೀಡುವ ಯೋಜನೆಯು ಕೇಂದ್ರ ಸರ್ಕಾರ ಪ್ರಾಯೋಜಿತ ಯೋಜನೆಯಾಗಿದೆ. ರಾಜ್ಯ ಸರ್ಕಾರದಿಂದ ನೇಮಿಸಲಾಗುವ ವೈದ್ಯಕೀಯ ಪ್ರಾಧಿಕಾರಗಳಿಂದ ದೃಢೀಕರಿಸಲಾಗುವ ವೈದ್ಯಕೀಯ ಪ್ರಮಾಣ ಪತ್ರದ ಸಮಗ್ರ ಮಾಹಿತಿಯುಳ್ಳ ಗಣಕೀಕೃತ ಗುರುತಿನ ಚೀಟಿಯನ್ನು ವಿಕಲಚೇತನ ವ್ಯಕ್ತಿಗಳಿಗೆ ನೀಡುವ ವ್ಯವಸ್ಥೆಯಾಗಿದ್ದು, ಇದರಲ್ಲಿ ವಿಕಲಚೇತನ ವ್ಯಕ್ತಿಯ ವಿವರಗಳು ಹಾಗೂ ಅವರಲ್ಲಿರುವ ವಿಕಲತೆಯ ವಿವರ ಮತ್ತು ಪ್ರಮಾಣವನ್ನು ನಮೂದಿಸಲಾಗಿರುತ್ತದೆ.

3).ವಿಕಲಚೇತನರಿಗೆ ರಿಯಾಯಿತಿ ದರದ ಬಸ್ ಪಾಸ್:

ಈ ಯೋಜನೆಯಡಿ ವಿಕಲಚೇತನರಿಗೆ 100 ಕಿ.ಮೀ. ವ್ಯಾಪ್ತಿಯೊಳಗೆ ಸಂಚರಿಸಲು ವಾರ್ಷಿಕ ರೂ.660/- ರಿಯಾಯಿತಿ ದರದಲ್ಲಿ ಬಸ್ ಪಾಸ್‌ಗಳನ್ನು ಕೆ.ಎಸ್.ಆರ್.ಟಿ.ಸಿ ಹಾಗೂ ಬಿ.ಎಂ.ಟಿ.ಸಿ ವತಿಯಿಂದ ವಿತರಿಸಲಾಗುತ್ತಿದೆ ಪೂರ್ಣ ಅಂಧರು ಉಚಿತವಾಗಿ ರಾಜ್ಯದಲ್ಲಿ ಸಂಚರಿಸಲು ಅವಕಾಶವಿರುತ್ತದೆ.

ಹಿರಿಯ ನಾಗರಿಕರಿಗಾಗಿ ಜಾರಿಗೊಳಿಸುತ್ತಿರುವ ಯೋಜನೆಗಳು

ಹಗಲು ಯೋಗಕ್ಷೇಮ ಕೇಂದ್ರಗಳು:

ರಾಜ್ಯದ 30 ಜಿಲ್ಲೆಗಳಿಗೆ ಹಗಲು ಯೋಗಕ್ಷೇಮ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರದ ಮಂಜೂರಾತಿ ದೊರೆತಿದ್ದು, ಪ್ರತಿ ಕೇಂದ್ರದಲ್ಲಿ ಸುಮಾರು 50-150 ಫಲಾನುಭವಿಗಳಿಗೆ ಅವಕಾಶ ಕಲ್ಪಿಸಿಕೊಡಲಾಗಿದ್ದು, ಸದರಿ ಯೋಜನೆಗೆ ಸರ್ಕಾರದಿಂದ ವಾರ್ಷಿಕ ರೂ.11.20 ಲಕ್ಷಗಳ ಅನುದಾನವನ್ನು ಮಂಜೂರು ಮಾಡಲಾಗುತ್ತದೆ.

1. **ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳು:**

ಹಿರಿಯ ನಾಗರಿಕರು ಕಿರುಕುಳ, ಹಣಕಾಸಿನ ಶೋಷಣೆ, ಮಾನಸಿಕ ತುಮುಲ ಮತ್ತು ದುರ್ಬಲರಾಗಿ ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದು, ಇಂತಹ ಸಮಸ್ಯೆಗಳ ನಿವಾರಣೆಗಾಗಿ ಹಾಗೂ ತುರ್ತು ಸಹಾಯಕ್ಕಾಗಿ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳನ್ನು ರಾಜ್ಯದ 30 ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲು ಬೆಳಗಾವಿ ಮತ್ತು ಕಲಬುರಗಿ ಜಿಲ್ಲೆಗಳನ್ನು ಹೊರತುಪಡಿಸಿ ಉಳಿದ 28 ಜಿಲ್ಲೆಗಳಲ್ಲಿ ಸಹಾಯವಾಣಿ ಕೇಂದ್ರಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಛೇರಿ ಆವರಣದಲ್ಲಿ, ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದಿಂದ ನಡೆಸಲಾಗುತ್ತಿದೆ.

2. **ಹಿರಿಯ ನಾಗರಿಕರ ವೃದ್ಧಾಶ್ರಮ:**

ರಾಜ್ಯದ 30 ಜಿಲ್ಲೆಗಳಲ್ಲಿ ನಿರ್ಗತಿಕ ಹಿರಿಯ ನಾಗರಿಕರಿಗಾಗಿ ವೃದ್ಧಾಶ್ರಮಗಳನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದ್ದು, ಈ ವೃದ್ಧಾಶ್ರಮದಲ್ಲಿ 25 ನಿರ್ಗತಿಕ ಹಿರಿಯ ನಾಗರಿಕರನ್ನು ದಾಖಲಿಸಿಕೊಳ್ಳಲು ಅವಕಾಶವಿದ್ದು, ಒಂದು ವೃದ್ಧಾಶ್ರಮದ ನಿರ್ವಹಣೆಗಾಗಿ ವಾರ್ಷಿಕ ರೂ.8.00ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದ್ದು, ಇದರಲ್ಲಿ ಸಿಬ್ಬಂದಿ ವೆಚ್ಚ, ನಿರ್ವಹಣಾ ವೆಚ್ಚ, ಔಷಧಿ, ಕಟ್ಟಡ ಬಾಡಿಗೆ, ವೃತ್ತ ಪತ್ರಿಕೆ ಹಾಗೂ ಇತರೆ ವೆಚ್ಚಗಳಿಗಾಗಿ ಒಟ್ಟು ಯೋಜನಾ ವೆಚ್ಚದ ಶೇ.90ರಷ್ಟು ಅನುದಾನವನ್ನು ಸ್ವಯಂ ಸೇವಾ ಸಂಸ್ಥೆಗಳಿಗೆ ನೀಡಲಾಗುತ್ತಿದ್ದು ಉಳಿದ ಶೇ.10ರಷ್ಟನ್ನು ಸಂಸ್ಥೆಯು ಭರಿಸಬೇಕಾಗುತ್ತದೆ. ಅನುದಾನವನ್ನು ಜಿಲ್ಲಾ ಪಂಚಾಯತ್, ಮೂಲಕ ಮಂಜೂರು ಮಾಡಲಾಗುತ್ತಿದೆ.

ರಾಜ್ಯದ ಪ್ರತಿ ಕಂದಾಯ ಉಪ ವಿಭಾಗದಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ವೃದ್ಧಾಶ್ರಮಗಳನ್ನು ಪ್ರಾರಂಭಿಸಲು ಅವಕಾಶವಿದ್ದು, ಪ್ರಸ್ತುತ 8 ಕಂದಾಯ ಉಪ ವಿಭಾಗಕ್ಕೆ ವೃದ್ಧಾಶ್ರಮ ನಡೆಸಲು ಆಡಳಿತಾತ್ಮಕ ಮಂಜೂರಾತಿ ದೊರೆತಿರುತ್ತದೆ.

3. **ಹಿರಿಯ ನಾಗರಿಕರಿಗೆ ಗುರುತಿನ ಚೀಟಿಗಳು:**

60 ವರ್ಷ ಮೇಲ್ಪಟ್ಟ ವಯೋಮಾನದ ಹಿರಿಯ ನಾಗರಿಕರ ಗುರುತಿನ ಚೀಟಿ ಪಡೆಯಲು ಸೇವಾ ಸಿಂಧು ಆನ್‌ಲೈನ್ ತಂತ್ರಾಂಶವನ್ನು ಅಭಿವೃದ್ಧಿ ಪಡಿಸಲಾಗಿದ್ದು, ದಿ:01.10.2018ರಿಂದ ಹಿರಿಯ ನಾಗರಿಕರು ಸೇವಾ ಸಿಂಧು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿ ಹಿರಿಯ ನಾಗರಿಕರ ಗುರುತಿನ ಚೀಟಿಯನ್ನು ಪಡೆಯಬಹುದಾಗಿದೆ.

ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಯೋಜನೆ:

1)ಸಮಗ್ರ ಮಕ್ಕಳ ರಕ್ಷಣಾಯೋಜನೆ:

- ಬಾಲನ್ಯಾಯ (ಮಕ್ಕಳ ಪೋಷಣೆ ಮತ್ತುರಕ್ಷಣೆ) ಕಾಯ್ದೆ–2016 ದಡಿರಕ್ಷಣೆ ಮತ್ತು ಪೋಷಣೆಅಗತ್ಯವಿರುವ ಮಕ್ಕಳಿಗಾಗಿ ಸರ್ಕಾರದಿಂದ 59 ಬಾಲಮಂದಿರಗಳನ್ನು ಹಾಗೂ ಕಾನೂನು ಸಂಘರ್ಷಕ್ಕೊಳಗಾದ ಮಕ್ಕಳಿಗಾಗಿ 17 ವೀಕ್ಷಣಾಲಯಗಳನ್ನು ಸ್ಥಾಪಿಸಿದ್ದು, ಅವುಗಳಲ್ಲಿ 4 ವೀಕ್ಷಣಾಲಯಗಳು ವಿಶೇಷ ಗೃಹಗಳಾಗಿಯೂ ಕೆಲಸ ನಿರ್ವಹಿಸಲು ಅವಕಾಶ ಮಾಡಲಾಗಿದೆ ಹಾಗೂ ಬೆಂಗಳೂರು(ನಗರ) ಜಿಲ್ಲೆಯಲ್ಲಿPlace of Safety ಕಾರ್ಯನಿರ್ವಹಿಸುತ್ತಿದೆ.
- ಸರ್ಕಾರವು ಸ್ವಯಂ ಸೇವಾ ಸಂಸ್ಥೆಗಳನ್ನು ಬಾಲನ್ಯಾಯಕಾಯ್ದೆಯಡಿ ನೋಂದಣಿ ಮಾಡಿಕೊಂಡುಅರ್ಹವಿರುವಸಂಸ್ಥೆಗಳನ್ನು ಅರ್ಹ ಸಂಸ್ಥೆಯಿಂದ ಮಾನ್ಯತೆ ನೀಡುತ್ತಿದೆ. ಅಂತಹ ಸಂಸ್ಥೆಗಳಿಗೆ ರಕ್ಷಣೆ ಮತ್ತು ಪೋಷಣೆಯಅಗತ್ಯವಿರುವ ಹಾಗೂ ಕಾನೂನು ಸಂಘರ್ಷಕ್ಕೊಳಗಾದ ಮಕ್ಕಳನ್ನು ಮಕ್ಕಳ ಕಲ್ಯಾಣ ಸಮಿತಿ ಹಾಗೂ ಬಾಲನ್ಯಾಯಮಂಡಲಿಗಳ ಮೂಲಕ ದಾಖಲಿಸಲಾಗುವುದು. ಅಂತಹ 38 ಅರ್ಹ ಸಂಸ್ಥೆಗಳಲ್ಲಿ 7 ಅನುದಾನಿತ ಸಂಸ್ಥೆಗಳು (ಸರ್ಕಾರದಿಂದಅನುದಾನ ನೀಡಲಾಗುತ್ತಿದೆ) ಹಾಗೂ 1 ವಿಶೇಷ ಗೃಹ, ರಾಜ್ಯದಲ್ಲಿಕಾರ್ಯನಿರ್ವಹಿಸುತ್ತಿವೆ.
- ನಗರ ಮತ್ತುಅರೆನಗರ ಪ್ರದೇಶದಲ್ಲಿರಕ್ಷಣೆ ಮತ್ತು ಪೋಷಣೆಅಗತ್ಯವಿರುವ ಮಕ್ಕಳಿಗಾಗಿ 38 ತೆರೆದ ತಂಗುದಾಣಗಳನ್ನು ನಡೆಸಲು 38 ಸ್ವಯಂ ಸೇವಾ ಸಂಸ್ಥೆಗಳಿಗೆ 15 ಜಿಲ್ಲೆಗಳಲ್ಲಿ ಸಮಗ್ರ ಮಕ್ಕಳ ರಕ್ಷಣಾಯೋಜನೆಯಡಿ ಮಂಜೂರು ಮಾಡಲಾಗಿದೆ.
- ಅನಾಥ, ನಿರ್ಗತಿಕ ಹಾಗೂ ತ್ಯಜಿಸಲ್ಪಟ್ಟ ಮಕ್ಕಳ ಪುನರ್ವಸತಿಗಾಗಿದತ್ತುಕಾರ್ಯಕ್ರಮವನ್ನು ಜಾರಿಗೊಳಿಸಲಾಗುತ್ತಿದೆ. ಬಾಲನ್ಯಾಯಕಾಯ್ದೆಯಡಿದತ್ತು ಪ್ರಕ್ರಿಯೆಯನ್ನು ನಡೆಸಲು ನೋಂದಾಯಿತ ಸ್ವಯಂ ಸೇವಾ ಸಂಸ್ಥೆಗಳಿಗೆ ಪರವಾನಿಗೆ ನೀಡಲಾಗುತ್ತಿದೆ. ರಾಜ್ಯದಲ್ಲಿಒಟ್ಟು 32 ಸ್ವಯಂ ಸೇವಾ ಸಂಸ್ಥೆಗಳಿಗೆ ದತ್ತು ಕೇಂದ್ರಗಳೆಂದು ಪರವಾನಿಗೆ ನೀಡಲಾಗಿದ್ದು, ಅವುಗಳಲ್ಲಿ 6 ಸಂಸ್ಥೆಗಳಿಗೆ ವಿದೇಶಿ ದತ್ತು ಪ್ರಕ್ರಿಯೆ ಮಾಡಲುಕೇಂದ್ರದತ್ತು ಸಂಪನ್ಮೂಲ ಪ್ರಾಧಿಕಾರವುಅನುಮತಿ ನೀಡಿರುತ್ತದೆ.
- ಕೇಂದ್ರ ಪುರಸ್ಕೃತ ಪ್ರಾಯೋಜಕಕಾರ್ಯಕ್ರಮದಡಿ ಮಕ್ಕಳನ್ನು ಕುಟುಂಬ ವಾತಾವರಣದಲ್ಲಿ ಬೆಳೆಸಲು, ಶಿಕ್ಷಣ ಪೋಷಣೆ ಹಾಗೂ ಆರೋಗ್ಯ ಪರಿಕರಗಳಿಗಾಗಿ ಮಾಹೆಯಾನ ರೂ.1000/–ಗಳ ಆರ್ಥಿಕ ಸಹಾಯವನ್ನುಪ್ರಾಯೋಜಕತ್ವ ಮತ್ತು ಪೋಷಕತ್ವಅನುಮೋದನೆ ಸಮಿತಿಯಿಂದಆಯ್ಕೆಯಾದ ಪ್ರತಿ ಮಗುವಿಗೆ ಗರಿಷ್ಠ 3 ವರ್ಷಗಳ ಅವಧಿಗೆ ನೀಡಲಾಗುತ್ತಿದೆ.

2) **ಹೆಚ್.ಐ.ವಿ. ಸೋಂಕಿತ/ಬಾಧಿತ ಮಕ್ಕಳಿಗಾಗಿ ವಿಶೇಷಪಾಲನಾ ಯೋಜನೆ:**

- ಈ ಯೋಜನೆಯಡಿಯಲ್ಲಿಎ.ಆರ್.ಟಿ. ಕೇಂದ್ರಗಳಲ್ಲಿ ನೋಂದಾಯಿತ ಹಾಗೂ ಪ್ರಾಯೋಜಕತ್ವ ಮತ್ತು ಪೋಷಕತ್ವಅನುಮೋದನೆ ಸಮಿತಿಯಿಂದಆಯ್ಕೆಯಾದಕುಟುಂಬ ಹೆಚ್.ಐ.ವಿ. ಸೋಂಕಿತ/ಬಾಧಿತ ಮಕ್ಕಳಿಗೆ ಆರ್ಥಿಕ ಸಹಾಯವನ್ನು ನೀಡಲಾಗುವುದು. ಮಕ್ಕಳ ಆರೋಗ್ಯ ಶಿಕ್ಷಣ ಹಾಗೂ ಉತ್ತಮಆಹಾರಕ್ಕಾಗಿ ಮಾಸಿಕ ರೂ.1000/– ಗಳನ್ನು ನೀಡಲಾಗುತ್ತಿದೆ.

16H6

ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ

ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ ದಿಂದ ಅನುಷ್ಠಾನಗೊಳ್ಳುತ್ತಿರುವ ಕಾರ್ಯಕ್ರಮಗಳು ಮತ್ತು ವಿವರಗಳು.

1. **ಉದ್ಯೋಗಿನಿ ಯೋಜನೆ:**

ಈ ಯೋಜನೆಯಡಿ ಸ್ವಯಂ ಉದ್ಯೋಗ ಕೈಗೊಳ್ಳ ಬಯಸುವ 18–55 ವರ್ಷ ವಯೋಮಿತಿಯೊಳಗಿನ ಎಲ್ಲಾ ಮಹಿಳೆಯರಿಗೆ ಬ್ಯಾಂಕುಗಳಿಂದ ಸಾಲ ಮತ್ತು ನಿಗಮದಿಂದ ಸಹಾಯಧನ (ಪ.ಜಾತಿ/ಪ.ಪಂಗಡದವರಿಗೆ ಸಾಲದ ಮೊತ್ತದ ಶೇ.50 ರಷ್ಟು, ಇತರೆ ವರ್ಗದವರಿಗೆ ಶೇ.30 ರಷ್ಟು) ಒದಗಿಸುವುದು.

2. **ಕಿರುಸಾಲ ಯೋಜನೆ:**

ಈ ಯೋಜನೆಯಡಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಸ್ತ್ರೀಶಕ್ತಿ ಯೋಜನೆಯಡಿ ರಚನೆಗೊಂಡ ಸ್ತ್ರೀಶಕ್ತಿ ಸ್ವ ಸಹಾಯ ಸಂಘಗಳು ಆರ್ಥಿಕವಾಗಿ ಸಬಲರಾಗಲು ಪ್ರತಿ ಸ್ತ್ರೀಶಕ್ತಿ ಸ್ವ ಸಹಾಯ ಸಂಘಕ್ಕೆ ನಿಗಮದ ವತಿಯಿಂದ ಬಡ್ಡಿರಹಿತ ಸಾಲ (ಪ.ಜಾತಿ/ಪಂಗಡ ಸಂಘಗಳಿಗೆ ರೂ.3.00 ಲಕ್ಷಗಳವರೆಗೆ ಮತ್ತು ಇತರೆ ವರ್ಗದ ಸಂಘಗಳಿಗೆ ರೂ.2.00 ಲಕ್ಷಗಳವರೆಗೆ ಸಾಲ) ಒದಗಿಸುವುದು.

3. **ಚೇತನಾ ಯೋಜನೆ:**

ಈ ಯೋಜನೆಯಡಿ ದಮನಿತ (ಲೈಂಗಿಕ ಕಾರ್ಯಕರ್ತೆಯರು) ಮಹಿಳೆಯರಿಗೆ ಆದಾಯೋತ್ಪನ್ನಕರ ಚಟುವಟಿಕೆ ಕೈಗೊಳ್ಳಲು ನಿಗಮದಿಂದ ಎಲ್ಲ ವರ್ಗದ ದಮನಿತ ವರ್ಗದವರಿಗೆ ರೂ.50,000/–ಗಳ (ರೂ.25,000/– ಬಡ್ಡಿರಹಿತ ಸಾಲ ಹಾಗೂ ರೂ.25,000/–ಗಳ ಸಹಾಯಧನ) ಗಳ ಆರ್ಥಿಕ ಸೌಲಭ್ಯ ನೀಡಲಾಗುವುದು.

4. **ಧನಶ್ರೀ ಯೋಜನೆ:**

ಈ ಯೋಜನೆಯಡಿ ಹೆಚ್.ಐ.ವಿ. ಸೋಂಕಿತ ಹಾಗೂ ಬಾಧಿತ ಮಹಿಳೆಯರಿಗೆ ಆದಾಯೋತ್ಪನ್ನಕರ ಚಟುವಟಿಕೆ ಕೈಗೊಳ್ಳಲು ನಿಗಮದಿಂದ ರೂ.50,000/–ಗಳ (ರೂ.25,000/– ಬಡ್ಡಿರಹಿತ ಸಾಲ ಹಾಗೂ ರೂ.25,000/–ಗಳ ಸಹಾಯಧನ) ಆರ್ಥಿಕ ಸೌಲಭ್ಯ ನೀಡಲಾಗುವುದು.

5. **ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆ:**

ಈ ಯೋಜನೆಯಡಿ ಲಿಂಗತ್ವ ಅಲ್ಪಸಂಖ್ಯಾತರು (ಟ್ರಾನ್ಸ್ ಜೆಂಡರ್ಸ್) ಆದಾಯೋತ್ಪನ್ನಕರ ಚಟುವಟಿಕೆ ಕೈಗೊಳ್ಳಲು ನಿಗಮದಿಂದ ರೂ.50,000/–ಗಳ (ರೂ.25,000/– ಬಡ್ಡಿರಹಿತ ಸಾಲ ಹಾಗೂ ರೂ.25,000/–ಗಳ ಸಹಾಯಧನ) ಆರ್ಥಿಕ ಸೌಲಭ್ಯ ನೀಡಲಾಗುವುದು.

6. **ಮಹಿಳಾ ತರಬೇತಿ ಯೋಜನೆ:**

ಈ ಯೋಜನೆಯಡಿ ಆರ್ಥಿಕವಾಗಿ ಹಿಂದುಳಿದ ಮಹಿಳೆಯರಿಗೆ, ವಿಧವೆಯರಿಗೆ, ನಿರ್ಗತಿಕ ಹಾಗೂ ವಿಕಲಚೇತರನರಿಗೆ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಮಹಿಳೆಯರಿಗೆ ಕೌಶಲ್ಯಾಭಿವೃದ್ಧಿ ತರಬೇತಿ ನೀಡುವುದು.

7. **ಬಡ್ಡಿ ಸಹಾಯಧನ ಯೋಜನೆ (ಕೆ.ಎಸ್.ಎಫ್.ಸಿ ಮೂಲಕ)**

ಮಹಿಳಾ ಉದ್ದಿಮೆದಾರರು ಸಣ್ಣ ಮತ್ತು ಮಧ್ಯಮ ಉದ್ದಿಮೆಗಳನ್ನು ಸ್ಥಾಪಿಸಿಲು ರೂ.50.00 ಲಕ್ಷಗಳಿಂದ ರೂ.200.00 ಲಕ್ಷಗಳವರೆಗೆ ಸಾಲವನ್ನು ಕರ್ನಾಟಕ ರಾಜ್ಯ ಹಣಕಾಸು ನಿಗಮದಿಂದ ಒದಗಿಸಿದಾಗ, ಶೇ.14 ರ ಬಡ್ಡಿಯಲ್ಲಿ ಶೇ.10 ರ ಬಡ್ಡಿಯ ಸಹಾಯಧನವನ್ನು ಕ.ರಾ.ಮ.ಅ.ನಿಗಮದ ಮೂಲಕ ಒದಲಾಗಿಸಲಾಗುವುದು.

8. ದೇವದಾಸಿ ಪುನರ್ವಸತಿ ಯೋಜನೆ:

1993–94 ಮತ್ತು 2007–08ನೇ ಸಾಲಿನಲ್ಲಿ ಉತ್ತರ ಕರ್ನಾಟಕ ಜಿಲ್ಲೆಗಳಲ್ಲಿ ಸಮೀಕ್ಷೆ ಮಾಡಿ ಗುರುತಿಸಲಾದ ಮಾಜಿ ದೇವದಾಸಿಯರಿಗೆ ಆದಾಯೋತ್ಪನ್ನಕರ ಚಟುವಟಿಕೆ ಕೈಗೊಳ್ಳಲು ನಿಗಮದಿಂದ ರೂ.50,000/–ಗಳ (ರೂ.25,000/– ಬಡ್ಡಿರಹಿತ ಸಾಲ ಹಾಗೂ ರೂ.25,000/–ಗಳ ಸಹಾಯಧನ) ಆರ್ಥಿಕ ಸೌಲಭ್ಯವನ್ನು 6 ದಿನಗಳ ಇ.ಡಿ.ಪಿ. ತರಬೇತಿಯೊಂದಿಗೆ ಒದಲಾಗಿಸ ಲಾಗುವುದು.

9. ಮಾಜಿ ದೇವದಾಸಿಯರಿಗೆ ಮಾಸಾಶನ ಯೋಜನೆ:

ಮಾಜಿ ದೇವದಾಸಿಯರು ಕನಿಷ್ಟ ಜೀವನ ನಿರ್ವಹಣೆ ನಡೆಸಲು ಅನುಕೂಲವಾಗುವಂತೆ ಸಾಮಾಜಿಕ ಭದ್ರತೆಗಾಗಿ 45 ವರ್ಷ ಮೇಲ್ಪಟ್ಟ ಮಾಜಿ ದೇವದಾಸಿಯರಿಗೆ ಪ್ರತಿ ಮಾಹೆಯಾನ ರೂ.1500/– ಮಾಸಾಶನವನ್ನು ನೇರವಾಗಿ ನಿಗಮದಿಂದ ಒದಗಿಸಲಾಗುತ್ತಿದೆ.

ಕರ್ನಾಟಕ ಬಾಲವಿಕಾಸ ಅಕಾಡೆಮಿ ಧಾರವಾಡ

ಕರ್ನಾಟಕ ಬಾಲವಿಕಾಸ ಅಕಾಡೆಮಿ ಧಾರವಾಡ ಕಚೇರಿಯು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಒಂದು ಸಂಸ್ಥೆಯಾಗಿ ಕಾರ್ಯನಿರ್ವಹಿಸುತ್ತಿದೆ. ಅಕಾಡೆಮಿಯಿಂದ ವಿಶೇಷವಾಗಿ ಯಾವುದೇ ಫಲಾನುಭವಿ ಆಧಾರಿತ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿಲ್ಲ. ಆದರೆ 0–18 ವರ್ಷದ ಒಳಗಿನ ಮಕ್ಕಳಿಗೆ ವಿಶೇಷ ಕಾರ್ಯಕ್ರಮಗಳನ್ನು ರೂಪಿಸಿ ಸರ್ಕಾರದ ಅನುಮೋದನೆಯೊಂದಿಗೆ ರಾಜ್ಯಾದ್ಯಂತ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

****

ಕರ್ನಾಟಕ ವಿಧಾನ ಸಭೆ

15ನೇ ವಿಧಾನಸಭೆ

9ನೇ ಅಧಿವೇಶನ

(ಮುಂದುವರೆದ ಉಪವೇಶನಗಳು)

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	**1649**
ವಿಧಾನ ಸಭೆಯ ಸದಸ್ಯರ ಹೆಸರು	:	ಶ್ರೀ ಭರತ್ ಶೆಟ್ಟಿ ವೈ.ಡಾ|| (ಮಂಗಳೂರು ನಗರ ಉತ್ತರ)
ಉತ್ತರಿಸುವ ದಿನಾಂಕ	:	10-03-2021
ಉತ್ತರಿಸುವವರು	:	ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕ್ರ. ಸಂ.	ಪ್ರಶ್ನೆಗಳು	ಉತ್ತರ
(ಅ)	ಜಿಲ್ಲಾ ಹಾಗೂ ತಾಲ್ಲೂಕು ವ್ಯಾಪ್ತಿಯಲ್ಲಿ ಇರುವ ಜಿಲ್ಲಾ ಮತ್ತು ತಾಲ್ಲೂಕು ಸಮಿತಿಗಳು ಎಷ್ಟು; ಅವುಗಳ ಕಾರ್ಯ ವ್ಯಾಪ್ತಿ ಹಾಗೂ ಫಲಾನುಭವಿಗಳ ಆಯ್ಕೆಯ ಕುರಿತಂತೆ ಮಾಹಿತಿಯನ್ನು ಒದಗಿಸುವುದು;	ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 186 ರನ್ವಯ ಜಿಲ್ಲಾ ಪಂಚಾಯತಿಯಲ್ಲಿ 5 ಸ್ಥಾಯಿ ಸಮಿತಿಗಳು ಹಾಗೂ ಪ್ರಕರಣ 148 ರನ್ವಯ ತಾಲ್ಲೂಕು ಪಂಚಾಯತಿಯಲ್ಲಿ 3 ಸ್ಥಾಯಿ ಸಮಿತಿಗಳಿವೆ (ವಿವರಗಳನ್ನು ಅನುಬಂಧ-1ರಲ್ಲಿ ಲಗತ್ತಿಸಿದೆ). ವೈಯಕ್ತಿಕ ಫಲಾನುಭವಿಗಳ ಆಯ್ಕೆಯನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 3ರಂತೆ ಗ್ರಾಮ ಸಭೆಯಲ್ಲಿ ನಡೆಸಲಾಗುವುದು.
(ಅ)	ದಕ್ಷಿಣ ಕನ್ನಡ ಜಿಲ್ಲೆಯ ವ್ಯಾಪ್ತಿಯಲ್ಲಿರುವ ಜಿಲ್ಲಾ ಮತ್ತು ತಾಲ್ಲೂಕು ಸಮಿತಿಗಳು ಯಾವುವು?(ವಿವರಗಳ ಪಟ್ಟಿಯೊಂದಿಗೆ ಮಾಹಿತಿ ನೀಡುವುದು)	ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿ 05 ಸ್ಥಾಯಿ ಸಮಿತಿಗಳು ಕಾರ್ಯನಿರ್ವಹಿಸುತ್ತಿದ್ದು, ಜಿಲ್ಲೆಯ ತಾಲ್ಲೂಕು ಪಂಚಾಯತಗಳ ವ್ಯಾಪ್ತಿಯಲ್ಲಿ ಒಟ್ಟು 03 ಸ್ಥಾಯಿ ಸಮಿತಿಗಳು ಇವೆ (ವಿವರಗಳನ್ನು ಅನುಬಂಧ-2ರಲ್ಲಿ ಲಗತ್ತಿಸಿದೆ).

ಸಂಖ್ಯೆ: ಗ್ರಾಅಪಂರಾ 112 ಜಿಪಸ 2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

1649

ಅನುಬಂಧ 1

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 186 ರನ್ವಯ ಜಿಲ್ಲಾ ಪಂಚಾಯತಿಯಲ್ಲಿ 5 ಸ್ಥಾಯಿ ಸಮಿತಿಗಳು ಈ ಕೆಳಕಂಡಂತಿವೆ.

1. ಸಾಮಾನ್ಯ ಸ್ಥಾಯಿ ಸಮಿತಿ
2. ಹಣಕಾಸು ಮತ್ತು ಲೆಕ್ಕಪರಿಶೋಧನೆ ಹಾಗೂ ಯೋಜನಾ ಸಮಿತಿ
3. ಸಾಮಾಜಿಕ ನ್ಯಾಯ ಸಮಿತಿ
4. ಶಿಕ್ಷಣ ಮತ್ತು ಆರೋಗ್ಯ ಸಮಿತಿ ಹಾಗೂ
5. ಕೃಷಿ ಮತ್ತು ಕೈಗಾರಿಕಾ ಸಮಿತಿ

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 148 ರನ್ವಯ ತಾಲ್ಲೂಕು ಪಂಚಾಯತಿಯಲ್ಲಿ 3 ಸ್ಥಾಯಿ ಸಮಿತಿಗಳು ಈ ಕೆಳಕಂಡಂತಿವೆ.

1. ಸಾಮಾನ್ಯ ಸ್ಥಾಯಿ ಸಮಿತಿ
2. ಹಣಕಾಸು ಮತ್ತು ಲೆಕ್ಕಪರಿಶೋಧನೆ ಹಾಗೂ ಯೋಜನಾ ಸಮಿತಿ
3. ಸಾಮಾಜಿಕ ನ್ಯಾಯ ಸಮಿತಿ

ಜಿಲ್ಲಾ ಪಂಚಾಯತಿ ಮಟ್ಟದ ಸಮಿತಿಗಳು

1. ಸಾಮಾನ್ಯ ಸ್ಥಾಯಿ ಸಮಿತಿ

ಈ ಸಮಿತಿಯು ಜಿಲ್ಲಾ ಪಂಚಾಯತಿಯ ಸದಸ್ಯರುಗಳಿಂದ ಆಯ್ಕೆಯಾದ 7 ಸದಸ್ಯರುಗಳನ್ನೊಳಗೊಂಡಿರುತ್ತದೆ. ಈ ಸಮಿತಿಗೆ ಜಿಲ್ಲಾ ಪಂಚಾಯತಿಯ ಉಪಾಧ್ಯಕ್ಷರು ಅಧ್ಯಕ್ಷರಾಗಿರುತ್ತಾರೆ. ಈ ಸಮಿತಿಯ ಸಿಬ್ಬಂದಿ ವಿಷಯಗಳಿಗೆ ಸಂಬಂಧಿಸಿದ ವಿಷಯಗಳನ್ನು, ಸಂಪರ್ಕ, ಕಟ್ಟಡಗಳು, ಗ್ರಾಮೀಣ ಗೃಹ ನಿರ್ಮಾಣ ಮತ್ತು ಪ್ರಕೃತಿ ವಿಕೋಪಗಳಿಗೆ ಸಂಬಂಧಿಸಿದ ವಿಷಯಗಳನ್ನು ಪರಿಶೀಲಿಸುತ್ತದೆ.

2. ಹಣಕಾಸು ಮತ್ತು ಲೆಕ್ಕಪರಿಶೋಧನೆ ಹಾಗೂ ಯೋಜನಾ ಸಮಿತಿ

ಈ ಸಮಿತಿಗೆ ಜಿಲ್ಲಾ ಪಂಚಾಯತಿ ಅಧ್ಯಕ್ಷರು ಅಧ್ಯಕ್ಷರಾಗಿರುತ್ತಾರೆ. ಈ ಸಮಿತಿಯು ಜಿಲ್ಲಾ ಪಂಚಾಯತಿಯ ಸದಸ್ಯರುಗಳಿಂದ ಆಯ್ಕೆಯಾದ 7ನ್ನು ಮೀರದಂತೆ ಸದಸ್ಯರುಗಳನ್ನೊಳಗೊಂಡಿರುತ್ತದೆ. ಈ ಸಮಿತಿಯು ಜಿಲ್ಲಾ ಪಂಚಾಯತಿಗೆ ಸಂಬಂಧಿಸಿದ ಆಯವ್ಯಯ ರೂಪಿಸುವುದು, ಆದಾಯ ಮತ್ತು ವೆಚ್ಚದ ಮೇಲ್ವಿಚಾರಣೆ ಹಾಗೂ ಯೋಜನೆಗಳಿಗೆ ಆಯವ್ಯಯವನ್ನು ನಿಗದಿಗೊಳಿಸುವುದು ಹಾಗೂ ಇತ್ಯಾದಿ.

3. ಸಾಮಾಜಿಕ ನ್ಯಾಯ ಸಮಿತಿ

ಈ ಸಮಿತಿಯಲ್ಲಿ ಜಿಲ್ಲಾ ಪಂಚಾಯತಿಯ ಸದಸ್ಯರುಗಳ ಪೈಕಿಯಿಂದ 7ನ್ನು ಮೀರದಂತೆ ಸದಸ್ಯರುಗಳನ್ನೊಳಗೊಂಡಿರುತ್ತದೆ. ಈ ಸಮಿತಿಯಲ್ಲಿ ಕನಿಷ್ಟ ಒಬ್ಬ ಮಹಿಳಾ ಸದಸ್ಯಳು ಮತ್ತು ಅನುಸೂಚಿತ ಜಾತಿಗಳ ಅಥವಾ ಅನುಸೂಚಿತ ಪಂಗಡಗಳ ಇವುಗಳಲ್ಲಿ ಯಾವುದು ಹೆಚ್ಚಿನ ಜನಸಂಖ್ಯೆಯನ್ನು ಹೊಂದಿರುವುದೋ ಅದರ ಒಬ್ಬ ಸದಸ್ಯನನ್ನು ಒಳಗೊಂಡಿರುತ್ತದೆ. ಈ ಸಮಿತಿಯ ಸದಸ್ಯರುಗಳ ಪೈಕಿ

ಒಬ್ಬರನ್ನು ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿಕೊಳ್ಳಲಾಗುವುದು.ಈ ಸಮಿತಿಯು ಅನುಸೂಚಿತ ಜಾತಿ ಅನುಸೂಚಿತ ಪಂಗಡ ಮತ್ತು ಹಿಂದುಳಿದ ವರ್ಗಗಳ ಶೈಕ್ಷಣಿಕ, ಆರ್ಥಿಕ, ಸಾಮಾಜಿಕ, ಸಾಂಸ್ಕೃತಿಕ ಮತ್ತು ಇತರ ಹಿತಾಸಕ್ತಿಗಳ ಸಂವರ್ಧನೆ ಹಾಗೂ ಮಹಿಳಾ ಮತ್ತು ಮಕ್ಕಳಿಗೆ ಸಾಮಾಜಿಕ ನ್ಯಾಯವನ್ನು ಒದಗಿಸುವುದು.

4. ಶಿಕ್ಷಣ ಮತ್ತು ಆರೋಗ್ಯ ಸಮಿತಿ

ಈ ಸಮಿತಿಯಲ್ಲಿ ಜಿಲ್ಲಾ ಪಂಚಾಯತಿಯ ಸದಸ್ಯರುಗಳ ಪೈಕಿಯಿಂದ 7ನ್ನು ಮೀರದಂತೆ ಸದಸ್ಯರುಗಳನ್ನೊಳಗೊಂಡಿರುತ್ತದೆ. ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿ ಶಿಕ್ಷಣ ನೀತಿ, ಶೈಕ್ಷಣಿಕ ಚಟುವಟಿಕೆ,ವಯಸ್ಕರ ಶಿಕ್ಷಣ, ಆರೋಗ್ಯ ಸೇವೆಗಳು, ಕುಟುಂಬ ಕಲ್ಯಾಣ ಇತರೆ ವಿಷಯಗಳು.

5. ಕೃಷಿ ಮತ್ತು ಕೈಗಾರಿಕಾ ಸಮಿತಿ

ಈ ಸಮಿತಿಯಲ್ಲಿ ಜಿಲ್ಲಾ ಪಂಚಾಯತಿಯ ಸದಸ್ಯರುಗಳ ಪೈಕಿಯಿಂದ 7ನ್ನು ಮೀರದಂತೆ ಸದಸ್ಯರುಗಳನ್ನೊಳಗೊಂಡಿರುತ್ತದೆ. ಇವರುಗಳಲ್ಲಿ ಒಬ್ಬರನ್ನು ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿಕೊಳ್ಳಲಾಗುವುದು. ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಕೃಷಿ, ಪಶು ಸಂಗೋಪನೆ, ಗುಡಿ ಕೈಗಾರಿಕೆಗಳು ಮತ್ತು ಕೈಗಾರಿಕಾ ಅಭಿವೃದ್ಧಿಗೆ ವಿಷಯಗಳು.

ತಾಲ್ಲೂಕು ಪಂಚಾಯತಿ ಮಟ್ಟದ ಸ್ಥಾಯಿ ಸಮಿತಿಗಳು

1. ಸಾಮಾನ್ಯ ಸ್ಥಾಯಿ ಸಮಿತಿ

ಈ ಸ್ಥಾಯಿ ಸಮಿತಿಗೆ ತಾಲ್ಲೂಕು ಪಂಚಾಯತಿಯ ಸದಸ್ಯರುಗಳಿಂದ ಅಧ್ಯಕ್ಷನನ್ನು ಸೇರಿದಂತೆ 6ನ್ನು ಮೀರದಂತೆ ಸದಸ್ಯರುಗಳನ್ನೊಳಗೊಂಡಿರುತ್ತದೆ. ಸಾಮಾನ್ಯ ಸಮಿತಿಗೆ ತಾಲ್ಲೂಕು ಪಂಚಾಯತಿಯ ಉಪಾಧ್ಯಕ್ಷನು ಅಧ್ಯಕ್ಷನಾಗಿರುತ್ತಾನೆ. ಈ ಸಮಿತಿಯು ಸಿಬ್ಬಂದಿ ವಿಷಯಗಳನ್ನು, ಸಂಪರ್ಕ, ಕಟ್ಟಡಗಳು, ಗ್ರಾಮೀಣ ಗೃಹ ನಿರ್ಮಾಣ ಮತ್ತು ಪ್ರಕೃತಿ ವಿಕೋಪಗಳಿಗೆ ಸಂಬಂಧಿಸಿದ ವಿಷಯಗಳನ್ನು ಪರಿಶೀಲಿಸುತ್ತದೆ.

2. ಹಣಕಾಸು ಮತ್ತು ಲೆಕ್ಕಪರಿಶೋಧನೆ ಹಾಗೂ ಯೋಜನಾ ಸಮಿತಿ

ಈ ಸ್ಥಾಯಿ ಸಮಿತಿಗೆ ತಾಲ್ಲೂಕು ಪಂಚಾಯತಿಯ ಸದಸ್ಯರುಗಳಿಂದ ಅಧ್ಯಕ್ಷನನ್ನು ಸೇರಿದಂತೆ 6ನ್ನು ಮೀರದಂತೆ ಸದಸ್ಯರುಗಳನ್ನೊಳಗೊಂಡಿರುತ್ತದೆ. ತಾಲ್ಲೂಕು ಪಂಚಾಯತಿ ಅಧ್ಯಕ್ಷರು ಈ ಸಮಿತಿಗೆ ಅಧ್ಯಕ್ಷರಾಗಿರುತ್ತಾರೆ. ಈ ಸಮಿತಿಯು ತಾಲ್ಲೂಕು ಪಂಚಾಯತಿಗೆ ಸಂಬಂಧಿಸಿದ ಆಯವ್ಯಯ ರೂಪಿಸುವುದು, ಆದಾಯ ಮತ್ತು ವೆಚ್ಚದ ಮೇಲ್ವಿಚಾರಣೆ ಹಾಗೂ ಯೋಜನೆಗಳಿಗೆ ಆಯವ್ಯಯವನ್ನು ನಿಗದಿಗೊಳಿಸುವುದು ಹಾಗೂ ಇತ್ಯಾದಿ.

3. ಸಾಮಾಜಿಕ ನ್ಯಾಯ ಸಮಿತಿ

ಈ ಸ್ಥಾಯಿ ಸಮಿತಿಗೆ ತಾಲ್ಲೂಕು ಪಂಚಾಯತಿಯ ಸದಸ್ಯರುಗಳಿಂದ ಅಧ್ಯಕ್ಷನನ್ನು ಸೇರಿದಂತೆ 6ನ್ನು ಮೀರದಂತೆ ಸದಸ್ಯರುಗಳನ್ನೊಳಗೊಂಡಿರುತ್ತದೆ. ಈ ಸಮಿತಿಯಲ್ಲಿ ಕನಿಷ್ಟ ಒಬ್ಬ ಮಹಿಳಾ ಸದಸ್ಯಳು ಮತ್ತು ಅನುಸೂಚಿತ ಜಾತಿಗಳ ಅಥವಾ ಅನುಸೂಚಿತ ಪಂಗಡಗಳ ಇವುಗಳಲ್ಲಿ ಯಾವುದು ಹೆಚ್ಚಿನ

ಜನಸಂಖ್ಯೆಯನ್ನು ಹೊಂದಿರುವುದೋ ಅದರ ಒಬ್ಬ ಸದಸ್ಯನನ್ನು ಒಳಗೊಂಡಿರುತ್ತದೆ. ಈ ಸಮಿತಿಯ ಸದಸ್ಯರುಗಳ ಪೈಕಿ ಒಬ್ಬರನ್ನು ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿಕೊಳ್ಳಲಾಗುವುದು.ಈ ಸಮಿತಿಯು ಅನುಸೂಚಿತ ಜಾತಿ ಅನುಸೂಚಿತ ಪಂಗಡ ಮತ್ತು ಹಿಂದುಳಿದ ವರ್ಗಗಳ ಶೈಕ್ಷಣಿಕ, ಆರ್ಥಿಕ, ಸಾಮಾಜಿಕ,ಸಾಂಸ್ಕೃತಿಕ ಮತ್ತು ಇತರ ಹಿತಾಸಕ್ತಿಗಳ ಸಂವರ್ಧನೆ ಹಾಗೂ ಮಹಿಳಾ ಮತ್ತು ಮಕ್ಕಳಿಗೆ ಸಾಮಾಜಿಕ ನ್ಯಾಯವನ್ನು ಒದಗಿಸುವುದು.

ಫಲಾನುಭವಿಗಳ ಆಯ್ಕೆಗೆ ಸಂಬಂಧಿಸಿದಂತೆ ವಿವಿಧ ಇಲಾಖೆಗಳ ,ನಿಗಮಗಳ, ಮಂಡಳಿಗಳ ಸಮಿತಿಗಳು ಇರುತ್ತವೆ (ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಡಾ. ಬಿ. ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪಶು ಪಾಲನೆ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ, ಜಿಲ್ಲಾ ವಸತಿ ಸಮಿತಿ, ಜಿಲ್ಲಾ ಜಮೀನು ಖರೀದಿ ಸಮಿತಿ, ತಾಲ್ಲೂಕು ಜಾಗೃತ ಸಮಿತಿ ಇತ್ಯಾದಿ). ಪ್ರಮುಖವಾಗಿ ವೈಯಕ್ತಿಕ ಫಲಾನುಭವಿಗಳ ಆಯ್ಕೆಯನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 3ರಂತೆ ಗ್ರಾಮ ಸಭೆಯಲ್ಲಿ ನಡೆಸಲಾಗುವುದು.

1649

ಅನುಬಂಧ 2

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 186ರಂತೆ ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಒಟ್ಟು 05 ಸ್ಥಾಯಿ ಸಮಿತಿಗಳು ಇದೆ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 187 ಹಾಗೂ 188ರಂತೆ ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ 05 ಸ್ಥಾಯಿ ಸಮಿತಿಗಳು ಕಾರ್ಯನಿರ್ವಹಿಸುತ್ತಿದ್ದು, ವಿವರ ಕೆಳಗಿನಂತೆ ಇದೆ.

1) ಸಾಮಾನ್ಯ ಸ್ಥಾಯಿ ಸಮಿತಿ
2) ಹಣಕಾಸು ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ
3) ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ
4) ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ
5) ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ

ದಕ್ಷಿಣ ಕನ್ನಡ ಜಿಲ್ಲೆಯ ತಾಲೂಕು ಪಂಚಾಯತ್ ವ್ಯಾಪ್ತಿಯಲ್ಲಿ ಒಟ್ಟು 03 ಸ್ಥಾಯಿ ಸಮಿತಿಗಳು ಇದೆ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 148 ಹಾಗೂ 149ರಂತೆ ದಕ್ಷಿಣ ಕನ್ನಡ ಜಿಲ್ಲೆಯ ತಾಲೂಕು ಪಂಚಾಯತ್ ವ್ಯಾಪ್ತಿಯಲ್ಲಿ 03 ಸ್ಥಾಯಿ ಸಮಿತಿಗಳು ಕಾರ್ಯನಿರ್ವಹಿಸುತ್ತಿದ್ದು, ವಿವರ ಕೆಳಗಿನಂತೆ ಇದೆ.

1) ಸಾಮಾನ್ಯ ಸ್ಥಾಯಿ ಸಮಿತಿ
2) ಹಣಕಾಸು ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ
3) ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಜಿಲ್ಲಾ/ತಾಲೂಕು ಪಂಚಾಯತ್ ವ್ಯಾಪ್ತಿಯಲ್ಲಿ ಜೈವಿಕ ವೈವಿಧ್ಯ ಅಧಿನಿಯಮ 2002ರ ಪರಿಚ್ಛೇದ 41(1)ರನ್ವಯ ಜೀವವೈವಿಧ್ಯ ನಿರ್ವಹಣಾ ಸಮಿತಿಯನ್ನು ರಚಿಸಲಾಗಿದೆ.

ಜಿಲ್ಲಾ ಪಂಚಾಯತ್ ಮತ್ತು ತಾಲೂಕು ಪಂಚಾಯತ್ ವ್ಯಾಪ್ತಿಯಲ್ಲಿ ಯಾವುದೇ ಫಲಾನುಭವಿಗಳ ಆಯ್ಕೆ ಇರುವುದಿಲ್ಲ.

ಕರ್ನಾಟಕ ವಿಧಾನ ಸಭೆ

ಸದಸ್ಯರ ಹೆಸರು	:	ಶ್ರೀ ಕುಮಾರಸ್ವಾಮಿ ಹೆಚ್.ಕೆ (ಸಕಲೇಶಪುರ)
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1654
ಉತ್ತರಿಸುವ ಸಚಿವರು	:	ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು
ಉತ್ತರಿಸಬೇಕಾದ ದಿನಾಂಕ	:	10.03.2021

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಕಳೆದ ಮೂರು ವರ್ಷಗಳಿಂದ ಇಲ್ಲಿಯವರೆಗೆ ರಾಜ್ಯದಲ್ಲಿ ಕೈಮಗ್ಗ ಮತ್ತು ಜವಳಿ ಇಲಾಖೆ ಯಿಂದ ವಿವಿಧ ಯೋಜನೆ ಗಳಡಿಯಲ್ಲಿ ಅನುಷ್ಠಾನಗೊಳಿಸಲಾಗುತ್ತಿರುವ ಯೋಜನೆ ಗಳು ಯಾವುವು (ಸಂಪೂರ್ಣ ಮಾಹಿತಿ ನೀಡುವುದು);	ಕಳೆದ ಮೂರು ವರ್ಷಗಳಿಂದ ಕೈಮಗ್ಗ ಮತ್ತು ಜವಳಿ ಇಲಾಖೆಯ ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ಯೋಜನೆಗಳ ವಿವರ ಈ ಕೆಳಕಂಡಂತಿರುತ್ತದೆ:- ನೇಕಾರರ ವಿಶೇಷ ಪ್ಯಾಕೇಜ್ ಯೋಜನೆಯ ಉಪ ಕಾಂಪೋನೆಂಟ್ ಗಳು • ಕೈಮಗ್ಗ ನೇಕಾರರಿಗೆ ನೇಕಾರ ಸಮ್ಮಾನ್ ಯೋಜನೆ. • ಕೋವಿಡ್-19 ಪ್ರಯುಕ್ತ ವಿದ್ಯುತ್ ಮಗ್ಗ ನೇಕಾರರಿಗೆ ಒಂದು ಬಾರಿಯ ಆರ್ಥಿಕ ಬೆಂಬಲ ನೀಡುವ ಯೋಜನೆ. • ನೇಕಾರರ ಕಲ್ಯಾಣಕ್ಕಾಗಿ ಗುಂಪು ವಿಮಾ ಯೋಜನೆ, ವೈದ್ಯಕೀಯ ವೆಚ್ಚ ಮರುಪಾವತಿ, ನೇಕಾರರ ಅಂತ್ಯ ಸಂಸ್ಕಾರಕ್ಕಾಗಿ ಸಹಾಯಧನ, ಕೈಮಗ್ಗ ನೇಕಾರರಿಗೆ ತರಬೇತಿ (ಸ್ಟೈಫಂಡ್), ಬಡ್ಡಿ ಸಹಾಯಧನ, ಹೊಸ ವಿನ್ಯಾಸ ಮತ್ತು ಪ್ರವೃತ್ತಿ (ಪ್ರವಾಸ), ಉಣ್ಣೆವಲಯ ಅಭಿವೃದ್ಧಿ ಯೋಜನೆ, ವಸತಿ ವ ಕಾರ್ಯಾಗಾರ • ಕೈಮಗ್ಗ ಉತ್ಪನ್ನಗಳಿಗೆ ಮಾರಾಟ ಪ್ರೋತ್ಸಾಹನಕ್ಕಾಗಿ ಕೈಮಗ್ಗ ಉತ್ಪನ್ನಗಳಿಗೆ ಮಾರುಕಟ್ಟೆ ಸಹಾಯ (20% ರಿಬೇಟ್), ಜಿಲ್ಲಾ ಮಟ್ಟದ ಕೈಮಗ್ಗ ಮೇಳಗಳು, ಕಚ್ಚಾನೂಲು ಖರೀದಿಗೆ ಪ್ರತಿ ಕೆ.ಜಿ. ಗೆ ರೂ.15/-ರ ಸಹಾಯಧನ • ಪೂರಕ ಉಳಿತಾಯ ಯೋಜನೆಯಾದ ಕೈಮಗ್ಗ ನೇಕಾರರಿಗೆ ಮಿತವ್ಯಯ ನಿಧಿ ಯೋಜನೆ • ಮೂಲಭೂತ ಸೌಕರ್ಯಕ್ಕಾಗಿ ಕೈಮಗ್ಗ ವಿಕಾಸ ಯೋಜನೆ, 02 ವಿದ್ಯುತ್ ಮಗ್ಗ ಖರೀದಿಗೆ ಸಹಾಯಧನ, ಎಲೆಕ್ಟ್ರಾನಿಕ್ ಜಕಾರ್ಡ್ ಹಾಗೂ ನ್ಯೂಮ್ಯಾಟಿಕ್ ಸೌಲಭ್ಯ ಒದಗಿಸುವುದು, ಸಾಮಾನ್ಯ ಸೌಲಭ್ಯ ಕೇಂದ್ರ, ಮಿನಿ ಪವರ್ ಲೂಮ್ ಪಾರ್ಕ್, ನಿಧಿ ಯೋಜನೆ, ನೇಕಾರ ಕಾಲೋನಿಗಳಿಗೆ ಮೂಲಭೂತ ಸೌಲಭ್ಯ ಮತ್ತು ಎಕ್ಸ್ ಪ್ರೆಸ್ ಫೀಡರ್.

		• ವಿದ್ಯುತ್ ಮಗ್ಗ ಘಟಕಗಳಿಗೆ ಪ್ರತಿ ಯೂನಿಟ್ ಗೆ ರೂ.1.25 ರಂತೆ ರಿಯಾಯಿತಿ ದರದಲ್ಲಿ ವಿದ್ಯುತ್ ಪೂರೈಕೆ • ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪ ಯೋಜನೆ. **ನೇಕಾರರ ಸಾಲ ಮನ್ನಾ ಯೋಜನೆ:-** ನೇಕಾರಿಕೆ ಉದ್ದೇಶಕ್ಕಾಗಿ ನೇಕಾರರ ಸಹಕಾರ ಸಂಘಗಳು ಹಾಗೂ ಇತರೆ ಸಹಕಾರಿ ಬ್ಯಾಂಕ್ ಗಳಿಂದ ಸಾಲ ಪಡೆದಿರುವ ಅರ್ಹ ನೇಕಾರರ ಸಾಲಮನ್ನಾ. **ಜವಳಿ ನೀತಿ ಅಡಿಯಲ್ಲಿನ ಯೋಜನೆಗಳು:-** • ಬಂಡವಾಳ ಸಹಾಯಧನ. • ಬಡ್ಡಿ ಸಹಾಯಧನ • ವಿದ್ಯುಚ್ಛಕ್ತಿ ಮರುಪಾವತಿ ಸಹಾಯಧನ • ಮುದ್ರಾಂಕ ಶುಲ್ಕ ಮರುಪಾವತಿ(ಜವಳಿ ನೀತಿ 2013-18 ರನ್ವಯ) • ಮುದ್ರಾಂಕ ಶುಲ್ಕ ವಿನಾಯಿತಿ ಮತ್ತು ನೋಂದಣಿ ಶುಲ್ಕ ರಿಯಾಯಿತಿ (ನೂತನ ಜವಳಿ ಹಾಗೂ ಸಿದ್ಧ ಉಡುಪು ನೀತಿ 2019-24 ರನ್ವಯ) • ಪ್ರವೇಶ ತೆರಿಗೆ ಮರುಪಾವತಿ ಸಹಾಯಧನ (ಜವಳಿ ನೀತಿ 2013-18 ರನ್ವಯ) • ಇ.ಎಸ್.ಐ&ಇ.ಪಿ.ಎಫ್ ಮರುಪಾವತಿ ಸಹಾಯಧನ. • ವೇತನ ಸಹಾಯಧನ
ಆ)	ಈ ಪೈಕಿ ವಿವಿಧ ಯೋಜನೆಗಳಡಿಯಲ್ಲಿ ಇಲ್ಲಿಯವರೆಗೆ ಒದಗಿಸಿರುವ ಅನುದಾನ ವೆಷ್ಟು ಹಾಗೂ ಒದಗಿಸಿರುವ ಅನುದಾನ ದಲ್ಲಿ ವರ್ಷವಾರು ಎಷ್ಟು ಖರ್ಚು ಮಾಡ ಲಾಗಿದೆ (ವಿಧಾನಸಭಾ ಕ್ಷೇತ್ರವಾರು ಕಳೆದ ಮೂರು ವರ್ಷಗಳ ಸಂಪೂರ್ಣ ಮಾಹಿತಿ ನೀಡುವುದು);	ಅನುಬಂಧ-1 ಹಾಗೂ ಅನುಬಂಧ-2 ರಲ್ಲಿ ಒದಗಿಸಿದೆ.
ಇ)	ಇಲ್ಲಿಯವರೆಗೆ ನೀಡಿರುವ ಸಹಾಯಧನ ವನ್ನು ಯಾವ ಯಾವ ಯೋಜನೆಗಳ ಅಡಿ ಯಲ್ಲಿ ಯಾವ ಯಾವ ಸಂಸ್ಥೆಗಳಿಗೆ ನೀಡಲಾಗಿದೆ (ಕ್ಷೇತ್ರವಾರು ಕಳೆದ ಮೂರು ವರ್ಷಗಳ ಸಂಪೂರ್ಣ ಮಾಹಿತಿ ನೀಡುವುದು);	ಅನುಬಂಧ-3 ರಲ್ಲಿ ಒದಗಿಸಿದೆ.
ಈ)	ನೇಕಾರರಿಗೆ ವಿವಿಧ ಯೋಜನೆಗಳಡಿಯಲ್ಲಿ ಕಳೆದ 03 ವರ್ಷಗಳಿಂದ ಇಲ್ಲಿಯವರೆಗೆ ನೀಡಿರುವ ಸಹಾಯಧನವೆಷ್ಟು (ಸಹಾಯಧನ ವನ್ನು ಯೋಜನಾವಾರು ಹಾಗೂ ಕ್ಷೇತ್ರವಾರು ಸಂಪೂರ್ಣ ಮಾಹಿತಿ ನೀಡುವುದು);	ಅನುಬಂಧ-4 ರಲ್ಲಿ ಒದಗಿಸಿದೆ.

ಸಂ: CI 60 JAKE 2021

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1623
ಸದಸ್ಯರ ಹೆಸರು : ಶ್ರೀ ಬಾಲಕೃಷ್ಣ ಸಿ.ಎನ್.
ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು
ಉತ್ತರಿಸುವ ದಿನಾಂಕ : 10-03-2021

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರಗಳು</th></tr>
<tr><td>ಅ)</td><td>ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ನಿಗಮ ಹುಬ್ಬಳ್ಳಿ ಮತ್ತು ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ನಿಗಮ ಗುಲ್ಬರ್ಗ ನಿಗಮಗಳಡಿಯಲ್ಲಿ ಒಟ್ಟಾರೆ ಎಷ್ಟು ಸಾರಿಗೆ ಬಸ್ಸುಗಳು ಪ್ರತಿನಿತ್ಯ ಮಾರ್ಗಗಳಲ್ಲಿ ಸಂಚರಿಸುತ್ತಿವೆ (ನಿಗಮಗಳ ವ್ಯಾಪ್ತಿಯ ಜಿಲ್ಲೆಯಲ್ಲಿರುವ ವಿಭಾಗಗಳು ಹಾಗೂ ಘಟಕಗಳವಾರು ಸಂಚಾರಿ ಮಾರ್ಗಗಳ ಸಂಪೂರ್ಣ ಮಾಹಿತಿ ನೀಡುವುದು)</td><td>ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ನಿಗಮ, ಹುಬ್ಬಳ್ಳಿ ಮತ್ತು ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ನಿಗಮ, ಕಲಬುರಗಿ, ಈ ನಿಗಮಗಳಡಿಯಲ್ಲಿ ಒಟ್ಟಾರೆ ಸಂಚರಿಸುತ್ತಿರುವ ಸಾರಿಗೆ ಬಸ್‌ಗಳ ಪ್ರತಿನಿತ್ಯ ಮಾರ್ಗಗಳ ಸಂಖ್ಯೆ ಈ ಕೆಳಕಂಡಂತಿದೆ:
<table>
<tr><td>ಕ.ರಾ.ರ.ಸಾ.ನಿಗಮ</td><td>5550</td></tr>
<tr><td>ವಾ.ಕ.ರ.ಸಾ.ಸಂಸ್ಥೆ</td><td>3788</td></tr>
<tr><td>ಈ.ಕ.ರ.ಸಾ.ಸಂಸ್ಥೆ</td><td>3433</td></tr>
<tr><td>ಒಟ್ಟು</td><td>12771</td></tr>
</table>
ವಿಭಾಗಗಳು ಹಾಗೂ ಘಟಕಗಳವಾರು ಸಂಚಾರಿ ಮಾರ್ಗಗಳ ಮಾಹಿತಿ ಅನುಬಂಧ-1 ರಲ್ಲಿ ನೀಡಲಾಗಿದೆ.</td></tr>
<tr><td>ಆ)</td><td>ಕಳೆದ ಮೂರು ವರ್ಷಗಳಿಂದ ಈ ನಿಗಮಗಳ ವ್ಯಾಪ್ತಿಯ ಜಿಲ್ಲೆಗಳಲ್ಲಿರುವ ವಿಭಾಗಗಳು ಹಾಗೂ ಘಟಕಗಳವಾರು ಸಂಸ್ಥೆಗಳು ಗಳಿಸುತ್ತಿರುವ ಲಾಭ/ನಷ್ಟವೆಷ್ಟು (ಸಂಪೂರ್ಣ ಮಾಹಿತಿ ನೀಡುವುದು)</td><td>ಸಾರಿಗೆ ಸಂಸ್ಥೆಗಳು ಕಳೆದ 3 ವರ್ಷಗಳಲ್ಲಿ ಅನುಭವಿಸಿದ ಆರ್ಥಿಕ ಲಾಭ/ನಷ್ಟದ ವಿವರ ಈ ಕೆಳಕಂಡಂತಿದೆ:
(ರೂ. ಕೋಟಿಗಳಲ್ಲಿ)
<table>
<tr><th>ಸಂಸ್ಥೆ</th><th>2017-18</th><th>2018-19</th><th>2019-20</th></tr>
<tr><td>ಕ.ರಾ.ರ.ಸಾ.ನಿಗಮ</td><td>4.50 (ಲಾಭ)</td><td>134.93 (ನಷ್ಟ)</td><td>157.56 (ನಷ್ಟ)</td></tr>
<tr><td>ವಾ.ಕ.ರ.ಸಾ.ಸಂಸ್ಥೆ</td><td>71.98 (ನಷ್ಟ)</td><td>89.06 (ನಷ್ಟ)</td><td>186.46 (ನಷ್ಟ)</td></tr>
<tr><td>ಈ.ಕ.ರ.ಸಾ.ಸಂಸ್ಥೆ</td><td>33.31 (ನಷ್ಟ)</td><td>68.23 (ನಷ್ಟ)</td><td>89.27 (ನಷ್ಟ)</td></tr>
</table>
ಲಾಭ/ನಷ್ಟದ ವಿವರಗಳನ್ನು <u>ಅನುಬಂಧ-2</u>ರಲ್ಲಿ ನೀಡಲಾಗಿದೆ.</td></tr>
<tr><td>ಇ)</td><td>ಒಂದು ವೇಳೆ, ಈ ನಿಗಮಗಳು ನಷ್ಟ ಅನುಭವಿಸುತ್ತಿದ್ದಲ್ಲಿ, ನಷ್ಟ ಅನುಭವಿಸಲು ನಿಖರವಾದ ಕಾರಣಗಳೇನು; ಈ ನಿಗಮಗಳನ್ನು ನಷ್ಟದಿಂದ ಪಾರು ಮಾಡಿ ಲಾಭ ಗಳಿಸುವಂತೆ ಮಾಡಲು ಸರ್ಕಾರವು ಕೈಗೊಂಡಿರುವ ಮಾರ್ಗೋಪಾಯಗಳೇನು (ಸಂಪೂರ್ಣ ಮಾಹಿತಿ ನೀಡುವುದು);</td><td>ಈ ನಿಗಮಗಳು ನಷ್ಟ ಅನುಭವಿಸಲು ನಿಗಮವಾರು ಕಾರಣಗಳನ್ನು <u>ಅನುಬಂಧ -3</u>ರಲ್ಲಿ ಹಾಗೂ ನಷ್ಟದಿಂದ ಪಾರು ಮಾಡಿ ಲಾಭ ಗಳಿಸುವಂತೆ ಮಾಡಲು ಕೈಗೊಂಡಿರುವ ಮಾರ್ಗೋಪಾಯಗಳ ನಿಗಮಾರು ಮಾಹಿತಿ <u>ಅನುಬಂಧ-4</u>ರಲ್ಲಿ ನೀಡಲಾಗಿದೆ.</td></tr>
</table>

...2

ಉ)	ಈ ನಿಗಮಗಳಿಂದ ಗ್ರಾಮೀಣ ಪ್ರದೇಶಗಳಲ್ಲಿ ಶಾಲಾ/ಕಾಲೇಜಿನ ವಿದ್ಯಾರ್ಥಿಗಳಿಗೆ, ಗಾರ್ಮೆಂಟ್ ಮತ್ತು ಕಾರ್ಖಾನೆಗಳಿಗೆ ತೆರಳುವ ಹೆಣ್ಣು ಮಕ್ಕಳಿಗೆ ರಿಯಾಯಿತಿ ದರದಲ್ಲಿ ಹೋಗಿ-ಬರುವ ಬಸ್ ಪಾಸ್ ವ್ಯವಸ್ಥೆ ಮಾಡುವ ಬಗ್ಗೆ ಹಾಗೂ ಸಾರ್ವಜನಿಕರ ಸುಗಮ ಪ್ರಯಾಣಕ್ಕೆ ಉತ್ತಮ ಬಸ್ ಸೌಕರ್ಯವನ್ನು ಒದಗಿಸಲು ಸರ್ಕಾರ ಹಮ್ಮಿಕೊಂಡಿರುವ ಯೋಜನೆಗಳೇನು; (ಸಂಪೂರ್ಣ ವಿವರ ನೀಡುವುದು)	ಸಾರಿಗೆ ನಿಗಮಗಳು ರಾಜ್ಯದ ಎಲ್ಲಾ ಭಾಗಗಳಲ್ಲಿನ ವಿದ್ಯಾರ್ಥಿಗಳಿಗೆ ರಿಯಾಯಿತಿ/ಉಚಿತ ಬಸ್ ಪಾಸ್ ವಿತರಣೆ ಮಾಡುತ್ತಿವೆ. 1 ರಿಂದ 07 ನೇ ತರಗತಿವರೆಗಿನ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್, ಪ್ರೌಢಶಾಲಾ ಹೆಣ್ಣುಮಕ್ಕಳಿಗೆ ಶೇ.25 ರಷ್ಟು ರಿಯಾಯಿತಿ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಎಲ್ಲಾ ತರಗತಿಗಳ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ವಿತರಣೆ ಮಾಡಲಾಗುತ್ತಿದೆ. ಈ ಪಾಸು ವಿತರಣೆಯ ಸಂಬಂಧದಲ್ಲಿ ರಾಜ್ಯಾದ್ಯಂತ ಏಕರೂಪವಾದ ಮಾನದಂಡಗಳನ್ನು ಅನುಸರಿಸಲಾಗುತ್ತಿದೆ. ಸಾರ್ವಜನಿಕರ ಸುಗಮ ಪ್ರಯಾಣಕ್ಕೆ ಉತ್ತಮ ಬಸ್ ಸೌಕರ್ಯವನ್ನು ಒದಗಿಸಲು/ಒದಗಿಸುತ್ತಿರುವ ವಿವರಗಳನ್ನು **ಅನುಬಂಧ-5**ರಲ್ಲಿ ನೀಡಲಾಗಿದೆ.
ಊ)	2020-21ನೇ ಸಾಲಿನಲ್ಲಿ ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಮೇಲ್ಕಂಡ ವಿವಿಧ ನಿಗಮಗಳಿಂದ ಗ್ರಾಮೀಣ ಪ್ರದೇಶಗಳಲ್ಲಿನ ಶಾಲಾ/ಕಾಲೇಜಿನ ವಿದ್ಯಾರ್ಥಿಗಳಿಗೆ, ಗಾರ್ಮೆಂಟ್ ಮತ್ತು ಕಾರ್ಖಾನೆಗಳಿಗೆ ತೆರಳುವ ಹೆಣ್ಣು ಮಕ್ಕಳಿಗೆ ರಿಯಾಯಿತಿ ದರದಲ್ಲಿ ಹೋಗಿ-ಬರುವ ಬಸ್ ಪಾಸ್ ವ್ಯವಸ್ಥೆ ಮಾಡುವ ಬಗ್ಗೆ ಹಾಗೂ ಸಾರ್ವಜನಿಕರ ಸುಗಮ ಪ್ರಯಾಣಕ್ಕೆ ಉತ್ತಮ ಬಸ್ ಸೌಕರ್ಯವನ್ನು ಒದಗಿಸಲು ಸರ್ಕಾರ ಹಮ್ಮಿಕೊಂಡಿರುವ ಯೋಜನೆಗಳೇನು (ಸಂಪೂರ್ಣ ವಿವರ ನೀಡುವುದು)	

ಸಂಖ್ಯೆ: ಟಿಡಿ 81 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

KSRTC

1623

<u>ಅನುಬಂಧ-1</u>

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ

ವಿಭಾಗಗಳ ಮತ್ತು ಘಟಕವಾರು ಮಾರ್ಗಗಳ ವಿವರ

ಜಿಲ್ಲೆ	ವಿಭಾಗ	ಘಟಕ	ಪ್ರತಿನಿತ್ಯ ಸಂಚರಿಸುತ್ತಿರುವ ಬಸ್/ ಅನುಸೂಚಿಗಳ ಸಂಖ್ಯೆ	ಪ್ರತಿನಿತ್ಯ ಸಂಚರಿಸುವ ಮಾರ್ಗಗಳ ಸಂಖ್ಯೆ
ಬೆಂಗಳೂರು ನಗರ	ಬೆಂಗಳೂರು ಕೇಂದ್ರ	ಘಟಕ-1	131	43
ಬೆಂಗಳೂರು ನಗರ	ಬೆಂಗಳೂರು ಕೇಂದ್ರ	ಘಟಕ-2	91	26
ಬೆಂಗಳೂರು ನಗರ	ಬೆಂಗಳೂರು ಕೇಂದ್ರ	ಘಟಕ-4	85	28
ಬೆಂಗಳೂರು ನಗರ	ಬೆಂಗಳೂರು ಕೇಂದ್ರ	ಘಟಕ-5	108	33
ಬೆಂಗಳೂರು ನಗರ	ಬೆಂಗಳೂರು ಕೇಂದ್ರ	ಘಟಕ-6	106	30
ಬೆಂಗಳೂರು ಗ್ರಾಮಾಂತರ	ಬೆಂಗಳೂರು ಕೇಂದ್ರ	ನೆಲಮಂಗಲ	74	35
ಒಟ್ಟು			595	195
ಬೆಂಗಳೂರು ಗ್ರಾಮಾಂತರ	ರಾಮನಗರ	ಅನೇಕಲ್	68	47
ರಾಮನಗರ	ರಾಮನಗರ	ಕನಕಪುರ	83	98
ರಾಮನಗರ	ರಾಮನಗರ	ಚನ್ನಪಟ್ಟಣ	79	66
ರಾಮನಗರ	ರಾಮನಗರ	ಹಾರೋಹಳ್ಳಿ	62	51
ರಾಮನಗರ	ರಾಮನಗರ	ರಾಮನಗರ	84	71
ರಾಮನಗರ	ರಾಮನಗರ	ಮಾಗಡಿ	74	58
			450	391
ತುಮಕೂರು	ತುಮಕೂರು	ತುಮಕೂರು ಘಟಕ-1	93	59
ತುಮಕೂರು	ತುಮಕೂರು	ತುಮಕೂರು ಘಟಕ-2	112	72
ತುಮಕೂರು	ತುಮಕೂರು	ಕುಣಿಗಲ್	81	73
ತುಮಕೂರು	ತುಮಕೂರು	ತುರುವೇಕೆರೆ	92	60
ತುಮಕೂರು	ತುಮಕೂರು	ತಿಪಟೂರು	68	32
ತುಮಕೂರು	ತುಮಕೂರು	ಮಧುಗಿರಿ	55	25
ತುಮಕೂರು	ತುಮಕೂರು	ಸಿರಾ	75	46
ಒಟ್ಟು			576	367
ಕೋಲಾರ	ಕೋಲಾರ	ಕೋಲಾರ	133	107
ಕೋಲಾರ	ಕೋಲಾರ	ಕೆ.ಜಿ.ಎಫ್	110	70
ಕೋಲಾರ	ಕೋಲಾರ	ಶ್ರೀನಿವಾಸಪುರ	94	78
ಕೋಲಾರ	ಕೋಲಾರ	ಮುಾಲೂರು	80	61
ಕೋಲಾರ	ಕೋಲಾರ	ಮುಳಬಾಗಿಲು	86	52
ಒಟ್ಟು			503	368
ಚಿಕ್ಕಬಳ್ಳಾಪುರ	ಚಿಕ್ಕಬಳ್ಳಾಪುರ	ಚಿಕ್ಕಬಳ್ಳಾಪುರ	132	76
ಚಿಕ್ಕಬಳ್ಳಾಪುರ	ಚಿಕ್ಕಬಳ್ಳಾಪುರ	ಚಿಂತಾಮಣಿ	128	81
ಚಿಕ್ಕಬಳ್ಳಾಪುರ	ಚಿಕ್ಕಬಳ್ಳಾಪುರ	ಬಾಗೇಪಲ್ಲಿ	96	55
ಚಿಕ್ಕಬಳ್ಳಾಪುರ	ಚಿಕ್ಕಬಳ್ಳಾಪುರ	ಗೌರಿಬಿದನೂರು	94	63
ಚಿಕ್ಕಬಳ್ಳಾಪುರ	ಚಿಕ್ಕಬಳ್ಳಾಪುರ	ದೊಡ್ಡಬಳ್ಳಾಪುರ	90	60
ಒಟ್ಟು			540	335

ಮೈಸೂರು	ಮೈಸೂರು ನಗರ	ಬನ್ನಿಮಂಟಪ	84	72
ಮೈಸೂರು	ಮೈಸೂರು ನಗರ	ಕುವೆಂಪುನಗರ	109	114
ಮೈಸೂರು	ಮೈಸೂರು ನಗರ	ಸಾತಗಳ್ಳಿ	97	117
ಮೈಸೂರು	ಮೈಸೂರು ನಗರ	ವಿಜಯನಗರ	88	125
ಒಟ್ಟು			378	428
ಮೈಸೂರು	ಮೈಸೂರು ಗ್ರಾಮಾಂತರ	ಗ್ರಾಮಾಂತರ ಘಟಕ – 1	119	78
ಮೈಸೂರು	ಮೈಸೂರು ಗ್ರಾಮಾಂತರ	ಗ್ರಾಮಾಂತರ ಘಟಕ – 2	88	22
ಮೈಸೂರು	ಮೈಸೂರು ಗ್ರಾಮಾಂತರ	ಗ್ರಾಮಾಂತರ ಘಟಕ – 3	77	12
ಮೈಸೂರು	ಮೈಸೂರು ಗ್ರಾಮಾಂತರ	ಕೆ.ಆರ್. ನಗರ	106	129
ಮೈಸೂರು	ಮೈಸೂರು ಗ್ರಾಮಾಂತರ	ಹುಣಸೂರು	97	121
ಮೈಸೂರು	ಮೈಸೂರು ಗ್ರಾಮಾಂತರ	ಹೆಚ್.ಡಿ.ಕೋಟೆ	92	84
ಮೈಸೂರು	ಮೈಸೂರು ಗ್ರಾಮಾಂತರ	ಪಿರಿಯಾಪಟ್ಟಣ	61	85
ಒಟ್ಟು			640	531
ಮಂಡ್ಯ	ಮಂಡ್ಯ	ಮಂಡ್ಯ	95	145
ಮಂಡ್ಯ	ಮಂಡ್ಯ	ಮದ್ದೂರು	73	77
ಮಂಡ್ಯ	ಮಂಡ್ಯ	ಮಳವಳ್ಳಿ	65	75
ಮಂಡ್ಯ	ಮಂಡ್ಯ	ನಾಗಮಂಗಲ	52	59
ಮಂಡ್ಯ	ಮಂಡ್ಯ	ಕೆ.ಆರ್.ಪೇಟೆ	56	63
ಮಂಡ್ಯ	ಮಂಡ್ಯ	ಪಾಂಡವಪುರ	57	36
ಒಟ್ಟು			398	455
ಚಾಮರಾಜನಗರ	ಚಾಮರಾಜನಗರ	ಚಾಮರಾಜನಗರ	110	66
ಚಾಮರಾಜನಗರ	ಚಾಮರಾಜನಗರ	ಗುಂಡ್ಲುಪೇಟೆ	105	62
ಚಾಮರಾಜನಗರ	ಚಾಮರಾಜನಗರ	ಕೊಳ್ಳೇಗಾಲ	107	60
ಮೈಸೂರು	ಚಾಮರಾಜನಗರ	ನಂಜನಗೂಡು	119	79
ಒಟ್ಟು			441	267
ಹಾಸನ	ಹಾಸನ	ಹಾಸನ–1	97	143
ಹಾಸನ	ಹಾಸನ	ಹಾಸನ–2	94	127
ಹಾಸನ	ಹಾಸನ	ಚನ್ನರಾಯಪಟ್ಟಣ	93	116
ಹಾಸನ	ಹಾಸನ	ರಾಮನಾಥಪುರ	71	77
ಹಾಸನ	ಹಾಸನ	ಹೊಳೆನರಸೀಪುರ	88	96
ಹಾಸನ	ಹಾಸನ	ಅರಕಲಗೂಡು	75	83
ಒಟ್ಟು			518	642
ಚಿಕ್ಕಮಗಳೂರು	ಚಿಕ್ಕಮಗಳೂರು	ಚಿಕ್ಕಮಗಳೂರು	113	94
ಚಿಕ್ಕಮಗಳೂರು	ಚಿಕ್ಕಮಗಳೂರು	ಕಡೂರು	79	65
ಚಿಕ್ಕಮಗಳೂರು	ಚಿಕ್ಕಮಗಳೂರು	ಮೂಡಿಗೆರೆ	65	69
ಹಾಸನ	ಚಿಕ್ಕಮಗಳೂರು	ಅರಸೀಕೆರೆ	103	78
ಹಾಸನ	ಚಿಕ್ಕಮಗಳೂರು	ಸಕಲೇಶಪುರ	85	72
ಹಾಸನ	ಚಿಕ್ಕಮಗಳೂರು	ಬೇಲೂರು	38	49
ಒಟ್ಟು			483	427

ದಕ್ಷಿಣ ಕನ್ನಡ	ಮಂಗಳೂರು	ಮಂಗಳೂರು–1	120	26
ದಕ್ಷಿಣ ಕನ್ನಡ	ಮಂಗಳೂರು	ಮಂಗಳೂರು–2	67	18
ದಕ್ಷಿಣ ಕನ್ನಡ	ಮಂಗಳೂರು	ಮಂಗಳೂರು–3	122	43
ದಕ್ಷಿಣ ಕನ್ನಡ	ಮಂಗಳೂರು	ಕುಂದಾಪುರ	86	38
ಉಡುಪಿ	ಮಂಗಳೂರು	ಉಡುಪಿ	84	36
ಒಟ್ಟು			479	161
ದಕ್ಷಿಣ ಕನ್ನಡ	ಪುತ್ತೂರು	ಪುತ್ತೂರು	121	159
ದಕ್ಷಿಣ ಕನ್ನಡ	ಪುತ್ತೂರು	ಧರ್ಮಸ್ಥಳ	128	138
ದಕ್ಷಿಣ ಕನ್ನಡ	ಪುತ್ತೂರು	ಬಿಸಿರೋಡು	101	86
ದಕ್ಷಿಣ ಕನ್ನಡ	ಪುತ್ತೂರು	ಸುಳ್ಯ	58	85
ಕೊಡಗು	ಪುತ್ತೂರು	ಮಡಿಕೇರಿ	106	100
ಒಟ್ಟು			514	568
ದಾವಣಗೆರೆ	ದಾವಣಗೆರೆ	ದಾವಣಗೆರೆ ಘಟಕ–1	145	51
ದಾವಣಗೆರೆ	ದಾವಣಗೆರೆ	ದಾವಣಗೆರೆ ಘಟಕ–1	70	17
ದಾವಣಗೆರೆ	ದಾವಣಗೆರೆ	ಹರಿಹರ	109	31
ಒಟ್ಟು			324	99
ಶಿವಮೊಗ್ಗ	ಶಿವಮೊಗ್ಗ	ಶಿವಮೊಗ್ಗ	135	81
ಶಿವಮೊಗ್ಗ	ಶಿವಮೊಗ್ಗ	ಭದ್ರಾವತಿ	65	32
ಶಿವಮೊಗ್ಗ	ಶಿವಮೊಗ್ಗ	ಸಾಗರ	74	59
ಶಿವಮೊಗ್ಗ	ಶಿವಮೊಗ್ಗ	ಹೊನ್ನಾಳಿ	39	27
ಒಟ್ಟು			313	199
ಚಿತ್ರದುರ್ಗ	ಚಿತ್ರದುರ್ಗ	ಚಿತ್ರದುರ್ಗ	117	35
ಚಿತ್ರದುರ್ಗ	ಚಿತ್ರದುರ್ಗ	ಚಳ್ಳಕೆರೆ	45	24
ಚಿತ್ರದುರ್ಗ	ಚಿತ್ರದುರ್ಗ	ಹೊಸದುರ್ಗ	50	26
ತುಮಕೂರು	ಚಿತ್ರದುರ್ಗ	ಪಾವಗಡ	41	32
ಒಟ್ಟು			253	117
ಕರಾರಸಾ ನಿಗಮ			**7405**	**5550**

NWKRTC: Depotwise/Divisionwise Routes

Depot	No of Routes	Depot	No of Routes
M-1	82	Gadag	87
